ಸಂಪುಟ: 22, ಸಂಚಿಕೆ: 64, ಪುಟಗಳು: 8, ಶನಿವಾರ, 14 ಡಿಸೆಂಬರ್ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು
# ಸಂಜೆ ಮುಗಿಲು
ನೇಣು ಸಾರಥ್ಯದಲ್ಲಿ...
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3


ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines


**ಸುಭಾಷಿತ**

ಸತ್ಯ ಸಾಯುವುದಿಲ್ಲ. ಸಮಯಕ್ಕೆ ಅದು ಸೋತಿದ್ದರು ಒಂದಲ್ಲ ಒಂದು ದಿನ ಸುಳ್ಳನ್ನೇ ಸಾಯಿಸಿ ಗೆದ್ದು ಬೀಗುತ್ತದೆ.

**ಪಂಚಾಂಗ**

(ಶನಿವಾರ 14, ಡಿಸೆಂಬರ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯಣ, ಹಿಮಂತ ಋತು,
- ಮಾರ್ಗಶಿರ ಮಾಸ, ಶುಕ್ಲ ಪಕ್ಷ,
- ಚತುರ್ದಶಿ, ಶನಿವಾರ,
- ರೋಹಿಣಿ ನಕ್ಷತ್ರ.
- ರಾಹುಕಾಲ: 09:26 ರಿಂದ 10:52
- ಗುಳಿಕಕಾಲ: 06:35 ರಿಂದ 08:00
- ಯಮಗಂಡಕಾಲ: 01:43 ರಿಂದ 03:09

## ಸಂಕ್ಷಿಪ್ತ ಸುದ್ದಿ

### ಟೆಕ್ಕಿ ಅತುಲ್ ಪತ್ನಿಗೆ ಖಾಕಿ ನೋಟಿಸ್



**ಬೆಂಗಳೂರು:** ಟೆಕ್ಕಿ ಅತುಲ್ ಆತ್ಮಹತ್ಯೆ ಪ್ರಕರಣದ ತನಿಖೆಯನ್ನು ಮಾರತ್ತಹಳ್ಳಿ ಪೊಲೀಸರು ನಡೆಸುತ್ತಿದ್ದಾರೆ. ಕಳೆದ ಮೂರು ದಿನಗಳಿಂದ ಆರೋಪಿಗಳಿಗಾಗಿ ಉತ್ತರ ಪ್ರದೇಶದಲ್ಲಿ ಬೀಡುಬಿಟ್ಟಿದ್ದು, ತೀವ್ರ ಶೋಧ ನಡೆಸುತ್ತಿದ್ದಾರೆ. ಟೆಕ್ಕಿ ಅತುಲ್ ಮಾರತ್ತಹಳ್ಳಿ ಮಂಜುನಾಥ್ ಲೇಔಟ್‌ನ ತನ್ನ ಮನೆಯಲ್ಲಿ ಆತ್ಮಹತ್ಯೆ ಮಾಡಿಕೊಳ್ಳುವ ಮುನ್ನ ಡೆತ್ ನೋಟ್ ಬರೆದಿಟ್ಟಿದ್ದರು. ಡೆತ್ ನೋಟ್‌ನಲ್ಲಿ ನನ್ನ ಸಾವಿಗೆ ನನ್ನ ಪತ್ನಿ ನಿಖಿತಾ ಹಾಗೂ ಆಕೆಯ ತಾಯಿ, ಸಹೋದರನ ಮೇಲೆ ಆರೋಪ ಮಾಡಿ ಡೆತ್ ನೋಟ್ ಬರೆದಿಟ್ಟು ಸೂಸೈಡ್ ಮಾಡಿಕೊಂಡಿದ್ದರು. ಟೆಕ್ಕಿ ಅತುಲ್ ಸಾವಿಗೆ ಕಾರಣವಾಗಿರೋ ಆರೋಪ ಎದುರಿಸುತ್ತಿರೋ ಆರೋಪಿಗಳನ್ನು ಮಾರತ್ತಹಳ್ಳಿ ಪೊಲೀಸರು ಉತ್ತರ ಪ್ರದೇಶದಲ್ಲಿ ಹುಡುಕಾಟ ನಡೆಸುತ್ತಿದ್ದು, ಇಬ್ಬರನ್ನು ವಶಕ್ಕೆ ಪಡೆದು ತನಿಖೆ ಪುಟ 2

» 3 ದಿನಗಳ ಒಳಗಾಗಿ ವಿಚಾರಣೆಗೆ ಹಾಜರಾಗದಿದ್ರೆ ಬಂಧನ ಸಾಧ್ಯತೆ

### ಶ್ರೀರಂಗಪಟ್ಟಣದ ಬೀದಿ ಬೀದಿಗಳಲ್ಲಿ ಮೊಳಗಲಿದೆ ಹನುಮನಾಮ



**ಶ್ರೀರಂಗಪಟ್ಟಣ:** ನಾಳೆ ಶ್ರೀರಂಗಪಟ್ಟಣದಲ್ಲಿ ಹನುಮಮಾಲಾಧಾರಿಗಳ ಬೃಹತ್ ಸಂಕೀರ್ತನಾ ಯಾತ್ರೆ ನಡೆಯುತ್ತಿರುವ ಹಿನ್ನೆಲೆ ಶ್ರೀರಂಗಪಟ್ಟಣದಲ್ಲಿ ಕೇಸರಿ ಬಂಟಿಂಗ್ಸ್ ಮತ್ತು ಫ್ಲೆಕ್ಸ್‌ಗಳು ರಾರಾಜಿಸುತ್ತಿವೆ. ಯಾತ್ರೆ ಸಾಗುವ ಪಟ್ಟಣದ ಮುಖ್ಯ ಬೀದಿಗೆ ಕೇಸರಿ ಬಂಟಿಂಗ್ಸ್ ಹಾಕಿ ಅಲಂಕಾರ ಮಾಡಲಾಗಿದೆ. ಈ ಸಂಕೀರ್ತನಾ ಯಾತ್ರೆಯಲ್ಲಿ 5 ಸಾವಿರಕ್ಕೂ ಹೆಚ್ಚು ಮಾಲಾಧಾರಿಗಳು ಭಾಗಿಯಾಗಲಿದ್ದಾರೆ. ಗಂಜಾಮ್ ನ ಹನುಮ ದೇಗುಲದಿಂದ ರಂಗನಾಥ ದೇಗುಲದವರೆಗೂ 5ಕಿಮೀ ಸಂಕೀರ್ತನಾ ಯಾತ್ರೆ ನಡೆಯಲಿದೆ. ಪಟ್ಟಣದ ಮೂಡಲ ಬಾಗಿಲು ಆಂಜನೇಯ ದೇಗುಲದ ಪುನರ್ ನಿರ್ಮಾಣ ಮಾಡುವುದು ಈ ಯಾತ್ರೆಯ ಸಂಕಲ್ಪವಾಗಿದೆ. ಪುಟ 2

# ಜೈಲಿನಿಂದ ಹೊರ ಬಂದ ಅಲ್ಲು ಅರ್ಜುನ್

**ಹೈದರಾಬಾದ್:** ಹೈದರಾಬಾದ್ ಸಂಧ್ಯಾ ಥಿಯೇಟರ್ ಕಾಲ್ತುಳಿತ ಪ್ರಕರಣದಲ್ಲಿ ಎ11 ಆರೋಪಿ ಆಗಿರೋ ಅಲ್ಲು ಅರ್ಜುನ್ ಅವರನ್ನು ಬಂಧಿಸಲಾಗಿತ್ತು. ಈಗ ಅವರು ಮಧ್ಯಂತರ ಜಾಮೀನು ಪಡೆದು ಹೊರ ಬಂದಿದ್ದಾರೆ. ಜೈಲಿನಿಂದ ಇಂದು ಮುಂಜಾನೆ ರಿಲೀಸ್ ಆದ ಅವರು, ಪೊಲೀಸ್ ಭದ್ರತೆಯೊಂದಿಗೆ ನೇರವಾಗಿ ಮನೆ ಸೇರಿದರು. ಅವರು ನಿವಾಸಕ್ಕೆ ಬಂದ ಬಳಿಕ ಮಾಧ್ಯಮಗಳಿಗೆ ರಿಯಾಕ್ಷನ್ ನೀಡಿದ್ದಾರೆ. ಅವರು ಅಭಿಮಾನಿಗಳಿಗೆ ಧನ್ಯವಾದ ಹೇಳುವುದನ್ನು ಮರೆತಿಲ್ಲ. ಜೊತೆಗೆ ಕಾನೂನಿಗೆ ತಲೆ ಬಾಗೋದಾಗಿ ಹೇಳಿದ್ದಾರೆ.

'ಅಭಿಮಾನಿಗಳಿಗೆ ಧನ್ಯವಾದ. ನಾನು ಆರಾಮಗಿದ್ದೇನೆ. ಆ ಬಗ್ಗೆ ಚಿಂತಿಸೋದು ಬೇಡ. ನಾನು ಕಾನೂನನ್ನು ಗೌರವಿಸುತ್ತೇನೆ. ನಾನು ತನಿಖೆಗೆ ಸಹಕರಿಸುತ್ತೇನೆ' ಎಂದು ಅಲ್ಲು ಅರ್ಜುನ್ ಪ್ರತಿಕ್ರಿಯಿಸಿದ್ದಾರೆ. ಈ ಸಂದರ್ಭದಲ್ಲಿ ಮೃತಪಟ್ಟ ರೇವತಿ ಕುಟುಂಬದವರ ಬಗ್ಗೆ ಮಾತನಾಡಲು ಮರೆತಿಲ್ಲ. 'ನಾನು ಮೃತರ ಕುಟುಂಬಕ್ಕೆ ಸಂತಾಪ ಸೂಚಿಸುತ್ತೇನೆ. ಸಿನಿಮಾ ನೋಡಲು ಹೋದಾಗ ಈ ಘಟನೆ ನಡೆಯಿತು. ಅದು ಅಚಾನಕ್ಕಾಗಿ ಆಗಿದ್ದು. ಅದೊಂದು ಅಪಘಾತ' ಎಂದಿದ್ದಾರೆ ಅಲ್ಲು ಅರ್ಜುನ್.



'ಆ ರೀತಿ ಮಾಡಬೇಕು ಎಂಬ ಯಾವುದೇ ಉದ್ದೇಶ ಇರಲಿಲ್ಲ. ಅವರ ಕುಟುಂಬಕ್ಕೆ ನಾನು ಕ್ಷಮೆ ಕೇಳುತ್ತೇನೆ. ಅದು ನನ್ನ ವೈಯಕ್ತಿಕ ನಿಯಂತ್ರಣದಲ್ಲಿ ಇರಲಿಲ್ಲ. ನಾನು ಕಳೆದ 20 ವರ್ಷಗಳಿಂದ ಅಲ್ಲಿಗೆ ಸಿನಿಮಾ ನೋಡಲು ಹೋಗುತ್ತಿದ್ದೇನೆ. ನನ್ನದು ಮಾತ್ರವಲ್ಲದೆ, ನನ್ನ ಅಂಕಲ್ ಸಿನಿಮಾಗಳನ್ನೂ ಅಲ್ಲಿ ನೋಡಿದ್ದೇನೆ. 30ಕ್ಕೂ ಹೆಚ್ಚು ಬಾರಿ ಆ ಥಿಯೇಟರ್ ಗೆ ಭೇಟಿ ಕೊಟ್ಟಿದ್ದೇನೆ. ಯಾವಾಗಲೂ ಈ ರೀತಿ ಆಗಿರಲಿಲ್ಲ. ಸಾವಿನ ನಷ್ಟ ತುಂಬಲು ಸಾಧ್ಯವಿಲ್ಲ. ಆದರೆ, ನನ್ನ ಕೈಲಾದ ಸಹಾಯ ಮಾಡುತ್ತೇನೆ' ಎಂದು ಅಲ್ಲು ಅರ್ಜುನ್ ಭರವಸೆ ನೀಡಿದ್ದಾರೆ.

ಈ ಬಂಧನದ ಹಿಂದೆ ತೆಲಂಗಾಣ ಸಿಎಂ ರೇವಂತ್ ರೆಡ್ಡಿ ಕೈವಾಡ ಇದೆ ಎಂಬ ಆರೋಪ ಇದೆ. ಈ ಬಗ್ಗೆ ಅವರಿಗೆ ಪ್ರಶ್ನೆ ಮಾಡಲಾಗಿದೆ. ಆದರೆ, ಈ ಬಗ್ಗೆ ಅಲ್ಲು ಅರ್ಜುನ್ ಅವರು ಪ್ರತಿಕ್ರಿಯೆ ನೀಡಿಲ್ಲ. ಅವರು ಈ ಬಂಧನಕ್ಕೆ ಯಾರನ್ನೂ ದೂರಿಲ್ಲ. ಇತ್ತೀಚೆಗೆ ಮಾತನಾಡಿದ್ದ ರೇವಂತ್ ರೆಡ್ಡಿ ಅವರು, 'ನನ್ನ ಹಸ್ತಕ್ಷೇಪ ಇಲ್ಲ' ಎಂದು ಸ್ಪಷ್ಟಪಡಿಸಿದ್ದರು.

'ಏನೇ ಇದ್ದರೂ ಕಾನೂನು ನೋಡಿಕೊಳ್ಳುತ್ತದೆ. ಪ್ರಕರಣ ತನಿಖೆಯಲ್ಲಿ ಇದೆ. ಹೀಗಾಗಿ, ಆ ಬಗ್ಗೆ ಮಾತನಾಡುವುದಿಲ್ಲ. ನಾನು ಕಾನೂನನ್ನು ಗೌರವಿಸುತ್ತೇನೆ' ಎಂದು ಹೇಳಿಕೆ ನೀಡಿದ್ದಾರೆ ಅಲ್ಲು ಅರ್ಜುನ್. ಅವರು ಬಂಧನಕ್ಕೆ ಒಳಗಾದಾಗ ಕುಟುಂಬ ಸವಾಲಿನ ಪರಿಸ್ಥಿತಿ ಎದುರಿಸಿತ್ತು. ಈ ಬಗ್ಗೆ ಅವರು ಪ್ರತಿಕ್ರಿಯೆ ನೀಡಿದ್ದಾರೆ. 'ನಿಮ್ಮ ಪ್ರೀತಿಗೆ ಧನ್ಯವಾದ. ಎಲ್ಲರಿಗೂ ಧನ್ಯವಾದ. ಅಭಿಮಾನಿಗಳು ತೋರಿದ ಪ್ರೀತಿ-ಬೆಂಬಲಕ್ಕೆ ಧನ್ಯವಾದ' ಎಂದಿದ್ದಾರೆ.

# ಬಳ್ಳಾರಿ ಬಾಣಂತಿಯರ ಸಾವಿಗೆ ಔಷಧ ಮಾತ್ರ ಕಾರಣವಲ್ಲ
# ಅಧ್ಯಕ್ಷೆ ಸ್ಫೋಟಕ ಹೇಳಿಕೆ

**ಬಳ್ಳಾರಿ:** ಬಳ್ಳಾರಿ ಜಿಲ್ಲಾ ಆಸ್ಪತ್ರೆಯಲ್ಲಿ ಬಾಣಂತಿಯರ ಸಾವಿಗೆ ಕೇವಲ IVರಿಂಗರ್ ಲ್ಯಾಕ್ಟೇಟ್ ದ್ರಾವಣ ಮಾತ್ರ ಕಾರಣವಲ್ಲ ಶಸ್ತ್ರಚಿಕಿತ್ಸಾ ಕೊಠಡಿಯಲ್ಲಿನ ಅಸ್ವಚ್ಛತೆ ಕೂಡ ಕಾರಣವಾಗಿರಬಹುದು ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌದರಿ ಅನುಮಾನ ವ್ಯಕ್ತಪಡಿಸಿದ್ದಾರೆ.

ಕರ್ನಾಟಕ ರಾಜ್ಯ ಮಹಿಳಾ ಆಯೋದ ಅಧ್ಯಕ್ಷ ಡಾ. ನಾಗಲಕ್ಷ್ಮೀ ಚೌದರಿ ಅವರು ಶುಕ್ರವಾರ (ಡಿ.13) ಜಿಲ್ಲಾಸ್ಪತ್ರೆಗೆ ಭೇಟಿ ನೀಡಿದರು. ಆಸ್ಪತ್ರೆಯಲ್ಲಿನ ಹೆರಿಗೆ ವಾರ್ಡ್ , ಶಸ್ತ್ರಚಿಕಿತ್ಸಾ ಕೊಠಡಿ, ಆಸ್ಪತ್ರೆಗೆ ಸರಬರಾಜು ಆಗುವ ನೀರಿನ ಟ್ಯಾಂಕ್‌ಗಳನ್ನು ಪರಿಶೀಲನೆ ನಡೆಸಿದರು.

ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಬಾಣಂತಿಯರ ಸಾವಿಗೆ IV ರಿಂಗರ್ ಲ್ಯಾಕ್ಟೇಟ್ ದ್ರಾವಣ ಮಾತ್ರ ಕಾರಣವಲ್ಲ. ಹೆರಿಗೆಯಾದ ಶಸ್ತ್ರಚಿಕಿತ್ಸಾ ಕೊಠಡಿ ಕೂಡ ಕಾರಣವಾಗಿರಬಹುದು ಎಂದು ಅನುಮಾನ ವ್ಯಕ್ತಪಡಿಸಿದರು. ಪುಟ 2






### ಲೋಕಸಭೆಯಲ್ಲಿ ಡಿ.16 ಕ್ಕೆ 'ಒಂದು ದೇಶ, ಒಂದು ಚುನಾವಣೆ' ಮಸೂದೆ ಮಂಡನೆ



**ನವದೆಹಲಿ:** ಕೇಂದ್ರ ಕಾನೂನು ಮತ್ತು ನ್ಯಾಯ ಸಚಿವ ಅರ್ಜುನ್ ರಾಮ್ ಮೇಘವಾಲ್ ಅವರು ಇದೇ ಡಿ.16 ರಂದು ಒಂದು ದೇಶ, ಒಂದು ಚುನಾವಣೆ ಮಸೂದೆ ಮಂಡಿಸಲಿದ್ದಾರೆಂದು ಮೂಲಗಳು ತಿಳಿಸಿವೆ.

ಮಸೂದೆ ಮಂಡನೆ ನಂತರ ಚರ್ಚೆಗಾಗಿ ಜಂಟಿ ಸಂಸದೀಯ ಸಮಿತಿಗೆ (ಜೆಪಿಸಿ) ಕಳುಹಿಸಲಾಗುವುದು. ಅರ್ಜುನ್ ರಾಮ್ ಮೇಘವಾಲ್ ಅವರು ಕೇಂದ್ರಾಡಳಿತ ಪ್ರದೇಶಗಳ ಕಾನೂನುಗಳ (ತಿದ್ದುಪಡಿ) ಮಸೂದೆ, 2024 ಅನ್ನು ಸಹ ಮಂಡಿಸಲಿದ್ದಾರೆ. ಕೇಂದ್ರಾಡಳಿತ ಪ್ರದೇಶಗಳ ಸರ್ಕಾರ ಕಾಯಿದೆ, 1963, ದೆಹಲಿ ಸರ್ಕಾರದ ರಾಷ್ಟ್ರೀಯ ರಾಜಧಾನಿ ಪ್ರದೇಶ ಕಾಯ್ದೆ, 1991 ಮತ್ತು ಜಮ್ಮುಗೆ ತಿದ್ದುಪಡಿ ಮಾಡಲು ಮತ್ತಷ್ಟು ಮಸೂದೆಯನ್ನು ಪರಿಚಯಿಸಲು ಮತ್ತು ಕಾಶ್ಮೀರ ಮರುಸಂಘಟನೆ ಕಾಯಿದೆ, 2019 ಮಸೂದೆಯನ್ನು ಮಂಡನೆ ಮಾಡಲಿದ್ದಾರೆ. ಪುಟ 2

### ಸ್ನೇಹಿತನನ್ನು ಕೊಲೆಗೈದ ಪ್ರಕರಣ ಜೀವಾವಧಿ ಶಿಕ್ಷೆ, 50,000 ರೂ. ದಂಡ

**ರಾಮನಗರ:** ಸ್ನೇಹಿತನನ್ನು ಕೊಲೆಗೈದಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಅಪರಾಧಿಗಳಿಗೆ ಜೀವಾವಧಿ ಶಿಕ್ಷೆ ಹಾಗೂ 50,000 ದಂಡ ವಿಧಿಸಿ ರಾಮನಗರ ಎರಡನೇ ಹೆಚ್ಚುವರಿ ಜಿಲ್ಲಾ ಸತ್ರ ನ್ಯಾಯಾಲಯ ಆದೇಶ ಹೊರಡಿಸಿದೆ.

ಹಾರೋಹಳ್ಳಿ ತಾಲೂಕಿನ ಕೊಟ್ಟಗಾಳು ಗ್ರಾಮದಲ್ಲಿ 2018ರಲ್ಲಿ ನಡೆದಿದ್ದ ಕೊಲೆ ಪ್ರಕರಣದಲ್ಲಿ ಅಣ್ಣಯ್ಯಪ್ಪ ಎಂಬಾತನನ್ನು ಸ್ನೇಹಿತರಾದ ಚಿಕ್ಕೇಗೌಡ ಹಾಗೂ ಕುಮಾರ್ ಎಂಬವರು ಕೊಲೆಗೈದಿದ್ದರು. ಚಿಕ್ಕೇಗೌಡ ಪತ್ನಿಯೊಂದಿಗೆ ಅಣ್ಣಯ್ಯಪ್ಪ ಅಸಭ್ಯವಾಗಿ ವರ್ತಿಸಿದ್ದ ಎಂಬ ವಿಚಾರಕ್ಕೆ ಗಲಾಟೆ ನಡೆದಿದ್ದು, ಗಲಾಟೆ ವಿಕೋಪಕ್ಕೆ ತಿರುಗಿ ಅಣ್ಣಯ್ಯಪ್ಪನಿಗೆ ಚಾಕು ಇರಿದು ಚಿಕ್ಕೇಗೌಡ ಹಾಗೂ ಕುಮಾರ್ ಕೊಲೆ ಮಾಡಿ ಎಸ್ಕೇಪ್ ಆಗಿದ್ದರು. ಈ ಸಂಬಂಧ ಕನಕಪುರ ಗ್ರಾಮಾಂತರ





### ರಾಜ್ಯದಲ್ಲೇ ಮೊದಲ ಬಾರಿಗೆ ಸರ್ಕಾರಿ ಕಾಲೇಜಿನಲ್ಲಿ ಐವಿಎಫ್ ಕೇಂದ್ರ ಸ್ಥಾಪನೆ ಶೀಘ್ರದಲ್ಲೇ ಕಾರ್ಯಾರಂಭ

**ಹುಬ್ಬಳ್ಳಿ:** ಮದುವೆಯಾದ ಮೇಲೆ ಅದೆಷ್ಟೋ ದಂಪತಿಗಳು ಮಕ್ಕಳಿಗಾಗಿ ದೇವರ ಮೊರೆಹೋಗುತ್ತಾರೆ. ಮತ್ತೆ ಕೆಲವರು ಆಸ್ಪತ್ರೆಗೆ ಅಲೆದಾಡಿ ಚಿಕಿತ್ಸೆ ಪಡೆದುಕೊಳ್ಳುತ್ತಾರೆ. ಇನ್ನೊಂದೆಡೆ ಚಿಕಿತ್ಸೆ ಪಡೆದರೂ ಸಹ ಮಕ್ಕಳಾಗುವ ಕನಸು ನನಸಾಗುವುದು ವಿಳಂಬವಾಗುತ್ತದೆ. ಹೀಗಾಗಿ ಇಂತಹ ದಂಪತಿಗಳು ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಖಾಸಗಿ ಬಂಜೆತನ ನಿವಾರಣಾ ಕೇಂದ್ರಗಳಲ್ಲಿ ಚಿಕಿತ್ಸೆ ಪಡೆದುಕೊಳ್ಳುತ್ತಾರೆ.



ಆದರೆ ಬಡ ವರ್ಗದ ದಂಪತಿಗಳಿಗೆ ಖಾಸಗಿ ಚಿಕಿತ್ಸೆ ಕಷ್ಟಕರ. ಇಂತಹ ಬಡ ಹಾಗೂ ಮಧ್ಯಮ ವರ್ಗದವರೂ ಸರ್ಕಾರದಿಂದ ಚಿಕಿತ್ಸೆ ಪಡೆದುಕೊಂಡು ತಮ್ಮ ಕನಸನ್ನು ನನಸು ಮಾಡಿಕೊಳ್ಳಬಹುದು. ಇದಕ್ಕಾಗಿ ಹುಬ್ಬಳ್ಳಿ ಕೆಎಂಸಿಆರ್‌ಐನಲ್ಲಿ ಇನ್ ವಿಟ್ರೋ ಫರ್ಟಿಲೈಜೇಷನ್ ಕೇಂದ್ರ ಸ್ಥಾಪನೆಗೆ ಸರ್ಕಾರ ಮುಂದಾಗಿದೆ. ಪುಟ 2

### ವೀರ ಸಾವರ್ಕರ್ ಕುರಿತು ವಿವಾದಾತ್ಮಕ ಹೇಳಿಕೆ

**ಲಕ್ನೋ:** ಸ್ವಾತಂತ್ರ್ಯ ಹೋರಾಟಗಾರ ವೀರ ಸಾವರ್ಕರ್ ವಿರುದ್ಧ ಅವಹೇಳನಕಾರಿ ಪದಗಳನ್ನು ಬಳಸಿದ ಪ್ರಕರಣದಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯನ್ನು 2025ರ ಜನವರಿ 10ರಂದು ವಿಚಾರಣೆಗೆ ಹಾಜರಾಗುವಂತೆ ಲಕ್ನೋ ಕೋರ್ಟ್ ಸಮನ್ಸ್ ನೀಡಿದೆ. ವೀರ ಸಾವರ್ಕರ್ ಕುರಿತು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಪ್ರಚೋದನಕಾರಿ ಹೇಳಿಕೆ ನೀಡಿದ್ದಾರೆ ಎಂಬ ಆರೋಪದ ಮೇಲೆ ದಾಖಲಾಗಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಲಕ್ನೋ ನ್ಯಾಯಾಲಯವು ಜನವರಿ 10ರಂದು ಹಾಜರಾಗುವಂತೆ ಸಮನ್ಸ್ ಜಾರಿ ಮಾಡಿದೆ. ಡಿಸೆಂಬರ್ 2022ರಲ್ಲಿ ರಾಹುಲ್ ಗಾಂಧಿ ವೀರ ಸಾವರ್ಕರ್ ಬಗ್ಗೆ ನೀಡಿದ ಪ್ರಚೋದನಕಾರಿ ಹೇಳಿಕೆ ವಿರುದ್ಧ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ.



» ರಾಹುಲ್ ಗಾಂಧಿಗೆ ಲಕ್ನೋ ಕೋರ್ಟ್ ಸಮನ್ಸ್ ಜಾರಿ

ದ್ವೇಷ ಉತ್ತೇಜಿಸುವ ಉದ್ದೇಶದಿಂದ ಹೇಳಿಕೆಗಳನ್ನು ನೀಡಿದ್ದಕ್ಕಾಗಿ ರಾಹುಲ್ ಗಾಂಧಿಗೆ ಸಮನ್ಸ್ ನೀಡಲಾಗಿದೆ. 2022ರ ಡಿಸೆಂಬರ್ 17ರಂದು ಮಹಾರಾಷ್ಟ್ರದ ಅಕೋಲಾದಲ್ಲಿ ಪತ್ರಿಕಾಗೋಷ್ಠಿಯಲ್ಲಿ ವೀರ ಸಾವರ್ಕರ್ ಅವರ ಬಗ್ಗೆ ಅವಮಾನಕಾರಿ ರೀತಿಯ ಪುಟ 2

## ಜೈವಿಕ ಇಂಧನ ಬಳಸಿ ಪರಿಸರ ಉಳಿಸಿ

**ನವದೆಹಲಿ:** ಇಂಧನವು ಅತ್ಯಮೂಲ್ಯವಾದ ನೈಸರ್ಗಿಕ ಸಂಪನ್ಮೂಲವಾಗಿದೆ. ಅತಿಯಾದ ಬಳಕೆಯಿಂದ ಪರಿಸರಕ್ಕೆ ಹಾನಿಯಾಗುತ್ತದೆ. ಅದಲ್ಲದೇ, ಮಿತಿಮೀರಿದ ಇಂಧನದ ಬಳಕೆಯಿಂದ ಭವಿಷ್ಯದಲ್ಲಿ ಇಂಧನಗಳು ಸಿಗದೇ ಹೋಗುವ ಸಾಧ್ಯತೆಯೇ ಹೆಚ್ಚು. ಮಾನವನ ಸ್ವಾರ್ಥದಿಂದಾಗಿ ನೈಸರ್ಗಿಕ ಶಕ್ತಿ ಮೂಲಗಳಾದ ಪೆಟ್ರೋಲಿಯಂ ಉತ್ಪನ್ನಗಳು, ಕಲ್ಲಿದ್ದಲು, ನೈಸರ್ಗಿಕ ಅನಿಲಗಳು ಬರಿದಾಗುತ್ತಿದೆ. ಹೀಗಾಗಿ ಮುಂದಿನ ಪೀಳಿಗೆಗಾಗಿ ಇಂಧನ ಉಳಿತಾಯ ಮಾಡುವುದು ಮತ್ತು ಇಂಧನವನ್ನು ಜಾಗರೂಕರಾಗಿ ಬಳಸುವುದು ಅಗತ್ಯ. ಇಂಧನ ಸಂರಕ್ಷಣೆಯ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಡಿಸೆಂಬರ್ 14 ರಂದು ರಾಷ್ಟ್ರೀಯ ಇಂಧನ ಸಂರಕ್ಷಣಾ ದಿನವನ್ನು ಆಚರಿಸಿಕೊಂಡು ಬರಲಾಗುತ್ತಿದೆ.

**ರಾಷ್ಟ್ರೀಯ ಇಂಧನ ಸಂರಕ್ಷಣಾ ದಿನದ ಇತಿಹಾಸ:** ಇಂಧನ ಸಂರಕ್ಷಣೆಯ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಭಾರತದಲ್ಲಿ ಮೊದಲ ಬಾರಿಗೆ 1991 ರಲ್ಲಿ ರಾಷ್ಟ್ರೀಯ ಇಂಧನ ಸಂರಕ್ಷಣಾ ದಿನವನ್ನು ಆಚರಿಸಲಾಯಿತು. ಕೇಂದ್ರ ವಿದ್ಯುತ್



ಸಚಿವಾಲಯದ ಅಡಿಯಲ್ಲಿ ರೂಪುಗೊಂಡ ಬ್ಯೂರೋ ಆಫ್ ಎನರ್ಜಿ ಎಫಿಷಿಯೆನ್ಸಿ-BEE 1991 ರಲ್ಲಿ ಇಂಧನ ಸಂರಕ್ಷಣಾ ದಿನವನ್ನು ಆಚರಿಸುವ ಬಗ್ಗೆ ಮಹತ್ತರ ನಿರ್ಧಾರವನ್ನು ತೆಗೆದುಕೊಳ್ಳಲಾಯಿತು. ಅಂದಿನಿಂದ ಪ್ರತಿವರ್ಷ ಡಿಸೆಂಬರ್ 14 ರಂದು ರಾಷ್ಟ್ರೀಯ ಇಂಧನ ಸಂರಕ್ಷಣಾ ದಿನವನ್ನು ಆಚರಿಸಲಾಗುತ್ತದೆ. ಭಾರತ ಸರ್ಕಾರದ ಅಧೀನದಲ್ಲಿರುವ ಈ ಒಂದು ಸಾಂವಿಧಾನಿಕ ಸಂಸ್ಥೆ ಶಕ್ತಿಯ ಬಳಕೆಯನ್ನು ಕಡಿಮೆ ಮಾಡಲು ಹಲವಾರು ಕಾರ್ಯತಂತ್ರಗಳು ಮತ್ತು ನೀತಿಗಳನ್ನು ಜಾರಿಗೆ ತಂದಿದೆ. ಈ ಸಮಿತಿಯು ಇಂಧನ ಸಂರಕ್ಷಣೆಗಾಗಿ 2001 ರಲ್ಲಿ ಶಕ್ತಿ ಸಂರಕ್ಷಣಾ ಕಾಯ್ದೆಯನ್ನು ಜಾರಿಗೆ ತಂದಿದೆ.

**ರಾಷ್ಟ್ರೀಯ ಇಂಧನ ಸಂರಕ್ಷಣಾ ದಿನದ ಮಹತ್ವ ಹಾಗೂ ಆಚರಣೆ:** ಇಂಧನ ಸಂರಕ್ಷಣೆಯ ಮಹತ್ವದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಈ ದಿನವು ಮಹತ್ವದ್ದಾಗಿದೆ. ಶಕ್ತಿಯ ವ್ಯರ್ಥವನ್ನು ಕಡಿಮೆ ಮಾಡಲು ಮತ್ತು ಸಂಪನ್ಮೂಲಗಳನ್ನು ಸಂರಕ್ಷಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಮುಂದಿನ ಪೀಳಿಗೆಗೆ ಇಂಧನವನ್ನು ಉಳಿಸುವಲ್ಲಿ ನಾವೆಲ್ಲರೂ ಜೊತೆಗೂಡಬೇಕು. ಈ ಹಿನ್ನಲೆಯಲ್ಲಿ ರಾಷ್ಟ್ರೀಯ ಇಂಧನ ಸಂರಕ್ಷಣಾ ದಿನದಂದು, ಸೆಮಿನಾರ್, ಕಾರ್ಯಾಗಾರಗಳು ಮತ್ತು ಇಂಧನ ಉಳಿತಾಯ ಅಭಿಯಾನಗಳು ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನುಗಳನ್ನು ಆಯೋಜಿಸಲಾಗುತ್ತಾ ಬರಲಾಗುತ್ತಿದೆ.

ಪ್ರತಿ ವರ್ಷ ಡಿಸೆಂಬರ್ 14 ರಂದು ರಾಷ್ಟ್ರೀಯ ಇಂಧನ ಸಂರಕ್ಷಣಾ ದಿನವನ್ನಾಗಿ ಆಚರಿಸಲಾಗುತ್ತಿದೆ. ಶಕ್ತಿಯ ಬಳಕೆಯನ್ನು ಕಡಿಮೆ ಮಾಡಿ ಇಂಧನವನ್ನು ಪರಿಣಾಮಕಾರಿಯಾಗಿ ಬಳಸುವಂತೆ ಜನರನ್ನು ಪುಟ 2

### ಕೋವಿಡ್ ಅಕ್ರಮದ ತನಿಖೆಗೆ ಮುಂದಾದ ಸರ್ಕಾರ ಎಫ್‌ಐಆರ್‌ನಲ್ಲಿ ಸ್ಫೋಟಕ ಮಾಹಿತಿ ಹಲವರ ಎದೆಯಲ್ಲಿ ಢವಢವ!

**ಬೆಂಗಳೂರು:** ರಾಜ್ಯದಲ್ಲಿ ಬಿಜೆಪಿ ಸರ್ಕಾರದ ಅವಧಿಯಲ್ಲಿ ಕೋವಿಡ್ ಸಮಯದಲ್ಲಿ ಅಕ್ರಮಗಳು ನಡೆದಿವೆ ಎಂದು ಕಾಂಗ್ರೆಸ್ ಸರ್ಕಾರ ಹಲವು ಬಾರಿ ಆರೋಪಿಸಿದ್ದು, ಇದೀಗ ಆ ಅಕ್ರಮಗಳ ತನಿಖೆಗೆ ಮುಂದಾಗಿದೆ. ಕೊವೀಡ್ ಅಕ್ರಮಗಳ ತನಿಖೆ ನಡೆಸಲು ರಾಜ್ಯ ಸರ್ಕಾರ ಗ್ರೀನ್ ಸಿಗ್ನಲ್ ನೀಡಿದ್ದು, ಇದೀಗ ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ಹಲವರ ಮೇಲೆ ಎಫ್‌ಐಆರ್ ದಾಖಲಾಗಿದೆ.

ವೈದ್ಯಕೀಯ ಶಿಕ್ಷಣ ಇಲಾಖೆ ಮುಖ್ಯ ಲೆಕ್ಕಾಧಿಕಾರಿ ಡಾ. ವಿಷ್ಣುಪ್ರಸಾದ್ ಅವರು ನೀಡಿರುವ ದೂರಿನ ಮೇರೆಗೆ ಎಫ್‌ಐಆರ್ ದಾಖಲಿಸಿಕೊಂಡಿರುವ ಪೊಲೀಸರು, ತನಿಖೆಗಿಳಿದಿದ್ದಾರೆ. ಕೊವೀಡ್ ಅಕ್ರಮಗಳ ತನಿಖೆಗೆ ಎಸ್‌ಐಟಿ ರಚನೆ ಮಾಡುವ ಸಾಧ್ಯತೆ ಇದೆ. ಕೇಸ್ ದಾಖಲಾಗ್ತಿದ್ದಂತೆ ಅಧಿಕಾರಿಗಳು ಸೇರಿ ಹಲವರ ಎದೆಯಲ್ಲಿ ಢವಢವ ಶುರುವಾಗಿದೆ.

**ಸರ್ಕಾರಕ್ಕೆ 167 ಕೋಟಿ ರೂಪಾಯಿ ನಷ್ಟ:** ಎನ್-95 ಮಾಸ್ಕ್, ಪಿಪಿಇ ಕಿಟ್ ಹಾಗೂ ಇತರ ಸಾಮಗ್ರಿಗಳ ಸಂಗ್ರಹ ದುರ್ಬಳಕೆ ಮಾಡಿರುವ ಆರೋಪ ಕೇಳಿಬಂದಿದೆ.



ಕಾನೂನು ಪ್ರಕ್ರಿಯೆಗಳನ್ನ ಗಾಳಿಗೆ ತೂರಿ ಸರ್ಕಾರಕ್ಕೆ 167 ಕೋಟಿ ರೂಪಾಯಿ ನಷ್ಟ ಮಾಡಿದ್ದಾರೆ ಎಂದು ದೂರಲಾಗಿದೆ. 2020ರ ಆಗಸ್ಟ್ 18ರಂದು ಸರ್ಕಾರ ವತಿಯಿಂದ ಮಾಸ್ಕ್ ಹಾಗೂ ಪಿಪಿಇ ಕಿಟ್ ಖರೀದಿ ಮಾಡಲಾಗಿದೆ. 2.59 ಲಕ್ಷ ಎನ್-95 ಮಾಸ್ಕ್ ಹಾಗೂ 2.59 ಪಿಪಿಇ ಕಿಟ್ ಖರೀದಿಗೆ ಅನುಮತಿತ್ತು. ನೀಡಿ ವೈದ್ಯರು ಹಾಗೂ ವೈದ್ಯಕೀಯ ಸಿಬ್ಬಂದಿ, ಪುಟ 2

## 18 ರಂದು ತಿಂಗಳ ಉಪನ್ಯಾಸ

**ಬೆಂಗಳೂರು:** ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ವತಿಯಿಂದ 'ಬಿ.ಎಂ.ಶ್ರೀ ಅವರ ಅನುವಾದಗಳು' ವಿಷಯದ ಕುರಿತು ಡಿಸೆಂಬರ್ 18 ರಂದು ಸಂಜೆ 5.00 ಗಂಟೆಗೆ ಪ್ರಾಧಿಕಾರದ ಕಚೇರಿಯ ಆವರಣದಲ್ಲಿ ಉಪನ್ಯಾಸ ಏರ್ಪಡಿಸಲಾಗಿದೆ. ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಅಧ್ಯಕ್ಷರಾದ ಡಾ.ಚನ್ನಪ್ಪ ಕಟ್ಟಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ಖ್ಯಾತ ಸಾಹಿತಿಗಳಾದ ಪ್ರೊ. ಎಚ್.ಎಸ್.ರಾಘವೇಂದ್ರರಾವ್ ಅವರು 'ಬಿ.ಎಂ.ಶ್ರೀ ಅವರ ಅನುವಾದಗಳು' ವಿಷಯದ ಕುರಿತು ಉಪನ್ಯಾಸ ನೀಡಲಿದ್ದಾರೆ. ಪ್ರಾಧಿಕಾರದ ಸದಸ್ಯರಾದ ಡಾ.ಚಿತ್ತಯ್ಯ ಪೂಜಾರ್ ಅವರು ಕಾರ್ಯಕ್ರಮದ ಪ್ರಸ್ತಾವನೆಯ ಕಾರ್ಯವನ್ನು ಮಾಡಲಿದ್ದು, ಪ್ರೊ.ನಾರಾಯಣ ಘಟ್ಟ (ನಾಹೊ) ಅವರು ಕಾರ್ಯಕ್ರಮವನ್ನು ನಿರೂಪಿಸಲಿದ್ದಾರೆ. ಪ್ರಾಧಿಕಾರದ ರಿಜಿಸ್ಟ್ರಾರ್ ಈಶ್ವರ್ ಕು. ಮಿರ್ಜಿ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುತ್ತಾರೆ ಎಂದು ಪ್ರಕಟಣೆ ತಿಳಿಸಿದೆ.

## 16ರಂದು ಡಾಕ್ ಅದಾಲತ್

**ರಾಮನಗರ:** ಅಂಚೆ ಇಲಾಖೆ ವತಿಯಿಂದ ಇದೇ ಡಿ. 16 ರಂದು ಬೆಳಿಗ್ಗೆ 11 ಗಂಟೆಗೆ ಚನ್ನಪಟ್ಟಣದ ಅಂಚೆ ವಿಭಾಗೀಯ ಕಚೇರಿಯಲ್ಲಿ ಡಾಕ್ ಅದಾಲತ್ ಅನ್ನು ಆಯೋಜಿಸಲಾಗಿದೆ. ಅಂಚೆ ಇಲಾಖೆಯ ಸೇವೆಗೆ ಸಂಬಂಧಪಟ್ಟಂತೆ ಯಾವುದೇ ರೀತಿಯ ದೂರುಗಳನ್ನು ಸಲ್ಲಿಸಬಹುದಾಗಿದೆ. ದೂರುಗಳನ್ನು ಇದೇ ಡಿ. 14ರೊಳಗೆ ಪೂರ್ಣ ವಿಳಾಸದೊಂದಿಗೆ ಹಾಗೂ ಸೂಕ್ತ ದಾಖಲಾತಿಗಳೊಂದಿಗೆ ಚನ್ನಪಟ್ಟಣ ವಿಭಾಗದ ಅಂಚೆ ಅಧೀಕ್ಷಕರ ಕಚೇರಿಯ ವಿಳಾಸಕ್ಕೆ ಸಲ್ಲಿಸುವಂತೆ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಪರಿಚಿತ ವ್ಯಕ್ತಿಯ ಶವ ಪತ್ತೆ

**ಮೈಸೂರು:** ಹನಕೆರೆ-ಮಂಡ್ಯ ರೈಲು ನಿಲ್ದಾಣದಲ್ಲಿ ಸುಮಾರು 55 ರಿಂದ 60 ವರ್ಷದ ಅಪರಿಚಿತ ವ್ಯಕ್ತಿಯ ಶವ ಪತ್ತೆಯಾಗಿದ್ದು, ಮೈಸೂರು ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ. ಚಹರೆ: ಮೃತ ವ್ಯಕ್ತಿಗೆ ಸುಮಾರು 55 ರಿಂದ 60 ವರ್ಷ ವಯಸ್ಸಾಗಿದ್ದು, 5.6 ಅಡಿ ಎತ್ತರ, ಕಪ್ಪು ಮೈಬಣ್ಣ, ಸಾಧಾರಣ ಶರೀರ, ಕೋಲು ಮುಖ, ತಲೆಯಲ್ಲಿ ಸುಮಾರು 1 ಇಂಚು ಕಪ್ಪು ಬಿಳಿ ಮಿಶ್ರಿತ ಕೂದಲು, ಬಿಳಿ ಬಣ್ಣದ ಮೀಸೆ ದಾಡಿ ಸುಮಾರು 3 ಇಂಚು ಇದ್ದು, ಎಡಗೈಯಲ್ಲಿ ಉಷಾ ಎಂದು ಬರೆದಿರುವ ಹಸಿರು ಅಚ್ಚೆ ಗುರುತಿರುತ್ತದೆ. ಮೃತಪಟ್ಟ ಸಂದರ್ಭದಲ್ಲಿ ಬಿಳಿ, ಕಪ್ಪು, ಅರಿಶಿನ, ಕಾಫಿ, ಸಿಮೆಂಟ್ ಬಣ್ಣ ಮಿಶ್ರಿತ ಗೆರೆಗಳುಳ್ಳ ಅರ್ಧ ತೋಳಿನ ಟೀ-ಶರ್ಟ್, ಸಿಮೆಂಟ್ ಬಣ್ಣದ ಚಡ್ಡಿ ಇದ್ದು ಅದರ ಮೇಲೆ ಕಪ್ಪು ಬಣ್ಣದ ಚೆಕ್ಸ್ ಗೆರೆ ಇರುತ್ತದೆ. ಸೊಂಟದಲ್ಲಿ ಬಿಳಿ ಉಡುದಾರ ಇರುತ್ತದೆ. ಮೃತ ವ್ಯಕ್ತಿಯ ವಾರಸುದಾರರ ಬಗ್ಗೆ ಮಾಹಿತಿ ದೊರೆತಲ್ಲಿ ಮೈಸೂರು ರೈಲ್ವೆ ಪೊಲೀಸ್ ಠಾಣೆಯ ದೂ.ಸಂ: 0821-2516579 ನ್ನು ಸಂಪರ್ಕಿಸಬಹುದು ಎಂದು ಮೈಸೂರು ರೈಲ್ವೆ ಪೊಲೀಸ್ ಠಾಣೆಯ ಆರಕ್ಷಕ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಪರಿಚಿತ ಹೆಂಗಸಿನ ಶವ ಪತ್ತೆ

**ಮೈಸೂರು:** ಮೈಸೂರು ರೈಲು ನಿಲ್ದಾಣದಲ್ಲಿ ಸುಮಾರು 45 ವರ್ಷದ ಅಪರಿಚಿತ ಹೆಂಗಸು ಅಸ್ವಸ್ಥಳಾಗಿದ್ದು ಚಿಕಿತ್ಸೆ ಕುರಿತು ಮೈಸೂರಿನ ಕೆ.ಆರ್ ಆಸ್ಪತ್ರೆಗೆ ದಾಖಲಿಸಿದ್ದು, ಚಿಕಿತ್ಸೆ ಫಲಕಾರಿ ಆಗದೇ ಡಿಸೆಂಬರ್ 8 ರಂದು ಮೃತಪಟ್ಟಿರುತ್ತಾರೆ. ಮೃತ ಹೆಂಗಸಿನ ದೇಹವು ಮೈಸೂರಿನ ಕೆ.ಆರ್ ಆಸ್ಪತ್ರೆ ಶವಗಾರದಲ್ಲಿದ್ದು, ಮೈಸೂರು ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಚಹರೆ: ಮೃತ ಹೆಂಗಸಿಗೆ ಸುಮಾರು 45 ವರ್ಷ ವಯಸ್ಸಾಗಿದ್ದು, 5.2 ಅಡಿ ಎತ್ತರ, ಬಡಕಲು ಶರೀರ, ಕಪ್ಪು ಮೈ ಬಣ್ಣ, ಕಪ್ಪು ಬಿಳಿ ಕೂದಲು, ಮೂಗಿನ ಮೇಲೆ ಹಳೆಯ ಗಾಯವಿದ್ದು, ಎಡಗಡೆ ಬಾಯಿಯ ಪಕ್ಕ ಹಳೆಯ ಗಾಯವಿರುತ್ತದೆ. ಬಲಗೈಯಲ್ಲಿ ಹಳೆಯ ಗಾಯವಿದ್ದು ಬಲಗಾಲಿನ ಪಾದ ಗ್ಯಾಂಗ್ರಿನ್ ಆಗಿರುತ್ತದೆ. ಎಡಗೈಯಲ್ಲಿ ಮುಂಗೈಯಿಂದ ಹಸ್ತದವರೆಗೂ ಚರ್ಮ ಕಿತ್ತಿರುವ ತರ ಚಿಕ್ಕ ಗಾಯವಾಗಿದ್ದು ಬಾಯಿ ತೆರೆದಿದ್ದು ಹಲ್ಲು ಕಾಣುತ್ತಿರುತ್ತದೆ. ಮೃತ ಹೆಂಗಸು ಆಕಾಶ ನೀಲಿ ಬಣ್ಣದ ಆಸ್ಪತ್ರೆಯ ಗೌನ್ ಧರಿಸಿರುತ್ತಾರೆ. ಮೃತ ಹೆಂಗಸಿನ ವಾರಸುದಾರರ ಬಗ್ಗೆ ಮಾಹಿತಿ ದೊರೆತಲ್ಲಿ ಮೈಸೂರು ರೈಲ್ವೆ ಪೊಲೀಸ್ ಠಾಣೆಯ ದೂ.ಸಂ: 0821-2516579 ನ್ನು ಸಂಪರ್ಕಿಸಬಹುದು ಎಂದು ಮೈಸೂರು ರೈಲ್ವೆ ಪೊಲೀಸ್ ಠಾಣೆಯ ಆರಕ್ಷಕ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 18 ರಂದು ಮಾಪ್ ಅಪ್ ಸುತ್ತಿನ ನೇರ ಸಂದರ್ಶನ

**ಮೈಸೂರು:** ಸರ್ಕಾರಿ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವೈದ್ಯಕೀಯ ಮಹಾವಿದ್ಯಾಲಯದಲ್ಲಿ 2024-25 ನೇ ಸಾಲಿನ ಬಿ.ಎನ್.ವೈ.ಎಸ್ ಪದವಿ ಕೋರ್ಸಿನ 10 ಸೀಟುಗಳಿಗೆ ಡಿಸೆಂಬರ್ 18 ರಂದು ಬೆಳಿಗ್ಗೆ 10.00 ಗಂಟೆಗೆ ಮಾಪ್ ಅಪ್ ಸುತ್ತಿನ ನೇರ ಸಂದರ್ಶನ/ಪ್ರವೇಶಾತಿಯನ್ನು ನಿಗದಿಪಡಿಸಲಾಗಿದೆ. 2024 ರ ನಿಯಮಾನುಸಾರ ಸಿಇಟಿಯಲ್ಲಿ ಅರ್ಹರಾದ ಅಭ್ಯರ್ಥಿಗಳು ನೇರ ಸಂದರ್ಶನದಲ್ಲಿ ಭಾಗವಹಿಸಲು ಇಚ್ಛಿಸಿದ್ದಲ್ಲಿ, ನಿಗದಿತ ಎಲ್ಲಾ ಮೂಲ ದಾಖಲಾತಿಗಳು ಹಾಗೂ ಶುಲ್ಕದೊಂದಿಗೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂಖ್ಯೆ:0821 2410120 ಅಥವಾ ಮೊ.ಸಂ:8618570803 ನ್ನು ಸಂಪರ್ಕಿಸಬಹುದು ಎಂದು ಸರ್ಕಾರಿ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿಕ್ಷಕರು, ಮೇಲ್ವಿಚಾರಕರ ಅಜಾಗರೂಕತೆ



**ಮಾಲೂರು :** ಎಂ.ಕೊತ್ತೂರು ಮುರಾರ್ಜಿ ವಸತಿಶಾಲೆಯ ಮಕ್ಕಳು ಪ್ರವಾಸಕ್ಕೆ ತೆರಳಿ ಶಿಕ್ಷಕರ ಮತ್ತು ಮೇಲ್ವಿಚಾರಕರ ಅಜಾಗರೂಕತೆಯಿಂದ ನೀರಿನಲ್ಲಿ ಮುಳುಗಿ ಸಾವನ್ನಪ್ಪಿರುವ ಘಟನೆಯಾಗಿದ್ದು, ಸಂಬಂಧಿಸಿದವರ ವಿರುದ್ಧ ಕಾನೂನು ರೀತ್ಯಾ ಕ್ರಮಜರುಗಿಸಿ ನೊಂದ ಕುಟುಂಬಗಳಿಗೆ ಪರಿಹಾರವನ್ನು ಕಲ್ಪಿಸಬೇಕು ಎಂದು ಒತ್ತಾಯಿಸಿ ಕದಸಂಸ ತಾಲ್ಲೂಕು ಸಂಚಾಲಕ ಎಸ್.ಎಂ.ವೆಂಕಟೇಶ್ ಒತ್ತಾಯಿಸಿದರು.

ಪಟ್ಟಣದ ಪೊಲೀಸ್ ಠಾಣೆಯ ಮುಂಭಾಗದಲ್ಲಿ ಜಿಲ್ಲಾ ಸಂಘಟನಾ ಸಂಚಾಲಕ ಚವ್ವೇನಹಳ್ಳಿ ವಿಜಿ ನೇತೃತ್ವದಲ್ಲಿ ಜಮಾಯಿಸಿದ ಕಾರ್ಯಕರ್ತರು ಮಾಲೂರು ಪೊಲೀಸ್ ಇನ್ಸ್ ಪೆಕ್ಟರ್ ಅವರ ಮೂಲಕ ಮನವಿ ಸಲ್ಲಿಸಿದರು.

ಕೋಲಾರ ಜಿಲ್ಲೆಯ ಮುಳಬಾಗಿಲು ತಾಲ್ಲೂಕು ಎಂ.ಕೊತ್ತೂರು ಮುರಾರ್ಜಿ ವಸತಿಶಾಲೆಯ ಮಕ್ಕಳು ಪ್ರವಾಸಕ್ಕೆ ಬಂದು ಉತ್ತರಕನ್ನಡ ಜಿಲ್ಲೆಯ, ಮುರಡೇಶ್ವರಕ್ಕೆ ತೆರಳಿದ್ದು, ಮಕ್ಕಳನ್ನು ನೀರಿನಲ್ಲಿ ಆಟವಾಡಲು ಬಿಟ್ಟು ಶಿಕ್ಷಕರು ಮತ್ತು ಮೇಲ್ವಿಚಾರಕರ ಅಜಾಗರೂಕತೆಯಿಂದ 9ನೇ ತರಗತಿ ವಿದ್ಯಾರ್ಥಿನಿ ಶ್ರಾವಂತಿ, ದೀಕ್ಷಾ.ಜೆ, ಲಾವಣ್ಯ, ವಂದನಾ, ನೀರಿನಲ್ಲಿ ಮುಳುಗಿ ಕಾಣೆಯಾಗಿದ್ದು, ಶ್ರಾವಂತಿಯ ಮೃತದೇಹ ಪತ್ತೆಯಾಗಿ ಮುರಡೇಶ್ವರದ ಆರ್‌ಎನ್‌ಎಸ್ ಆಸ್ಪತ್ರೆಯ ಶವಗಾರದಲ್ಲಿದ್ದು, ಇನ್ನೂ 3 ವಿದ್ಯಾರ್ಥಿನಿಯರು ಚಿಕಿತ್ಸೆ ಪಡೆಯುತ್ತಿದ್ದು, ಇನ್ನು ನಾಲ್ಕು ಜನ ವಿದ್ಯಾರ್ಥಿನಿಯರಾದ ಲಾವಣ್ಯ, ವಂದನಾ, ಮತ್ತು ದೀಕ್ಷಾ ಎಂಬುವವರು ಇನ್ನು ನೀರಿನಲ್ಲಿ ಪತ್ತೆಯಾಗಿರುವುದಿಲ್ಲ, ಇವರುಗಳ ಸಾವಿಗೆ ಸಂಬಂಧಪಟ್ಟ ಶಾಲೆಯ ಪ್ರಾಂಶುಪಾಲರು ಹಾಗೂ ಶಿಕ್ಷಕರು ಅವರ ಸಿಬ್ಬಂದಿ ವರ್ಗದ ಆಜಾಗರೂಕತೆ, ನಿರ್ಲಕ್ಷ್ಯ ಧೋರಣೆಯೇ ಕಾರಣವಾಗಿದ್ದು, ಸದರಿ ಪ್ರಾಂಶುಪಾಲರು ಮತ್ತು ಸಿಬ್ಬಂದಿ ವರ್ಗದ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸಿ ನೊಂದ ಕುಟುಂಬಗಳಿಗೆ ರೂ.25,00,000/-

(ಇಪ್ಪತ್ತೈದು ಲಕ್ಷ) ರೂಗಳಂತೆ ಪರಿಹಾರ ಹಾಗೂ ಕುಟುಂಬದಲ್ಲಿ ಒಬ್ಬ ಸದಸ್ಯರಿಗೆ ಸರ್ಕಾರಿ ನೌಕರಿಯನ್ನು ನೀಡಬೇಕೆಂದು ಕದಸಂಸ ಸಂಘಟನೆ ಒತ್ತಾಯಿಸಿ ಮಾಲೂರು ಪೊಲೀಸ್ ಠಾಣೆಯ ಮುಖಾಂತರ ಸರಕಾರಕ್ಕೆ ಮನವಿ ಸಲ್ಲಿಸಿದರು. ಖಜಾಂಚಿ ನೀಲಕಂಠ ಅಗ್ರಹಾರ ಶ್ಯಾಮಣ್ಣ, ತಾಲ್ಲೂಕು ಸಂಘಟನಾ ಸಂಚಾಲಕ ಡಿ.ಎನ್ .ನಾರಾಯಣಸ್ವಾಮಿ, ಬಂಡಹಟ್ಟಿ ನಾರಾಯಣಸ್ವಾಮಿ, ಯಶವಂತಪುರ ಮುನಿರಾಜು, ಫಿಲ್ಟರ್ ನಾರಾಯಣಸ್ವಾಮಿ, ಎಸ್.ಎಂ.ಮುರಳಿ, ಹಾರೋಹಳ್ಳಿ ಮುನಿರಾಜು, ಅಂಗಶೆಟ್ಟಹಳ್ಳಿ ನಾರಾಯಣಸ್ವಾಮಿ ಹಾಜರಿದ್ದರು.

# ಶೋಷಿತರಿಗೆ ನ್ಯಾಯ ಒದಗಿಸಿ



**ವಿಜಯಪುರ:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ನ್ಯಾ.ಸದಾಶಿವ ಆಯೋಗದ ವರದಿಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸುವ ಮೂಲಕ ದೇಶಕ್ಕೆ ಮಾದರಿಯಾಗಬೇಕು. ಶೋಷಿತ ಸಮುದಾಯಗಳಿಗೆ ನ್ಯಾಯ ಒದಗಿಸಬೇಕು ಎಂದು ಮುಖ್ಯಮಂತ್ರಿಗೆ ಮನವಿ ಪತ್ರ ಸಲ್ಲಿಸಲಿದ್ದೇವೆ ಎಂದು ಮಾತಂಗ ಮಹರ್ಷಿ ಸೇವಾ ಟ್ರಸ್ಟ್ ನ ಪದಾಧಿಕಾರಿಗಳು, ಒತ್ತಾಯಿಸಿದರು.

ಪಟ್ಟಣದಲ್ಲಿ ಬುಧವಾರ ಆಯೋಜಿಸಿದ್ದ ಸುದ್ದಿಗೋಷ್ಟಿಯಲ್ಲಿ ಟ್ರಸ್ಟ್ ಅಧ್ಯಕ್ಷ ಎಂ.ವೆಂಕಟೇಶ್ ಮಾತನಾಡಿ, ನ್ಯಾ.ಸದಾಶಿವ ಆಯೋಗದ ವರದಿಯನ್ನು ಅನುಷ್ಠಾನಗೊಳಿಸಿ, ಸಾಮಾಜಿಕ ನ್ಯಾಯದಿಂದ ವಂಚಿತವಾಗಿರುವ ಸಮುದಾಯಗಳಿಗೆ ಶಕ್ತಿ ತುಂಬಿಸಬೇಕು ಎಂದು 4 ದಶಕಗಳಿಂದ ನಿರಂತರವಾಗಿ ಹೋರಾಟಗಳು ಮಾಡಿಕೊಂಡು ಬರುತ್ತಿದ್ದೇವೆ. ಸುಪ್ರೀಂಕೋರ್ಟ್ ನಿಂದಲೂ ಅನುಮತಿ ಸಿಕ್ಕಿದೆ. ತೆಲಂಗಾಣ ಸರ್ಕಾರದ ಮಾದರಿಯಲ್ಲಿ ರಾಜ್ಯದಲ್ಲೂ ಅಂಗೀಕರಿಸಿ, ಅನುಷ್ಠಾನಕ್ಕೆ ತರಬೇಕು. ಚಳಿಗಾಲದ ಅಧಿವೇಶನದಲ್ಲಿ ಒಳಮೀಸಲಾತಿಯನ್ನು ಘೋಷಣೆ ಮಾಡಬೇಕು ಎಂದು ಒತ್ತಾಯಿಸಿದರು.

ಕಾರ್ಯಾಧ್ಯಕ್ಷ ಎಂ.ಮುನಿರಾಜು ಮಾತನಾಡಿ, ರಾಜಕೀಯವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ, ಶೋಷಿತರಾಗಿ ವಂಚಿತರಾಗಿರುವ ಪರಿಶಿಷ್ಟ ಜಾತಿಯ ಎಡಗೈ ಮತ್ತು ಬಲಗೈ ಸಮುದಾಯಗಳಿಗೆ ನ್ಯಾಯ ಸಿಗಬೇಕಿದೆ. ಕೌಶಲ್ಯಗಳಿದ್ದರೂ ಹಲವಾರು ವಿಚಾರಗಳಲ್ಲಿ ನಾವು ವಂಚಿತರಾಗಿದ್ದೇವೆ. ಸಮುದಾಯಗಳಿಗೆ ನ್ಯಾಯ ಕೊಡುವುದಕ್ಕೆ ಇದು ಸೂಕ್ತವಾದ ಸಮಯವಾಗಿದ್ದು, ಸರ್ಕಾರ ಅನುಷ್ಠಾನಗೊಳಿಸಬೇಕು. ಚುನಾವಣಾ ಪೂರ್ವದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನೀಡಿದ್ದ ಭರವಸೆಯನ್ನು ಈಡೇರಿಸಬೇಕು. ಸಮುದಾಯದಿಂದ ಪ್ರತಿನಿಧಿಸುತ್ತಿರುವ ಜನಪ್ರತಿನಿಧಿಗಳೂ ಸರ್ಕಾರದ ಮೇಲೆ ಒತ್ತಡ ಹೇರುವಂತಹ ಕಾರ್ಯವನ್ನು ಪಕ್ಷಾತೀತವಾಗಿ ಮಾಡಬೇಕು ಎಂದು ಮನವಿ ಮಾಡಿದರು.

ಗೌರವಾಧ್ಯಕ್ಷ ನಾರಾಯಣಪ್ಪ ಮಾತನಾಡಿ, ಟ್ರಸ್ಟ್ ನ ವತಿಯಿಂದ ಸಮುದಾಯದ ಮಕ್ಕಳ ಶೈಕ್ಷಣಿಕ ಬೆಳವಣಿಗೆಗೆ ಹೆಚ್ಚು ಆದ್ಯತೆ ನೀಡಬೇಕಿದೆ. ಶಿಕ್ಷಣದಿಂದ ಮಾತ್ರವೇ ನಾವು ಪರಿವರ್ತನೆಯನ್ನು ಕಾಣುವುದಕ್ಕೆ ಸಾಧ್ಯವಾಗುತ್ತದೆ ಎಂದರು.

ಉಪಾಧ್ಯಕ್ಷರಾದ ನಾರಾಯಣಸ್ವಾಮಿ, ಲಕ್ಷ್ಮಮ್ಮ, ಪ್ರಧಾನ ಕಾರ್ಯದರ್ಶಿ ಚಿನ್ನಪ್ಪ, ಖಜಾಂಚಿ ಗಂಗಾಧರ್, ನಿರ್ದೇಶಕರಾದ ಗಂಗಯ್ಯ, ರವಿ, ವೆಂಕಟೇಶ್, ಶಂಕರ್, ನಾರಾಯಣಸ್ವಾಮಿ, ಲಕ್ಷ್ಮಮ್ಮ, ಮುನಿನಾರಾಯಣಪ್ಪ, ಮುನಿಶಾಮಿ, ಚಿಕ್ಕನಹಳ್ಳಿ ವೆಂಕಟೇಶ್, ಮುಂತಾದವರು ಹಾಜರಿದ್ದರು.

# ವೈದ್ಯ ವೃತ್ತಿ ಶ್ರೇಷ್ಠವಾದ ವೃತ್ತಿ

## ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಅಧ್ಯಕ್ಷ ಡಾ.ಎಂ.ಆರ್. ಹುಲಿನಾಯ್ಕರ್ ಹೇಳಿಕೆ



**ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಆಸ್ಪತ್ರೆಯ ವತಿಯಿಂದ ಡಿ.12 ರಂದು ಗುರುವಾರ ಬೆಳಿಗ್ಗೆ 11 ಗಂಟೆಗೆ ಶ್ರೀದೇವಿ ವೈದ್ಯಕೀಯ ಕಾಲೇಜಿನ ಆವರಣದಲ್ಲಿ ನೂತನವಾಗಿ ಪ್ರವೇಶ ಪಡೆದಿರುವ 2024-25 ನೇ ಸಾಲಿನ ಪ್ರಥಮ ವರ್ಷದ ವೈದ್ಯಕೀಯ ವಿದ್ಯಾರ್ಥಿಗಳಿಗೆ ವೈದ್ಯ ವೃತ್ತಿಯ ಸಂಕೇತವಾಗಿರುವ ಬಿಳಿ ವರ್ಣದ ಸಮವಸ್ತ್ರ ಧಾರಣೆ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು. ಡಾ. ಎಂ.ಆರ್. ಹುಲಿನಾಯ್ಕರ್, ಮಾನವ ಸಂಪನ್ಮೂಲ ಮತ್ತು ಮಾಹಿತಿ ತಂತ್ರಜ್ಞಾನ ನಿರ್ದೇಶಕರಾದ ಎಂ.ಎಸ್.ಪಾಟೀಲ್, ಶ್ರೀದೇವಿ ಆಸ್ಪತ್ರೆಯ ನೇತ್ರತಜ್ಞರಾದ ಡಾ.ಲಾವಣ್ಯ, ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಎಂ.ಎಲ್.ಹರೇಂದ್ರಕುಮಾರ್, ಜೀವ ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ.ಟಿ.ಜೆ.ಸತೀಶ್, ಅಂಗರಚನಾಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ.ಸಿ.ಶಿವಲೀಲಾ ಇದ್ದರು.**

**ತುಮಕೂರು:** ಇತ್ತೀಚಿನ ದಿನಗಳಲ್ಲಿ ವೈದ್ಯಕೀಯ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುವ ವೈದ್ಯರಿಗೆ ಶಿಕ್ಷಣ ತುಂಬಾ ಅನಿವಾರ್ಯವಾಗಿದೆ. ವೈದ್ಯಕೀಯ ಕ್ಷೇತ್ರ ಪ್ರಪಂಚದ ಎಲ್ಲಾ ರಾಷ್ಟ್ರಗಳಲ್ಲಿಯೂ ಅತ್ಯಮೂಲ್ಯವಾಗಿರುತ್ತದೆ. ಅತ್ಯಧಿಕ ಗೌರವ ಇರುವ ವೃತ್ತಿ ಎಂದರೆ ಅದು 'ವೈದ್ಯ ವೃತ್ತಿ'ಯಾಗಿರುತ್ತದೆ. ಈ ಶ್ವೇತ ಸಮವಸ್ತ್ರ ವೈದ್ಯಕೀಯ ಲೋಕದ ಸಂಕೇತವಾಗಿದ್ದು, ವೈದ್ಯಕೀಯ ಕ್ಷೇತ್ರ ಪ್ರಪಂಚದ ಎಲ್ಲಾ ರಾಷ್ಟ್ರಗಳಲ್ಲಿಯೂ ಅತ್ಯಮೂಲ್ಯವಾಗಿರುತ್ತದೆ. ಅತ್ಯಧಿಕ ಗೌರವ ಇರುವ ವೃತ್ತಿ ಎಂದರೆ ಅದು ವೈದ್ಯ ವೃತ್ತಿಯಾಗಿರುತ್ತದೆ ಎಂದು ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಅಧ್ಯಕ್ಷರಾದ ಡಾ.ಎಂ.ಆರ್. ಹುಲಿನಾಯ್ಕರ್ ತಿಳಿಸಿದರು.

ನಗರದ ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಆಸ್ಪತ್ರೆಯ ವತಿಯಿಂದ ಡಿ.12 ರಂದು ಗುರುವಾರ ಬೆಳಿಗ್ಗೆ 11 ಗಂಟೆಗೆ ಶ್ರೀದೇವಿ ವೈದ್ಯಕೀಯ ಕಾಲೇಜಿನ ಆವರಣದಲ್ಲಿ ನೂತನವಾಗಿ ಪ್ರವೇಶ ಪಡೆದಿರುವ 2024-25 ನೇ ಸಾಲಿನ ಪ್ರಥಮ ವರ್ಷದ ವೈದ್ಯಕೀಯ ವಿದ್ಯಾರ್ಥಿಗಳಿಗೆ ವೈದ್ಯ ವೃತ್ತಿಯ ಸಂಕೇತವಾಗಿರುವ ಬಿಳಿ ವರ್ಣದ ಸಮವಸ್ತ್ರ ಧಾರಣೆ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಮಾನವ ಸಂಪನ್ಮೂಲ ಮತ್ತು ಮಾಹಿತಿ ತಂತ್ರಜ್ಞಾನ ನಿರ್ದೇಶಕರಾದ ಎಂ.ಎಸ್.ಪಾಟೀಲ್‌ರವರು ಮಾತನಾಡುತ್ತಾ ಶ್ರಮ ಮತ್ತು ಕಲಿಕೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕು. ಶ್ರೀದೇವಿ ಆಸ್ಪತ್ರೆಯಲ್ಲಿ ಸುಸಜ್ಜಿತ ಆಸ್ಪತ್ರೆಯ ಪ್ರಾಯೋಗಶಾಲೆಗಳು ಲಭ್ಯವಿದ್ದು, ಅದರ ಸದುಪಯೋಗವನ್ನು ಪಡೆದುಕೊಳ್ಳಬೇಕು. ನಮ್ಮಲ್ಲಿ ಡಿಜಿಟಲ್ ಗ್ರಂಥ ಬಂಡಾರವಿದೆ. ವೈದ್ಯಕೀಯ ವಿದ್ಯಾರ್ಥಿಗಳು ತಮ್ಮ ಶಿಕ್ಷಣ ಅವಧಿಯಲ್ಲಿ ಸಮಯ ಪರಿಪಾಲನೆ, ಕಾರ್ಯತತ್ಪರತೆ ಮತ್ತು ಜನರ ನೋವಿಗೆ ಸ್ಪಂದಿಸುವ ಮನೋಭಾವನೆಯನ್ನು ಬೆಳೆಸಿಕೊಂಡು ಒಂದು ಉತ್ತಮ ಆರೋಗ್ಯಕರವಾದ ಸಮಾಜದ ಕಲ್ಪನೆಯನ್ನು ಸಾಕಾರಗೊಳಿಸಬಹುದು. ರಾಜೀವ್ ಗಾಂಧಿ ವಿಶ್ವವಿದ್ಯಾಲಯದ ಮಟ್ಟದಲ್ಲಿ ವಿದ್ಯಾರ್ಥಿಗಳು ಉತ್ತಮ ರ್‍ಯಾಂಕ್‌ಗಳನ್ನು ಪಡೆದಿರುತ್ತಾರೆ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಶ್ರೀದೇವಿ ಆಸ್ಪತ್ರೆಯ ನೇತ್ರತಜ್ಞರಾದ ಡಾ.ಲಾವಣ್ಯ, ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಎಂ.ಎಲ್.ಹರೇಂದ್ರಕುಮಾರ್, ಜೀವ ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ.ಟಿ.ಜೆ.ಸತೀಶ್, ಅಂಗರಚನಾಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ.ಸಿ.ಶಿವಲೀಲಾ, ಶರೀರಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ.ಅರತಿ ಹಾಗೂ ವಿವಿಧ ವಿಭಾಗಗಳ ಮುಖ್ಯಸ್ಥರು ಮತ್ತು ವಿದ್ಯಾರ್ಥಿಗಳು, ಬೋಧಕ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

## ಮೃತ ವಿದ್ಯಾರ್ಥಿನಿಯರ ಪೋಷಕರಿಗೆ ತಲಾ 5 ಲಕ್ಷದ ಪರಿಹಾರ ಚೆಕ್ ವಿತರಣೆ

**ಕೋಲಾರ :** ಜಿಲ್ಲೆಯ ಮುಳಬಾಗಿಲು ಕೊತ್ತೂರು ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿಗಳು ಪ್ರವಾಸಕ್ಕೆ ಬಂದಿದ್ರು 46 ಶಾಲಾ ವಿದ್ಯಾರ್ಥಿಗಳು, 6 ಶಿಕ್ಷಕರು ಸೇರಿದಂತೆ ಒಟ್ಟು 57 ಜನರು ಬಸ್ನಲ್ಲಿ ಪ್ರವಾಸಕ್ಕೆ ತೆರಳಿದ್ದರು . ಸಂಜೆ ವೇಳೆ ಸಮುದ್ರ ನೀರಿನಲ್ಲಿ ಈಜುವಾಗ 4ವಿದ್ಯಾರ್ಥಿಗಳು ನೀರಿನಲ್ಲಿ ಕೊಚ್ಚಿ ಹೋಗಿದ್ದರು. ಪ್ರಸ್ತುತ ಸಮುದ್ರದಲ್ಲಿ ಕೊಚ್ಚಿ ಹೋಗಿದ್ದ 4 ವಿದ್ಯಾರ್ಥಿಗಳ ಮೃತದೇಹ ಪತ್ತೆ ಹಚ್ಚಲಾಗಿದ್ದು, ಇಂದು ವಿದ್ಯಾರ್ಥಿನಿಯರ ಪಾರ್ಥಿವ ಶರೀರಗಳನ್ನು ಕೋಲಾರ ಜಿಲ್ಲಾಡಳಿತ ಭವನದ ಬಳಿ ಮಾನ್ಯ ಜಿಲ್ಲಾಧಿಕಾರಿಗಳಾದ ಅಕ್ರಂ ಪಾಷ ಅವರು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ. ನಿಖಿಲ್ ಅಂತಿಮ ನಮನ ಸಲ್ಲಿಸಿ ಭಾವುಕರಾಗಿ ಅವರವರ ಊರಿಗೆ ಬೀಳ್ಕೊಟ್ಟರು. ಮೃತರ ಕುಟುಂಬಕ್ಕೆ ಸಾಂತ್ವನ ಸೂಚಿಸಿದ ಜಿಲ್ಲಾಧಿಕಾರಿಗಳು ಘಟನೆಗೆ ಸಂಬಂಧಿಸಿದಂತೆ ಪ್ರಾಂಶುಪಾಲೆ ಯನ್ನು ಅಮಾನತ್ತು ಮಾಡಲಾಗಿದೆ. ಉಳಿದ ಅತಿಥಿ ಶಿಕ್ಷಕರನ್ನು ಕೆಲಸದಿಂದ ವಜಾ ಮಾಡಲಾಗಿದೆ. ಸರ್ಕಾರವು ಘೋಷಿಸಿದ ತಲಾ 5 ಲಕ್ಷಗಳ ಪರಿಹಾರವು ಈಗಾಗಲೇ ಜಿಲ್ಲಾಧಿಕಾರಿಗಳ ಖಾತೆಗೆ ಜಮೆಯಗಿದ್ದು, ಇಂದು ಚೆಕ್ ಮುಖಾಂತರ ಮೃತ ವಿದ್ಯಾರ್ಥಿಗಳ ಪೋಷಕರಿಗೆ ತಲುಪಿಸಲಾಗುವುದು ಎಂದರು. ವಸತಿ ಶಿಕ್ಷಣ ಸಂಘಗಳ ಸಂಸ್ಥೆಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಕಾಂತರಾಜು ಅವರು ಮಾತನಾಡಿ ಮರಣೋತ್ತರ ವರದಿ ಆಧರಿಸಿ ಇಲಾಖಾ ವಿಚಾರಣೆ ನಡೆಸಲಾಗುವದು, ಘಟನೆಗೆ ಸಂಬಂಧಿಸಿದಂತೆ ನಿರ್ಲಕ್ಷ್ಯ ವಹಿಸಿದ ಯಾರನ್ನೂ ಬಿಡುವ ಪ್ರಶ್ನೆಯೇ ಇಲ್ಲ. ಸೂಕ್ತ ಕ್ರಮ ಜರುಗಿಸಲಾಗುವುದು ಎಂದರು. ಅವರೊಂದಿಗೆ ಅಂಬೇಡ್ಕರ್ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಪ್ರವೀಣ್ ಪಿ. ಬಾಗೇವಾಡಿ ,ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಕಾಂತರಾಜು, ಸಮಾಜಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಶ್ರೀನಿವಾಸ್ ಸೇರಿದಂತೆ ಜಿಲ್ಲೆಯ ಹಿರಿಯ ಅಧಿಕಾರಿಗಳು ಸಿಬ್ಬಂದಿಗಳು ಹಾಜರಿದ್ದರು.



## ಹನುಮನ ತೇರು ಎಳೆಯಲು ಜನವೋ ಜನ

**ಹುಳಿಯಾರು:** ಹುಳಿಯಾರು ಆಂಜನೇಯಸ್ವಾಮಿಯವರ ರಥೋತ್ಸವ ಅಪಾರ ಸಂಖ್ಯೆಯ ಭಕ್ತಸ್ತೋಮದೊಂದಿಗೆ ವಿಜೃಂಭಣೆಯಿಂದಲೂ, ಶ್ರದ್ಧಾಭಕ್ತಿಯಿಂದಲೂ ಶುಕ್ರವಾರ ಜರುಗಿತು. ಹನುಮಜಯಂತಿ ಅಂಗವಾಗಿ ಭಕ್ತಾಧಿಗಳ ಸೇವಾರ್ಥದಲ್ಲಿ ಶ್ರೀ ಸ್ವಾಮಿಯವರಿಗೆ ಪಂಚಾಮೃತ ಅಭಿಷೇಕ, ಪವಮಾನ ಹೋಮ, ಪೂರ್ಣಾಹುತಿ, ಮಹಾಮಂಗಳಾರತಿ, ಮುಂತಾದ ಧಾರ್ಮಿಕ ಕಾರ್ಯಕ್ರಮಗಳು ಶ್ರದ್ಧಾಭಕ್ತಿಯಿಂದ ನಡೆದವು. ರಥವನ್ನು ವಿವಿಧ ಪುಷ್ಪಗಳಿಂದ ಅಲಂಕರಿಸಿ, ಊರಿನಗ್ರಾಮದೇವತೆಗಳಾದ ಶ್ರೀದುರ್ಗಾಪರಮೇಶ್ವರಿ ಹಾಗೂ ಶ್ರೀ ಹುಳಿಯಾರಮ್ಮ ಅವರ ಸಮ್ಮುಖದಲ್ಲಿ ಕಳಸಕ್ಕೆ ಅಭಿಷೇಕ ನೆರವೇರಿಸಿ ವಿಶೇಷ ಅಲಂಕಾದಲ್ಲಿ ಕಂಗೊಳಿಸುತ್ತಿದ್ದ ಆಂಜನೇಯಸ್ವಾಮಿಯವರನ್ನು ಕುಳ್ಳಿರಿಸಿ ಮಂಗಳವಾದ್ಯದೊಂದಿಗೆ ವೈಭವದಿಂದ ರಥೋತ್ಸವ ನೆರವೇರಿಸಲಾಯಿತು.

ಭಕ್ತಾಧಿಗಳು ಉತ್ಸವದುದ್ದಕ್ಕೂ ಅಕ್ಕಿ, ನಾಣ್ಯ, ಪುರಿ ಹಾಗೂ ಬಾಳೆಹಣ್ಣು ಎಸೆಯುತ್ತಿದ್ದರೆ ಯುವಕರು ಮಡಿವಸ್ತದೊಂದಿಗೆ ಅತೀ ಉತ್ಸಾಹದಿಂದ ತೇರು ಎಳೆಯಲು ಮುಗಿಬಿದ್ದರು. ರಥೋತ್ಸವದ ನಂತರ ಕೆಲವರು ಹಣ್ಣುಕಾಯಿ ಸೇವೆ ಸಲ್ಲಿಸಿದರು.





**ದರಖಾಸ್ತು ಸಮಿತಿ ಅಧ್ಯಕ್ಷರಾಗಿ ಆನೇಪುರ ಹನುಮಂತಪ್ಪ, ಸಂತೆಹಳ್ಳಿ ನಾರಾಯಣಸ್ವಾಮಿ, ಸದಸ್ಯರಾಗಿ ನಾಗಪುರ ನವೀನ್ ಅವರನ್ನು ಶಾಸಕ ಕೆ.ವೈ.ನಂಜೇಗೌಡರು ಹಾಗೂ ಸರ್ಕಾರ ಆಯ್ಕೆ ಮಾಡಿದ ಹಿನ್ನೆಲೆಯಲ್ಲಿ ಅವರನ್ನು ಪಟ್ಟಣದ ಕೃಷಿಕ ಸಮಾಜ ಸಭಾಂಗಣದಲ್ಲಿ ಅಭಿನಂದಿಸಿ ಸನ್ಮಾನಿಸಲಾಯಿತು. ಡಿಸಿಸಿ ಕಾರ್ಯದರ್ಶಿ ನಿದರಮಂಗಲ ವೆಂಕಟಸ್ವಾಮಿ, ಮಾಜಿ ಜಿ.ಪಂ. ಉಪಾಧ್ಯಕ್ಷ ಪಿ.ನಾರಾಯಣಸ್ವಾಮಿ, ತಾಲೂಕು ಯಾದವ ಗೋಲ್ಲ ಸಂಘದ ಅಧ್ಯಕ್ಷ ಎ.ವೈ. ಗೋವಿಂದಪ್ಪ , ತಾಲೂಕು ರೈತ ಸಂಘದ ಅಧ್ಯಕ್ಷ ನಿಧರಮಂಗಲ ನಾಗಪ್ಪ, ಸರ್ಕಾರಿ ನೌಕರ ಸಂಘದ ಮಾಜಿ ಖಜಾಂಚಿ ಹಾಗೂ ಕಾರ್ಯದರ್ಶಿ ಚಳಗನಹಳ್ಳಿ ಟಿ. ವೆಂಕಟಸ್ವಾಮಿ, ಹಾಲಿ ನಿರ್ದೇಶಕರು ದೇವದತ್ತ ನಾಯಕ್, ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಶಿಕ್ಷಕರ ಸಂಘದ ಅಧ್ಯಕ್ಷ ಜಿ ಮುನಿಯಪ್ಪ, ಆಲಹಳ್ಳಿ ಸುರೇಶ್ ಯಾದವ್, ಸಂಘದ ಚಂದ್ರಶೇಖರ್, ನವೀನ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಮಾಜಿ ನಿರ್ದೇಶಕ ಸಂಜೀವಪ್ಪ, ದಿನ್ನಹಳ್ಳಿ ಶಾಲೆಯ ಮುಖ್ಯ ಶಿಕ್ಷಕ ಕಣಗಲ ವೆಂಕಟಸ್ವಾಮಿ, ದೊಡ್ಡಿ ಶಾಲೆಯ ಮುಖ್ಯ ಶಿಕ್ಷಕ ಮಾಸ್ತಿ ಮಂಜುನಾಥ್ ಇನ್ನು ಹಲವಾರು ಸ್ನೇಹಿತರು ಹಾಜರಿದ್ದರು.**

# ವಿಜಯಪುರದಲ್ಲಿ ಹನುಮ ಜಯಂತಿ ಸಂಭ್ರಮ

**ವಿಜಯಪುರ:** ಹಂಪೆ ಬಳಿಯ ಕಿಷ್ಕಿಂದೆಯ ಅಂಜನಾದ್ರಿ ಬೆಟ್ಟದಲ್ಲಿ ಜನಿಸಿದ ವೀರ ಹನುಮಂತ ಕನ್ನಡಿಗನೆಂದು ಹೇಳಿಕೊಳ್ಳಲು ಕನ್ನಡಿಗರು ಹೆಮ್ಮೆಪಟ್ಟುಕೊಳ್ಳಬೇಕಾಗಿದೆ ಎಂದು ಪುರಸಭಾ ಮಾಜಿ ಅಧ್ಯಕ್ಷ ಎಂ. ಸತೀಶ್ ಕುಮಾರ್ ತಿಳಿಸಿದರು.

ಇಲ್ಲಿನ ಇತಿಹಾಸ ಪ್ರಸಿದ್ಧ ಆನೇಕಲ್ ಛತ್ರದ ಇಷ್ಟಾರ್ಥಸಿದ್ಧಿ ಉತ್ತರಾಭಿಮುಖದ ಭಕ್ತ ಆಂಜನೇಯ ಸ್ವಾಮಿ ದೇವಾಲಯದಲ್ಲಿ ಹನುಮಜ್ಜಯಂತಿ ಪ್ರಯುಕ್ತ ಏರ್ಪಡಿಸಲಾಗಿದ್ದ ವಿಶೇಷ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡುತ್ತಿದ್ದರು.

ಪಟ್ಟಣದಲ್ಲಿಡೆ ಹನುಮ ಜಯಂತಿ ಕಾರ್ಯಕ್ರಮಗಳು; ಗಾಂಧಿ ಚೌಕದ ಶ್ರೀ ಕೋದಂಡರಾಮಸ್ವಾಮಿ ದೇವಾಲಯ, ರಾಮ ಮಂದಿರ ಬೀದಿಯ ಶ್ರೀರಾಮ ಮಂದಿರ ದೇವಾಲಯ, ಶ್ರೀ ಕ್ಷೇತ್ರವೆಂದೆ ಪ್ರಸಿದ್ಧ ಹೊಂದಿರುವ ದೇವನಹಳ್ಳಿ ರಸ್ತೆಯಲ್ಲಿರುವ ಅಭಯ ವೀರಾಂಜನೇಯ ದೇವಾಲಯ, ಹಾಗೂ ಇತಿಹಾಸ ಉಳ್ಳ ಪಂಚಮುಖಿ ಆಂಜನೇಯ ಸ್ವಾಮಿ ದೇವಾಲಯ, ಯಲ್ಲಮ್ಮ ದೇವಾಲಯ ಬಳಿವಿರುವ ಮೂಡಲ ಆಂಜನೇಯ ಸ್ವಾಮಿ , ಕೊಮ್ಮಸಂದ್ರ ಪಂಚಮುಖಿ ಆಂಜನೇಯ ಸ್ವಾಮಿ , ಚನ್ನರಾಯಪಟ್ಟಣ ರಸ್ತೆಯ ವೀರ ಆಂಜನೇಯ ಸ್ವಾಮಿ , ಗುರುಪ್ಪನ ಮಠದ ಬಳಿಯ ಹನುಮ ದೇವಾಲಯ, ಶಿಡ್ಲಘಟ್ಟ ರಸ್ತೆ ಹನುಮ ದೇವಾಲಯ, ಕೆರೆ ಕೋಡಿ ಬಳಿಯಲ್ಲಿರುವ ಎಲ್ಲಾ ದೇವಾಲಯಗಳಲ್ಲಿ ವಿಶೇಷ ಪೂಜಾ ಕಾರ್ಯಗಳೊಂದಿಗೆ ಬೆಳಗಿನಿಂದ ಸಂಜೆವರೆಗೂ ಅನ್ನ ಪ್ರಸಾದವು ವಿತರಿಸುವ ಮೂಲಕ ಎಲ್ಲಾ ದೇವಾಲಯಗಳಲ್ಲಿ ಅದ್ದೂರಿಯಾಗಿ



ಹನುಮ ಜಯಂತಿಯನ್ನು ಈ ಬಾರಿ ಎಲ್ಲೆಡೆ ಸಂಭ್ರಮ ಸಡಗರದಿಂದ ಆಚರಿಸಲಾಯಿತು.

ಹನುಮ ಜಯಂತಿ ನಿಮಿತ್ತ ಪಟ್ಟಣ ಸೇರಿದಂತೆ ಹೋಬಳಿಯಾದ್ಯಂತ ಬೆಳಗ್ಗೆಯಿಂದಲೇ ವಾಯು ಪುತ್ರನಿಗೆ ಮಹಾಭಿಷೇಕ, ರುದ್ರಾಭಿಷೇಕ ನೆರವೇರಿಸಲಾಯಿತು. ಹೋಮ-ಹವನದ ಮೂಲಕ ಪ್ರಾರ್ಥನೆ ಸಲ್ಲಿಸಲಾಯಿತು. ತುಳಸಿ ಅರ್ಚನೆ ಹಾಗೂ ಮಹಾಮಂಗಳಾರತಿ ಬೆಳಗ್ಗೆ ಶ್ರದ್ಧಾ-ಭಕ್ತಿಯಿಂದ ಪೂಜೆ, ಇಷ್ಟಾರ್ಥಗಳೊಂದಿಗೆ ನಾಡಿನ ಸಮೃದ್ಧಿಗೆ ಪ್ರಾರ್ಥಿಸಲಾಯಿತು.

ವಿಶೇಷ ಪೂಜೆ: ದೇವಾಲಯದಲ್ಲಿ ವಿಶೇಷವಾಗಿ ಶುಭ ಧನುರ್ ಲಗ್ನದಲ್ಲಿ ಶ್ರೀರಾಮನಾಮ ಸಾಪ್ತಾಹ ರಾಮಕೋಟಿ ಅಂಗವಾಗಿ ಸ್ವಾಮಿಗೆ ಫಲಪಂಚಾಮೃತ ಅಭಿಷೇಕ ತದನಂತರ ವಿಶೇಷ ಅಲಂಕಾರಗಳೊಂದಿಗೆ ಪೂಜಾ ಕಾರ್ಯಕ್ರಮಗಳು ಭಗವಂತನ ಪ್ರೇರಣೆಯಂತೆ ಅದ್ದೂರಿಯಾಗಿ ನಡೆಯಲಾಯಿತು.

### ಇತಿಹಾಸ ಪ್ರಸಿದ ಐಬಸಪುರ ಆಂಜೇನಯ್ಯ

**ದೇವಾಲಯದ ಭಕ್ತ ಪ್ರಕಾಶ್ ಮಾತನಾಡಿ, ಏಕ ಪತ್ನಿ ವ್ರತಸ್ಥ ಶ್ರೀರಾಮಚಂದ್ರನ ಪರಮ ಭಕ್ತನಾಗಿರುವ ಹನುಮಂತನು ಅವತಾರ ತಾಳಿದ ದಿನವನ್ನು ಹನುಮ ಜಯಂತಿ ಎಂದು ಆಚರಿಸಲಾಗುತ್ತದೆ. ಈ ಮಾಸದಲ್ಲಿ ಬರುವ ಈ ಹನುಮ ಜಯಂತಿಯನ್ನು ಭಾರತದಲ್ಲಿ ವಿಶಿಷ್ಟ ಹಾಗೂ ಶ್ರದ್ಧಾಭಕ್ತಿಯಿಂದ ಆಚರಿಸುತ್ತಾರೆ ಎಂದರು. ಪಂಚಮುಖಿ ದೇವಾಲಯದ ಅರ್ಚಕ ಅನಂತ ಶರ್ಮ ಮಾತನಾಡಿ, ಹನುಮನು ಹಿಂದೂ ಧರ್ಮಗ್ರಂಥಗಳಲ್ಲಿ ಪೂಜಿಸುವ ದೈವವಾಗಿದ್ದು, ಭಾರತದ ಮಹಾಕಾವ್ಯ ಎಂದೇ ಹೇಳಲಾಗುವ ರಾಮಾಯಣದಲ್ಲಿ ಪ್ರಮುಖ ಪಾತ್ರಗಳಲ್ಲೊಬ್ಬನಾಗಿದ್ದಾನೆ. ವಾಯುಪುತ್ರ, ಕಪಿವೀರ, ರಾಮಭಕ್ತ, ಮಾರುತಿ, ಸುಂದರ, ಅಂಜನಾತನಯ, ಆಂಜನೇಯ, ವಾನರ ಶ್ರೇಷ್ಠ, ಕೇಸರಿ ನಂದನ, ಹನುಮಂತ, ಎಂಬ ನಾನಾ ಹೆಸರಿನಲ್ಲಿ ಕರೆಯಲ್ಪಡುವ ಈ ಹನುಮನ ಉಲ್ಲೇಖ ವೈದಿಕ ಸಾಹಿತ್ಯದಲ್ಲೇ ಲಭಿಸುತ್ತದೆ ಇಂತಹ ಸ್ವಾಮಿಯ ಪೂಜಾ ಕಾರ್ಯಗಳು ಮಾಡುವುದು ನಮ್ಮ ಪುಣ್ಯ, ಎಂದರು.**

## ದಸೂಡಿಯಲ್ಲಿ ಹನುಮ ಜಯಂತಿ



**ಹುಳಿಯಾರು:** ಹೋಬಳಿಯ ಶ್ರೀ ಕ್ಷೇತ್ರ ದಸೂಡಿಯಲ್ಲಿ ಹನುಮ ಜಯಂತಿಯನ್ನು ಶನಿವಾರ ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು. ಸ್ವಾಮಿಗೆ ವಿಶೇಷ ಪಂಚಾಮೃತಾಭಿಷೇಕ ಮಾಡಿ 101 ಪೂಜೆಗಳಿಂದ ಶ್ರೀ ಸ್ವಾಮಿಯವರನ್ನು ರಂಜಿಸಿ, ಮಹಾಮಂಗಳಾರತಿ ಮಾಡಲಾಯಿತು. ಸಂಜೆ ಸುಮಂಗಲೆಯರಿಂದ ದೀಪಸ್ತಂಭವನ್ನು ಪ್ರತಿಷ್ಠಾಪಿಸಿ, ಕುಂಕುಮಾರ್ಚನೆ ನಡೆದು ಲಲಿತ ಸಹಸ್ರನಾಮ ಪಠಿಸಲಾಯಿತು. ಭಾನುವಾರ ಶ್ರೀ ಸ್ವಾಮಿಯವರ ರಥೋತ್ಸವ ಜರುಗಿತು. ನಾನಾ ಬಗೆಯ ಪುಷ್ಪಗಳಿಂದ ಅಲಂಕೃತಗೊಂಡ ಭವ್ಯ ಮಂಟಪದಲ್ಲಿ ಆಂಜನೇಯಸ್ವಾಮಿಯವರನ್ನು ಕೂರಿಸಿ, ರಾಜಬೀದಿಗಳಲ್ಲಿ ಸಕಲ ಬಿರುದಾವಳಿಗಳ ಸಮೇತ, ಗೋವಿಂದ ನಾಮಸ್ಮರಣೆಯೊಂದಿಗೆ ಸ್ವಾಮಿಗೆ ಜೈಕಾರ ಹಾಕುತ್ತ, ಅದ್ದೂರಿ ಮೆರವಣಿಗೆ ಮಾಡಲಾಯಿತು. ಉತ್ಸವದ ಮುಂದೆ ವಿವಿಧ ಭಜನಾ ಮಂಡಳಿಗಳಿಂದ ಭಜನಾ ಕಾರ್ಯಕ್ರಮ, ವಿಶೇಷ ಕೋಲಾಟ, ಮಂಗಳವಾದ್ಯಗಳು ನಡೆದು ಉತ್ಸವಕ್ಕೆ ವಿಶೇಷ ಮೆರಗು ತಂದಿತ್ತು. ವೈಭವದ ರಾಜಬೀದಿ ಉತ್ಸವ ಮುಕ್ತಾಯಗೊಂಡ ನಂತರ ದೇವಾಲಯದಲ್ಲಿ ಆಗಮಿಸಿದ ಭಕ್ತರಿಗೆ ಅನ್ನ ಸಂತರ್ಪಣೆ ನಡೆಯಿತು. ಅಪಾರ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ಸ್ವಾಮಿಯ ದರ್ಶನ ಪಡೆದು 'ಮಾರುತಿರಾಯನ' ಕೃಪೆಗೆ ಪಾತ್ರರಾದರು.

# ಸಂಜೆ ಟಿಪ್ಸ್

## ಜಿಯೋದಿಂದ 'ನ್ಯೂ ಇಯರ್ ವೆಲ್ಕಮ್ ಪ್ಲಾನ್ -2025' ಬಿಡುಗಡೆ

ರಿಲಯನ್ಸ್ ಜಿಯೋ ಕಂಪನಿಯು ಹೊಸ ವರ್ಷವನ್ನು ಸ್ವಾಗತಿಸಲು ತನ್ನ ಗ್ರಾಹಕರಿಗೆ 'ನ್ಯೂ ಇಯರ್ ವೆಲ್ಕಮ್ ಪ್ಲಾನ್ -2025' ಬಿಡುಗಡೆ ಮಾಡಿದೆ. ಈ ಯೋಜನೆಯ ಬೆಲೆ 2025 ನಿಗದಿಪಡಿಸಲಾಗಿದೆ. ದೀರ್ಘಾವಧಿಯ ಯೋಜನೆ ಇದಾಗಿದ್ದು, ಅನಿಯಮಿತ 5ಜಿ ಡೇಟಾ, ಉಚಿಯ ಎಸ್‌ಎಂಎಸ್ ಮತ್ತು 200 ದಿನಗಳ ಅನಿಯಮಿತ 5ಜಿ ಡೇಟಾ, ವಾಯ್ಸ್, ಎಸ್‌ಎಂಎಸ್ ಜೊತೆಗೆ 2,150ರ ಮೌಲ್ಯದ ಕೂಪನ್ ಸಹ ಸಿಗಲಿದೆ.

**ಯಾರಿಗೆಲ್ಲ ಲಭ್ಯ:** ಈ ಯೋಜನೆಯು ಜಿಯೋದ ಹಾಲಿ ಮತ್ತು ಹೊಸ ಗ್ರಾಹಕರಿಗೂ ಲಭ್ಯ. 2024ರ ಡಿಸೆಂಬರ್ 11ರಿಂದ 2025ರ ಜನವರಿ 11ರ ವರೆಗೆ ಈ ಯೋಜನೆ ಜಾರಿಯಲ್ಲಿ ಇರಲಿದೆ. ಮೈ ಜಿಯೋ ಆಪ್, ಜಿಯೋದ ಅಧಿಕೃತ ವೆಬ್ಸೈಟ್ ಅಥವಾ ಅಧಿಕೃತ ರಿಟೇಲರ್ ಮೂಲಕ ರೀಚಾರ್ಜ್ ಮಾಡಬಹುದು.




**ಯೋಜನೆಯ ವಿವರ ಹೀಗಿದೆ :** ಅನಿಯಮಿತ 5ಜಿ ಡೇಟಾ: 500 ಜಿಬಿಯಷ್ಟು 4 ಜಿ ಡೇಟಾ (ದಿನಕ್ಕೆ 2.5 ಜಿಬಿಯಷ್ಟು) ಅನಿಯಮಿತ ಕರೆ ಮತ್ತು ಎಸ್‌ಎಂಎಸ್ ಸೇವೆ 2,150ರ ಮೌಲ್ಯದ ಪಾರ್ಟ್ನರ್ ಕೂಪನ್, ಜಿಯೋದ 349ರ ಪ್ಲಾನ್ 200 ದಿನಗಳಿಗೆ 2,493ರಷ್ಟು ಆಗುತ್ತದೆ. ಇದಕ್ಕೆ ಹೋಲಿಸಿದರೆ ಈ ಹೊಸ ಪ್ಲಾನ್ನಲ್ಲಿ 468ರಷ್ಟು ಉಳಿತಾಯ ಆಗಲಿದೆ.

**ಪಾರ್ಟ್ನರ್ ಕೂಪನ್ :** ಅಜಿಯೋ ಖರೀದಿಗೆ 2500 ಅಥವಾ ಹೆಚ್ಚಿನ ಮೊತ್ತದ ಖರೀದಿಸಿದರೆ 500ರ ವಿನಾಯಿತಿ ಸಿಗಲಿದೆ, ಲಿಂಕ್ ಬಳಸಿ ರಿಡೀಮ್ ಮಾಡಬಹುದು. ಸ್ವಿಗ್ಗಿಯಲ್ಲಿ 499ರ ಮೇಲಿನ ಖರೀದಿಗೆ 150 ವಿನಾಯಿತಿ. EaseMyTrip.com ಮೊಬೈಲ್ ಆಪ್ ಮತ್ತು ವೆಬ್ಸೈಟ್ ಮೂಲಕ ಫ್ಲೈಟ್ ಟಿಕೆಟ್ ಬುಕಿಂಗ್ ಮಾಡಿದರೆ 150 ವಿನಾಯಿತಿ.

## ಮೊಟ್ಟೆ ಸಾಂಬಾರ್

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಈರುಳ್ಳಿ– 3 ಬೆಳ್ಳುಳ್ಳಿ– 1 ಮೊಟ್ಟೆ– 5 ಶುಂಠಿ ಸೋಂಕಾಳು ಟೊಮೆಟೋ– 1 (ದೊಡ್ಡದು) ದನಿಯಾ ಪುಡಿ ಖಾರದ ಪುಡಿ ಕೊತ್ತಂಬರಿ ಸೊಪ್ಪು ತೆಂಗಿನ ಕಾಯಿ ಪುದಿನ ಕರಿಬೇವು ಅರಶಿನ ಮೊಟ್ಟೆ ಮಸಾಲ ಉಪ್ಪು ಮೊಟ್ಟೆ

### ಮಾಡುವ ವಿಧಾನ

ಮೊದಲು ಪಾತ್ರೆಯಲ್ಲಿ ಎಣ್ಣೆ ಹಾಕಿ ಒಲೆ ಹಚ್ಚಿ ಹೆಚ್ಚಿರುವ 2 ಈರುಳ್ಳಿ ಹಾಕಿ ಫ್ರೈ ಮಾಡಿಕೊಳ್ಳಿ, ಇದಕ್ಕೆ ಬೆಳ್ಳುಳ್ಳಿ, ಶುಂಠಿ, ಸೋಂಕಾಳು ಹಾಕಿ ಚೆನ್ನಾಗಿ ಫ್ರೈ ಮಾಡಿಕೊಳ್ಳಿ. ಒಂದು 5 ನಿಮಿಷ ಚೆನ್ನಾಗಿ ಫ್ರೈ ಆದ ಬಳಿಕ ಟೊಮೆಟೋ ಹಾಕಿ ಮಿಕ್ಸ್ ಮಾಡಿ. ಬಳಿಕ ಇದಕ್ಕೆ ದನಿಯಾ ಹಾಗೂ ಖಾರದ ಪುಡಿ ಹಾಕಿ ಫ್ರೈ ಮಾಡಿಕೊಳ್ಳಿ. ಆದರೆ ಈ ವೇಳೆ ಉರಿ ಸಣ್ಣಗೆ ಇರಲಿ. ಬಳಿಕ ಉರಿ ಆಫ್ ಮಾಡಿ. ಬಳಿಕ ಸಣ್ಣ ಮಿಕ್ಸರ್ ಜಾರ್ ತೆಗೆದುಕೊಂಡು ಈ ಹುರಿದುಕೊಂಡ ಮಸಾಲೆ ಹಾಕಿ, ಬಳಿಕ ಅದಕ್ಕೆ ಕೊತ್ತಂಬರಿ ಸೊಪ್ಪು, ಸ್ವಲ್ಪ ಕಾಯಿ ಹಾಕಿ. ಆದರೆ ಬೇರೆ ಯಾವ ಮಸಾಲೆಯನ್ನೂ ಹಾಕಬೇಡಿ. ಸ್ವಲ್ಪ ನೀರು ಹಾಕಿಕೊಂಡು ನುಣ್ಣಗೆ ರುಬ್ಬಿಕೊಳ್ಳಿ. ಈ ರುಬ್ಬಿದ ಮಸಾಲೆಯನ್ನು ಬದಿಗಿಡಿ. ಈಗ ಒಲೆ ಮೇಲೆ ಪಾತ್ರೆಯಿಟ್ಟು ಅದಕ್ಕೆ ಮತ್ತೆ ಸ್ವಲ್ಪ ಎಣ್ಣೆ ಹಾಕಿ. ಎಣೆ ಕಾದ ಬಳಿಕ 1 ಹೆಚ್ಚಿರುವ ಈರುಳ್ಳಿ ಹಾಕಿ. ಪುದಿನ, ಕರಿಬೇವು, ಎರಡು ಹಸಿಮೆಣಸು ಹಾಕಿ ಫ್ರೈ ಮಾಡಿಕೊಳ್ಳಿ. 2 ನಿಮಿಷದ ಬಳಿಕ ನೀವು ರುಬ್ಬಿಕೊಂಡಿರುವ ಮಸಾಲೆಯನ್ನು ಇದಕ್ಕೆ ಹಾಕಿ ಚೆನ್ನಾಗಿ ಮಿಕ್ಸ್ ಮಾಡಿಕೊಳ್ಳಿ. ಬಳಿಕ ಇದಕ್ಕೆ ಅರಶಿನ ಪುಡಿ ಹಾಗೂ ಮೊಟ್ಟೆ ಮಸಾಲ ಹಾಕಿ ಮಿಶ್ರಣ ಮಾಡಿ. ನಿಮಗೆ ಎಷ್ಟು ನೀರು ಬೇಕೋ ಅಷ್ಟು ಹಾಕಿಕೊಂಡು ಮಿಕ್ಸ್ ಮಾಡಿ. ಗ್ರೇವಿ ಎಷ್ಟು ತೆಳು ಬೇಕು ಎಂಬುದಕ್ಕೆ ಸರಿಯಾಗಿ ನೀರು ಹಾಕಿ ರುಚಿಗೆ ತಕ್ಕಷ್ಟು ಉಪ್ಪು ಹಾಕಿ ಚೆನ್ನಾಗಿ ತಿರುಗಿಸಿ. ಬಳಿಕ ಕುದಿಯಲು ಬಿಡು. ಇದು ಕುಡಿಯಲಯ ಆರಂಭಿಸಿದಾಗ ಉರಿ ಸಣ್ಣಗೆ ಮಾಡಿ 5 ಮೊಟ್ಟೆಗಳನ್ನು ಒಡೆದು ಅದಕ್ಕೆ ಹಾಕಿಕೊಳ್ಳಿ. ಈ ವೇಳೆ ಸಾಂಬಾರ್ ಅನ್ನು ತಿರುಗಿಸಲು ಹೋಗಬೇಡಿ. ತಿರುಗಿಸಿದರೆ ಮೊಟ್ಟೆ ಕರಡಿ ಹೋಗುತ್ತದೆ. ಈ ರೀತಿ ಹಾಕಿ 5 ನಿಮಿಷ ಕುದಿಯಲು ಬಿಡಿ, ನಂತರ ಒಲೆ ಆಫ್ ಮಾಡಿ ಇಳಿಸಿದರೆ ರುಚಿಕರ ಮೊಟ್ಟೆ ಸಾಂಬಾರ್ ರೆಡಿ.

## ಕಾಯಿಲೆಗಳ ವಿರುದ್ಧ ಹೋರಾಡುವ ಸಿಹಿ ಗೆಣಸು

### ಹೆಲ್ತ್ ಟಿಪ್ಸ್



ಭಾರತದಲ್ಲಿ ಸಿಹಿ ಗೆಣಸನ್ನು ಬರದ ಪ್ರದೇಶಗಳಲ್ಲಿ ಹೆಚ್ಚಾಗಿ ಬೆಳೆಯಲಾಗುತ್ತದೆ. ಇದಕ್ಕೆ ಹೆಚ್ಚಿನ ನೀರಿನ ಸೌಲಭ್ಯ ಬೇಕಿರದೇ ಇರೋದರಿಂದ ಇದು ಭಾರತದಲ್ಲಿ ಸುಲಭವಾಗಿ ಲಭ್ಯವಿದೆ. ನೇರಳೆ ತಳಿಯು ಆಂಥೋಸಯಾನಿನ್ಗಳನ್ನು ಹೊಂದಿರುತ್ತದೆ ಎಂದು ವಿವಿಧ ಸಂಶೋಧನಾ ಪ್ರಬಂಧಗಳು ಕಂಡುಕೊಂಡಿವೆ, ಇದು ಜೀವಕೋಶಗಳನ್ನು ಸೂಕ್ಷ್ಮ ಮಟ್ಟದಲ್ಲಿ ಆರೋಗ್ಯಕರವಾಗಿರಿಸುತ್ತದೆ. ಅವು ಜೀವಕೋಶದ ಗೋಡೆಗಳನ್ನು ಜೋಡಿಸುತ್ತವೆ, ಸೂಕ್ಷ್ಮಜೀವಿಗಳು ಮತ್ತು ರೋಗಕಾರಕಗಳ ವಿರುದ್ಧ ರಕ್ಷಣಾತ್ಮಕ ತಡೆಗೋಡೆಯಾಗಿ ಕಾರ್ಯನಿರ್ವಹಿಸುತ್ತವೆ.

ಆದರೆ ಇತರ ಬಣ್ಣಗಳಲ್ಲಿಯೂ ದೊರೆಯುವ ಸಿಹಿ ಗೆಣಸು ಉತ್ಕರ್ಷಣ ನಿರೋಧಕಗಳಲ್ಲಿ ಸಮೃದ್ಧವಾಗಿದೆ. ಇದು ಜೀವಕೋಶಗಳನ್ನು ಆಕ್ಸಿಡೇಟಿವ್ ಹಾನಿಯಿಂದ ರಕ್ಷಿಸುತ್ತದೆ.

ಇವುಗಳಲ್ಲಿ ಕ್ಯಾರೊಟಿನಾಯ್ಡ್ಗಳು, ಫೀನಾಲಿಕ್ ಆಮ್ಲ ಮತ್ತು ಫ್ಲೇವನಾಯ್ಡ್ಗಳಂತಹ ಜೈವಿಕ-ಸಕ್ರಿಯ ಘಟಕಗಳು ಸಮೃದ್ಧವಾಗಿದ್ದು, ಟಾಕ್ಸಿನ್ಗಳು ಮತ್ತು ಸ್ವತಂತ್ರ ರಾಡಿಕಲ್ಗಳನ್ನು ನಿವಾರಿಸುತ್ತದೆ. ಇದು ದೇಹದಲ್ಲಿನ ಉರಿಯೂತವನ್ನು ಕಡಿಮೆ ಮಾಡುತ್ತದೆ. ಇದರ ಸೇವನೆಯಿಂದ ಮಧುಮೇಹ ಕಡಿಮೆ ಆಗುತ್ತದೆ. ಸಿಹಿ ಗೆಣಸು, ಬೆಳೆಯುತ್ತಿರುವ ಮಕ್ಕಳಿಗೆ ಕಾರ್ಬೋಹೈಡ್ರೇಟ್ ಅನ್ನು ಹೆಚ್ಚಾಗಿ ನೀಡುತ್ತದೆ. ಉಪಹಾರ ಧಾನ್ಯಗಳಲ್ಲಿ ಲಭ್ಯವಿರುವ ಸಂಸ್ಕರಿಸಿದ ಮತ್ತು ಸಂಸ್ಕರಿಸಿದ ಕಾರ್ಬೋಹೈಡ್ರೇಟ್ಗಳು ರಕ್ತದಲ್ಲಿನ ಸಕ್ಕರೆಯನ್ನು ಹೆಚ್ಚಿಸುತ್ತವೆ. ಆದರೆ ಹೆಚ್ಚು ನಿಧಾನವಾಗಿ ಜೀರ್ಣವಾಗುವ ಸಂಕೀರ್ಣ ಕಾರ್ಬೋಹೈಡ್ರೇಟ್ಗಳು, ರಕ್ತದಲ್ಲಿನ ಸಕ್ಕರೆಯ ಹೆಚ್ಚಳವನ್ನು ತಡೆಯುತ್ತದೆ, ಹೆಚ್ಚಿನ ಹಸಿವನ್ನು ನಿವಾರಿಸುತ್ತದೆ, ಅಲ್ಪಾವಧಿಯಲ್ಲಿ ತೂಕ ಇಳಿಕೆಗೂ ಇದು ಸಹಾಯಕಾರಿ. ಇದು ದೀರ್ಘಾವಧಿಯಲ್ಲಿ ಒಟ್ಟಾರೆ ಆರೋಗ್ಯವನ್ನು ಹೆಚ್ಚಿಸುತ್ತದೆ.

ಸಿಹಿ ಗೆಣಸು ಪೊಟ್ಯಾಸಿಯಮ್, ಮೆಗ್ನೀಸಿಯಮ್, ಕಬ್ಬಿಣ, ತಾಮ್ರ ಮತ್ತು ಕೆಲವು ಬಿ ಜೀವಸತ್ವಗಳು, ಸಿ ಮತ್ತು ಇ ನಂತಹ ಖನಿಜಗಳಲ್ಲಿ ಸಮೃದ್ಧವಾಗಿದೆ. ಹೃದಯಕ್ಕೆ ಸಂಬಂಧಿಸಿದಂತೆ, ಸಿಹಿ ಗೆಣಸು ಬಾಳೆಹಣ್ಣಿಗಿಂತ ಹೆಚ್ಚು ಪೊಟ್ಯಾಸಿಯಮ್ ಅನ್ನು ಹೊಂದಿರುತ್ತದೆ ಮತ್ತು ದೇಹದ ಅನೇಕ ಕಾರ್ಯಗಳಿಗೆ ಸಹಾಯ ಮಾಡುತ್ತದೆ.ದ್ರವ ನಿಯಂತ್ರಣ ಮತ್ತು ರಕ್ತದೊತ್ತಡಗಳನ್ನು ಆರೋಗ್ಯಕರ ಮಟ್ಟಕ್ಕೆ ಇರಿಸುವಲ್ಲಿ ಇದು ಸಹಾಯಕ. ಈ ಸೂಪರ್ಫುಡ್ ಒಟ್ಟಾರೆ ರೋಗನಿರೋಧಕ ಶಕ್ತಿ ಬೂಸ್ಟರ್ ಆಗಿದೆ ಅಂದ್ರೂ ತಪ್ಪಾಗಲಾರದು. ಸಿಹಿ ಗೆಣಸುಗಳನ್ನು ಕುದಿಸಿ ತಣ್ಣಗಾಗಿಸಿದರೆ, ಅವು ನಿರೋಧಕ ಪಿಷ್ಟ ಅಥವಾ ಜೆಲ್ಲಿ ತರಹದ ವಸ್ತುವನ್ನು ಬಿಡುಗಡೆ ಮಾಡುತ್ತವೆ. ಇದು ರಕ್ತದಲ್ಲಿನ ಸಕ್ಕರೆಯ ಅಂಶವನ್ನು ಅನ್ನು ತಡೆಯುತ್ತದೆ. ಇದು ಗರ್ಭಿಣಿಯರಿಗೆ ಹೆಚ್ಚು ಉತ್ತಮ. ಇದರಿಂದ ಅವರ ಜೀವಕೋಶದ ಆರೋಗ್ಯ ಮತ್ತು ಹೊಟ್ಟೆಯಲ್ಲಿನ ಭ್ರೂಣದ ಆರೋಗ್ಯ ದೃಢವಾಗಿರುತ್ತದೆ. ಸಿಹಿ ಗೆಣಸನ್ನು ಅತಿಯಾಗಿ ಬೇಯಿಸುವುದರಿಂದ ಅವುಗಳಲ್ಲಿನ ಬೀಟಾ-ಕ್ಯಾರೋಟಿನ್ ಮಟ್ಟವು ಕಡಿಮೆಯಾಗುತ್ತದೆ. ಆದ್ದರಿಂದ ಸಿಹಿ ಗೆಣಸನ್ನು ಅತಿಯಾಗಿ ಬೇಯಿಸದೇ ಅವುಗಳನ್ನು ಆಗೆಯೇ ತಿನ್ನುವುದು ಬೀಟಾ-ಕ್ಯಾರೋಟಿನ್ ನಂತಹ ಪೋಷಕಾಂಶಗಳನ್ನು ಪಡೆಯುವುದಕ್ಕೆ ಉತ್ತಮ ದಾರಿ. ಆದರೆ ಅವು ಪಿಷ್ಟ ಅಂಶವನ್ನು ಹೊಂದಿವೆ ಎಂದು ನೆನಪಿಡಿ. ಆದ್ದರಿಂದ ಅವುಗಳನ್ನು ಮಿತವಾಗಿ ಸೇವನೆ ಮಾಡೋದು ಹೆಚ್ಚು ಸೂಕ್ತ. ಒಬ್ಬ ಸಾಮಾನ್ಯ ವ್ಯಕ್ತಿ ದಿನಕ್ಕೆ ಸುಮಾರು 100 ಗ್ರಾಂ ಸಿಹಿ ಗೆಣಸನ್ನು ಸೇವಿಸಬಹುದು. ಮಧುಮೇಹ ಇರೋರು ವಾರಕ್ಕೆ ಎರಡು ಬಾರಿ ಇದನ್ನು ಸೇವಿಸಬಹುದು.

## ಕೆಂಪು ಬೇಳೆ, ಅಕ್ಕಿ ಮತ್ತು ಜೇನುತುಪ್ಪದ ಫೇಸ್ ಪ್ಯಾಕ್

### ಬ್ಯೂಟಿ ಟಿಪ್ಸ್



ಚಮಚ ಕೆಂಪು ಬೇಳೆಯನ್ನು ಅರ್ಧ ಕಪ್ ನೀರಿನಲ್ಲಿ ರಾತ್ರಿ ನೆನೆಸಿ. ಮರುದಿನ ಬೆಳಗ್ಗೆ ಇದನ್ನು ಮಿಕ್ಸಿಯಲ್ಲಿ ಹಾಕಿ ರುಬ್ಬಿ ನುಣ್ಣಗೆ ಪೇಸ್ಟ್ ಮಾಡಿಕೊಳ್ಳಿ. ಈ ಮಿಶ್ರಣಕ್ಕೆ ಒಂದು ಚಮಚ ಅಕ್ಕಿ ಪುಡಿಯನ್ನು ಸೇರಿಸಿ ಮಿಶ್ರಣ ಮಾಡಿ. ಈ ಮಿಶ್ರಣಕ್ಕೆ ಒಂದು ದೊಡ್ಡ ಚಮಚ ಜೇನುತುಪ್ಪವನ್ನು ಸೇರಿಸಿ ಒಂದು ಪೇಸ್ಟ್ ತಯಾರಿಸಿಕೊಳ್ಳಿ. ಈ ಎಲ್ಲಾ ವಸ್ತುಗಳನ್ನು ಸರಿಯಾದ ಪ್ರಮಾಣದಲ್ಲಿ ಹಾಕಿದ ನಂತರ ಉತ್ತಮ ರೀತಿಯಲ್ಲಿ ಚೆನ್ನಾಗಿ ಮಿಶ್ರಣ ಮಾಡಿಕೊಳ್ಳಿ. ಈ ಪೇಸ್ಟ್ ತುಂಬಾ ಗಟ್ಟಿಯಾಗಿದ್ದರೆ ಇದಕ್ಕೆ ಒಂದು ಸ್ವಲ್ಪ ಹಾಲನ್ನು ಮಿಶ್ರಣಮಾಡಿ ಪೇಸ್ಟನ್ನು ನಯವಾಗಿಸಿ ಕೊಳ್ಳಬಹುದು.

ಈ ಮಿಶ್ರಣವನ್ನು ನಿಮ್ಮ ಮುಖಕ್ಕೆ ಹಚ್ಚಿದ 15 ರಿಂದ 20 ನಿಮಿಷಗಳ ಕಾಲ ಹಾಗೆಯೇ ಬಿಡಿ. 15 ರಿಂದ 20 ನಿಮಿಷಗಳ ನಂತರ ನಿಮ್ಮ ಮುಖವನ್ನು ಐದು ನಿಮಿಷಗಳ ಕಾಲ ನಿಧಾನವಾಗಿ ಮಸಾಜ್ ಮಾಡಿ ಮತ್ತು ಚೆನ್ನಾಗಿ ತೊಳೆಯಿರಿ. ಈ ಫೇಸ್ ತಯಾರಿಸಲು ಬಳಸಿರುವ ಎಲ್ಲಾ ಪದಾರ್ಥಗಳು ನಿಮ್ಮ ಮುಖದ ಮೇಲಿರುವ ಕಲೆಗಳನ್ನು ತೆಗೆದುಹಾಕುತ್ತದೆ. ಇದರಲ್ಲಿ ಬಳಸಿರುವ ಜೇನುತುಪ್ಪವು ನಿಮ್ಮ ಮುಖವನ್ನು ಹೊಳೆಯುವಂತೆ ಮಾಡುತ್ತದೆ. ಹಾಲಿನ ಮಿಶ್ರಣವು ನಿಮಗೆ ಹೊಳೆಯುವ ಚರ್ಮವನ್ನು ನೀಡುವುದರಲ್ಲಿ ಯಾವುದೇ ರೀತಿಯ ಅನುಮಾನವಿಲ್ಲ. ಈ ಎಲ್ಲಾ ಪದಾರ್ಥಗಳು ಚರ್ಮಕ್ಕೆ ಉತ್ತಮವಾದ ನೋಟವನ್ನು ನೀಡುತ್ತದೆ.

## ಬಾಲಿವುಡ್ ನಟಿ ಮಾನುಷಿ ಚಿಲ್ಲರ್ ಡೇಟಿಂಗ್ ವಿಚಾರ ಭಾರಿ ಚರ್ಚೆ!



ಮಾನುಷಿ ಚಿಲ್ಲರ್ ಮಹಾರಾಷ್ಟ್ರದ ಮಾಜಿ ಮುಖ್ಯಮಂತ್ರಿ ಮೊಮ್ಮಗನೊಂದಿಗೆ ಡೇಟಿಂಗ್ ಮಾಡುತ್ತಿದ್ದಾರೆ ಎಂಬ ಸುದ್ದಿ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಅವರು ಮಹಾರಾಷ್ಟ್ರದ ಮಾಜಿ ಮುಖ್ಯಮಂತ್ರಿ ಸುಶೀಲ್ ಕುಮಾರ್ ಶಿಂಧೆ ಅವರ ಮೊಮ್ಮಗ ವೀರ್ ಪಹಾರಿಯಾ ಅವರನ್ನು ಪ್ರೀತಿಸುತ್ತಿದ್ದಾರೆ ಎಂಬ ವದಂತಿಗಳು ಬಾಲಿವುಡ್ ಇಂಡಸ್ಟ್ರಿಯಲ್ಲಿ ಹರಿದಾಡುತ್ತಿವೆ.

ಇತ್ತೀಚೆಗಷ್ಟೇ ವೀರ್ ಮಾನುಷಿ ಚಿಲ್ಲರ್ ಜೊತೆ ಡೇಟಿಂಗ್ ಮಾಡುತ್ತಿರುವ ವಿಡಿಯೋವೊಂದು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದ್ದು, ಈ ಬಗ್ಗೆ ಬಾಲಿವುಡ್ ನಲ್ಲಿ ಕುತೂಹಲಕಾರಿ ಚರ್ಚೆಯೊಂದು ನಡೆದಿದೆ.. ಬಾಲಿವುಡ್ ಸೋಶಿಯಲ್ ಮೀಡಿಯಾ ಬಳಕೆದಾರರೊಬ್ಬರು ಮಾನುಷಿ ವೀರ್ ಅವರ ಭುಜದ ಮೇಲೆ ತಲೆಯಿಟ್ಟಿರುವ ಪೋಸ್ಟ್ ಅನ್ನು ಹಂಚಿಕೊಂಡಿದ್ದಾರೆ ಹೀಗಾಗಿ ಈ ಬಗ್ಗೆ ಚರ್ಚೆ ನಡೆಯುತ್ತಿದೆ.

ಇದಲ್ಲದೇ ಒರ್ರಿ, ಜಾನ್ವಿ ಕಪೂರ್ ಮತ್ತು ಅವರ ಗೆಳೆಯ ಶಿಖರ್ ಪಹಾರಿಯಾ ಅವರೊಂದಿಗೆ ಪ್ರವಾಸಕ್ಕೆ ಹೋಗಿರುವ ಫೋಟೋಗಳು ಸೋಷಿಯಲ್ ಮಿಡಿಯಾಲದಲ್ಲಿ ಹರಿದಾಡುತ್ತಿದ್ದು, ಆ ಫೋಟೋದಲ್ಲಿ ಮಾನುಷಿ ಮತ್ತು ವೀರ್ ಪಹಾರಿಯಾ ಕೂಡ ಇದ್ದಾರೆ ಎಂಬ ಚರ್ಚೆ ಶುರುವಾಗಿದೆ. ಇದು ಅವರ ಡೇಟಿಂಗ್ ವದಂತಿಗಳಿಗೆ ಬಲ ನೀಡಿದೆ.

ಇನ್ನು ಹರಿಯಾಣದ ಮಾನುಷಿ ಚಿಲ್ಲರ್ 2017 ರಲ್ಲಿ ವಿಶ್ವಸುಂದರಿಯಾದರು.. ಬಳಿಕ ಸಿನಿರಂಗಕ್ಕೆ ಪಾದಾರ್ಪಣೆ ಮಾಡಿದರು. ಅಕ್ಷಯ್ ಕುಮಾರ್ ಅವರ ಮೊದಲ ಚಿತ್ರದಲ್ಲಿ ನಾಯಕಿಯಾಗಿ ನಟಿಸಿದ್ದ ಮಾನುಷಿ ಚಿಲ್ಲರ್ ಬಾಲಿವುಡ್ ನಲ್ಲಿ ಸತತ ಚಿತ್ರಗಳನ್ನು ಮಾಡುತ್ತಿದ್ದರೂ ದೊಡ್ಡ ಚಿತ್ರಗಳಲ್ಲಿ ಮಿಂಚಲು ಸಾಧ್ಯವಾಗಿರಲಿಲ್ಲ.

ಸದ್ಯ ಮಾನುಷಿ ಚಿಲ್ಲರ್ ಜೊತೆ ಡೇಟಿಂಗ್ ಮಾಡುತ್ತಿರುವ ವೀರ್ ಪಹಾರಿಯಾ ಮಹಾರಾಷ್ಟ್ರದ ಮಾಜಿ ಸಿಎಂ ಸುಶೀಲ್ ಕುಮಾರ್ ಶಿಂಧೆ ಅವರ ಮೊಮ್ಮಗ. ಅವರೂ ಸಹ ಸಿನಿಮಾದಲ್ಲೂ ಅದೃಷ್ಟ ಪರೀಕ್ಷೆಗೆ ಮುಂದಾಗಿದ್ದಾರೆ. ಸ್ಕೈ ಫೋರ್ಸ್ ಚಿತ್ರದ ಮೂಲಕ ನಟನಾಗಿ ಪಾದಾರ್ಪಣೆ ಮಾಡಲಿದ್ದಾರೆ.



## ಲಾರಿ ಚಾಲಕನ ಕೃಷಿ ಪಯಣಕ್ಕೆ ನರೇಗಾ ನೆರವು



ಮಹಾತ್ಮಗಾಂಧಿ ನರೇಗಾ ಯೋಜನೆಯ ನೆರವು ಪಡೆದು ಲಾರಿ ಚಾಲಕರೊಬ್ಬರು, ಈಗ ಗುಲಾಬಿ ಹೂ ಬೆಳೆದು ಸ್ವತಃ ಊರಿನಲ್ಲೇ ಕೈತುಂಬ ಆದಾಯಗಳಿಸುತ್ತಿದ್ದಾರೆ. ಕೋಲಾರ ತಾಲ್ಲೂಕು ಅರಾಭಿಕೊತ್ತನೂರ ಗ್ರಾಮಪಂಚಾಯತಿಯ ಚಿಕ್ಕಅಯ್ಯೂರು ಗ್ರಾಮದ ಸತೀಶ್ ಎಂಬುವರು, ಉದ್ಯೋಗ ಖಾತ್ರಿಯಡಿ, ಹೂಬೆಳೆದು, ಹೊಸ ಬದುಕು ರೂಪಿಸಿಕೊಂಡಿದ್ದಾರೆ.

ಸತೀಶ್ ಈ ಹಿಂದೆ ತಮ್ಮ ಕುಟುಂಬದ ಪೋ?ಣೆಗಾಗಿ ಲಾರಿ ಚಾಲಕರಾಗಿ ಕೆಲಸ ಮಾಡುತ್ತಿದ್ದರು. ಪೂರ್ವಜರಿಂದ ಬಂದಿದ್ದ 30 ಗುಂಟೆ ಜಮೀನಿನಲ್ಲಿ ನೀಲಗಿರಿ ಹಾಕಿದ್ದರು. ಆದರೆ ಅದರಿಂದ ಹೆಚ್ಚು ಪ್ರಯೋಜನವೇನು ಇರಲಿಲ್ಲ. ನಿತ್ಯ ದೂರದ ಊರಿಗೆ ಹೋಗಿ ಅನ್ಯರ ಬಳಿಯ ದುಡಿಮೆ ತೃಪ್ತಿತರಲಿಲ್ಲ. ಸ್ವ-ಉದ್ಯೋಗ ಮಾಡುವ ನಿಟ್ಟಿನಲ್ಲಿ, ಜಮೀನಿನಲ್ಲಿದ್ದ ನೀಲಗಿರಿಯನ್ನು ಸಂಪೂರ್ಣವಾಗಿ ತೆಗದು, ಪಕ್ಕದ ಜಮೀನಿನಿಂದ ನೀರು ಪಡೆದು ಕೃಷಿ ಮಾಡಲು ಮುಂದಾದರು.

ಆದರೆ ಯಾವ ಬೆಳೆಯನ್ನು ಬೆಳೆಯಬೇಕು, ಎಂಬ ಯೋಚನೆಗೆ ಬಿದ್ದ ಸತೀಶ್‌ಗೆ ಸರ್ವಕಾಲಿಕ ಲಾಭದ ಬೆಳೆಯಾಗಿ ಕಂಡಿದ್ದು ಗುಲಾಬಿ. ಅಲ್ಲದೆ ಗುಲಾಬಿ ಹೂ ಬೆಳೆಯಲು ನರೇಗಾದಡಿಯಲ್ಲಿ ನೆರವು ನೀಡುವ ಮಾಹಿತಿ ಪಡೆದ, ಅವರು ತೋಟಗಾರಿಕೆ ಅಧಿಕಾರಿಗಳನ್ನು ಸಂಪರ್ಕಿಸಿ, ಹೂ ಬೆಳೆಯುವ ಬಗ್ಗೆ ತಿಳಿದುಕೊಂಡರು. ತಮಿಳುನಾಡಿನ ಅಗಲಕೋಟೆಯಿಂದ 1300 ಮೆರಾಬುಲ್ ಕೆಂಪುತಳಿಯ ಗುಲಾಬಿ ಗಿಡಗಳನ್ನು ತಂದು ತಮ್ಮ ಜಮೀನಿನಲ್ಲಿ ನಾಟಿ ಮಾಡಿದರು. ಹನಿ ನೀರಾವರಿ ಪದ್ಧತಿ ಅಳವಸಿಕೊಂಡಿದ್ದು, ಸತೀಶ್ ಕುಟುಂಬದವರೇ ಗುಲಾಬಿ ತೋಟದ ನಿರ್ವಹಣೆ ಮಾಡುತ್ತಿದ್ದಾರೆ. ನರೇಗಾದಿಂದ ಕೂಲಿ ಹಾಗೂ ಸಾಮಗ್ರಿ ವೆಚ್ಚ ಸೇರಿ72512/- ರೂಪಾಯಿ ನೆರವು ದೊರೆತಿದೆ ಎಂದು ಅವರು ತಿಳಿಸಿದ್ದಾರೆ.

> **ಲಾರಿ ಚಾಲಕನಾಗಿದ್ದ ನಾನು, ಈಗ ನರೇಗಾ ನೆರವು ಪಡೆದು ಗುಲಾಬಿ ಬೆಳೆದು, ಉತ್ತಮ ಆದಾಯಗಳಿಸುತ್ತಿದ್ದೇನೆ. ಗುಲಾಬಿ ಹೂವಿಗೆ ಸದಾ ಬೇಡಿಕೆಇದ್ದು, ನಷ್ಟ ಆಗೋದಿಲ್ಲ. ತೋಟವನ್ನ ಉತ್ತಮ ರೀತಿಯಲ್ಲಿ ನಿರ್ವಹಣೆ ಮಾಡಿದರೆ, ಉತ್ತಮ ಲಾಭ ಪಡೆಯಬಹುದು. ಉದ್ಯೋಗ ಖಾತ್ರಿ, ಯೋಜನೆ ಬಡ ರೈತರಿಗೆ ತುಂಬ ಉಪಯುಕ್ತವಾಗಿದ್ದು, ಅದನ್ನ ಸದ್ಬಳಕೆ ಮಾಡಿಕೊಳ್ಳಬೇಕು.**
>
> 
>
> **| ಸತೀಶ್ ಗುಲಾಬಿ ಬೆಳೆಗಾರ, ಚಿಕ್ಕಅಯ್ಯೂರು**

ಗುಲಾಬಿ ಹೂವಿಗೆ ಸರ್ವಕಾಲದಲ್ಲೂ ಬೇಡಿಕೆಇದ್ದು, ಹಬ್ಬದ ದಿನಗಳಲ್ಲಿ ಹೆಚ್ಚಿನ ಬೆಲೆಗೆ ಮಾರಾಟವಾಗುತ್ತದೆ. ದಿನಬಿಟ್ಟು ದಿನ ಕೊಯ್ಲು ಮಾಡುತ್ತಿದ್ದು, 80 ರಿಂದ 100ಕೆಜಿ ಹೂ ದೊರೆಯುತ್ತದೆ. ಸತೀಶ್ ತಮ್ಮ ಗುಲಾಬಿ ಹೂಗಳನ್ನು ಕೋಲಾರ ಮಾರುಕಟ್ಟೆಯಲ್ಲಿ ಮಾರಾಟ ಮಾಡುತ್ತಿದ್ದಾರೆ. ಗುಲಾಬಿಗೆ ಸಾಮಾನ್ಯ ದಿನಗಳಲ್ಲಿ 60 ರಿಂದ 100 ರೂಪಾಯಿಇದ್ದರೆ, ಹಬ್ಬದ ದಿನಗಳಲ್ಲಿ 150 ರಿಂದ 200 ರೂಪಾಯಿಗೆ ಮಾರಾಟವಾಗುತ್ತದೆ. ಇದರಿಂದ ರೈತ ಸತೀಶ್ ತಿಂಗಳಿಗೆ ಸರಾಸರಿ 40 ರಿಂದ 50 ಸಾವಿರ ಆದಾಯಗಳಿಸುತ್ತಿದ್ದಾರೆ.

ಲಾರಿ ಚಾಲಕನ ಕೃಷಿ ಪಯಣಕ್ಕೆ ಮಹಾತ್ಮಗಾಂಧಿ ನರೇಗಾ ನೆರವಾಗಿದ್ದು, ಸ್ವಗ್ರಾಮದಲ್ಲಿ ಉತ್ತಮ ಆದಾಯಗಳಿಸುತ್ತಿರುವ ಸತೀಶ್ ಈಗ ಗ್ರಾಮದ ಜನರಿಗೆ ಮಾದರಿಯಾಗಿದ್ದಾರೆ. ಸತೀಶ್ರನ್ನು ಅನುಸರಿಸಿ, ಈಗ ಗ್ರಾಮದಲ್ಲಿ ಅನೇಕ ರೈತರು ನರೇಗಾ ನೆರವು ಪಡೆದು ಗುಲಾಬಿ ಬೆಳೆದು, ಹೆಚ್ಚಿನ ಲಾಭ ಪಡೆಯುತ್ತಿದ್ದಾರೆ.

**| ಆನಂದ್ ಸಿ ಜಿಲ್ಲಾ ಐಇಸಿ ಸಂಯೋಜಕರು, ಕೋಲಾರ**

## ರಾಶಿ ಭವಿಷ್ಯ



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಸ್ತ್ರೀಯರಿಂದ ಅದೃಷ್ಟ, ಕಾರ್ಯಗಳಲ್ಲಿ ಜಯ, ಪಾಲುದಾರಿಕೆಯಲ್ಲಿ ಮನಸ್ತಾಪ.

**ವೃಷಭ:** ಉದ್ಯೋಗ ಪ್ರಾಪ್ತಿ, ಪ್ರಯಾಣ ಮಾಡುವ ಸಂದರ್ಭ, ಸಹೋದ್ಯೋಗಿಗಳಿಂದ ನಷ್ಟ.

**ಮಿಥುನ:** ಸಹೋದರಿಯಿಂದ ಧನಾಗಮನ, ಸಾಲಗಾರರ ಚಿಂತೆ, ಬಂಧು ಬಾಂಧವರಿಂದ ತೊಂದರೆ.

**ಕಟಕ:** ಸ್ವಸಾಮರ್ಥ್ಯದಿಂದ ಹೆಸರು, ಮನೆಯ ವಾತಾವರಣ ಕಲುಷಿತ, ಅಹಂಭಾವತನ.

**ಸಿಂಹ:** ಆರೋಗ್ಯ ಸಮಸ್ಯೆ, ಶತ್ರುಗಳು ಅಧಿಕ, ದಾಂಪತ್ಯದಲ್ಲಿ ಮನಸ್ತಾಪ, ಉದ್ಯೋಗದಲ್ಲಿ ಶುಭವಾರ್ತೆ.

**ಕನ್ಯಾ:** ಸಾಲ ಮಾಡುವ ಸಂದರ್ಭ, ಹಣಕಾಸಿನ ವಿಚಾರ, ಕುಟುಂಬ ವಿಚಾರವಾಗಿ ಸಮಸ್ಯೆ, ಅಧಿಕ ನಷ್ಟ.

**ತುಲಾ:** ಆಕಸ್ಮಿಕವಾಗಿ ಉದ್ಯೋಗ ಬಡ್ತಿ, ದಾಂಪತ್ಯ ಕಲಹ, ಬಂಧುಗಳ ವಿರುದ್ಧ ಜಯ.

**ವೃಶ್ಚಿಕ:** ಮಕ್ಕಳಿಂದ ಮನೆಯಲ್ಲಿ ಕಲಹ, ಉದ್ಯೋಗನಿಮಿತ್ತ ಪ್ರಯಾಣ, ನೆಮ್ಮದಿ ಭಂಗ.

**ಧನಸ್ಸು:** ಬಂಧುಗಳಿಂದ ಕಿರಿಕಿರಿ, ಸ್ತ್ರೀಯರೊಡನೆ ಜಗಳ, ಸರ್ಕಾರಿ ಕೆಲಸಗಳಲ್ಲಿ ಜಯ.

**ಮಕರ:** ಪ್ರೀತಿ ಪ್ರೇಮದ ಬಲೆಯಲ್ಲಿ ಸಿಲುಕುವಿರಿ, ಆತ್ಮವಿಶ್ವಾಸ ಅಧಿಕ, ಹೆಣ್ಣು ಮಕ್ಕಳಿಂದ ಸಹಾಯ.

**ಕುಂಭ:** ಸ್ನೇಹಿತರು ಶತ್ರುಗಳಾಗುವರು, ಪಾಲುದಾರಿಕೆ ವ್ಯವಹಾರದಲ್ಲಿ ನಷ್ಟ, ಸಾಲದ ಸಹಾಯ ಲಭಿಸುವುದು.

**ಮೀನ:** ಸಾಲ ಮರುಪಾವತಿ, ಶತ್ರುಗಳು ಅಧಿಕ ಮತ್ತು ನಷ್ಟ, ಮಕ್ಕಳಿಂದ ನಿದ್ರಾಭಂಗ.

## ಮಂಕಿ ಡೇ




ಪ್ರಾಣಿ ಸಾಮ್ರಾಜ್ಯದೊಳಗೆ ಮಂಗಗಳು ಮೊದಲ ಬಾರಿಗೆ ವಿಶಿಷ್ಟವಾದ ಜಾತಿಯಾಗಿ ಹೊರಹೊಮ್ಮಿದ ನಿಖರವಾದ ಕ್ಷಣವನ್ನು ಗುರುತಿಸುವುದು ಕಷ್ಟಕರವಾದ ಕೆಲಸವಾಗಿದೆ, ಆದರೆ ಅವುಗಳ ನೋಟವು ಸುಮಾರು 60 ಮಿಲಿಯನ್ ವರ್ಷಗಳ ಹಿಂದೆ ಸಂಭವಿಸಿದೆ ಎಂದು ನಂಬಲಾಗಿದೆ. ರಾಷ್ಟ್ರೀಯ ಮಂಗಗಳ ದಿನದ ಅಸ್ತಿತ್ವವಿಲ್ಲದೆ, ಈ ವಿಶಾಲವಾದ ಸಮಯವು ವರ್ಷದಿಂದ ವರ್ಷಕ್ಕೆ ಸಹಸ್ರಮಾನಗಳಲ್ಲಿ ತೆವಳುತ್ತಾ ಮತ್ತು ವೇಗದಲ್ಲಿ ಹಾದುಹೋಗುತ್ತದೆ! ಕೊನೆಯದಾಗಿ, ಆದಾಗ್ಯೂ, ಇಬ್ಬರು ಪ್ರವರ್ತಕ ಕಾಲೇಜು ವಿದ್ಯಾರ್ಥಿಗಳಿಗೆ ಧನ್ಯವಾದಗಳು, ಇದು 2000 ರಲ್ಲಿ ಬದಲಾಗಲಿದೆ.

ಮಿಚಿಗನ್ ಸ್ಟೇಟ್ ಯೂನಿವರ್ಸಿಟಿಯಲ್ಲಿ ಕಲೆಯನ್ನು ಅಧ್ಯಯನ ಮಾಡುತ್ತಿರುವ ಕೇಸಿ ಸಾರೋ ಮತ್ತು ಎರಿಕ್ ಮಿಲ್ಲಿಕಿನ್ ಈ ಸಿಮಿಯನ್-ಕೇಂದ್ರಿತ ಆಚರಣೆಯ ದಿನದ ರಚನೆಗೆ ಕಾರಣರಾಗಿದ್ದಾರೆ. ದುಃಖ (ಸೂಕ್ತವಾಗಿ) ಡೆಟ್ರಾಯಿಟ್ ಮೆಟ್ರೋ ಟೈಮ್ಸ್ಗ ಅವರು ರಜೆಯ ಸಮಯದಲ್ಲಿ ಒಂದು ರೀತಿಯ ಅಸ್ವಸ್ಥತೆಯನ್ನು ಅನುಭವಿಸಿದರು ಮತ್ತು ಈ ಡಿಸೆಂಬರ್ ಬ್ಲೂಸ್ ಅನ್ನು ಎದುರಿಸಲು ಒಂದು ಮಾರ್ಗವನ್ನು ಕಂಡುಕೊಳ್ಳಲು ಬಲವಂತವಾಗಿ ಭಾವಿಸಿದರು. ಸ್ನೇಹಿತನ ಕ್ಯಾಲೆಂಡರ್ನಲ್ಲಿ ಮಂಕಿ ಡೇ ಎಂದು ತಮಾಷೆಯಾಗಿ ಬರೆದ ನಂತರ, ದುಃಖವು ಆಲೋಚನೆಯನ್ನು ತೆಗೆದುಕೊಂಡು ಅದರೊಂದಿಗೆ ಓಡಿಹೋಯಿತು: ಡಿಸೆಂಬರ್ 14 ರಂದು ಸುತ್ತಿದಾಗ, ಅವನು ಮತ್ತು ಅವನ ಕಲಾ ಶಾಲೆಯ ಸ್ನೇಹಿತರು ಕೋತಿಗಳಂತೆ ವೇಷಭೂಷಣಗಳನ್ನು ಧರಿಸಿ ತಮ್ಮ ಅತ್ಯುತ್ತಮ ಮಂಕಿ ಇಂಪ್ರೆಶನ್ಗಳನ್ನು ಹಾಕಿದರು.

ಅವರು ಹೊಸದಾಗಿ ರೂಪುಗೊಂಡ ರಜಾದಿನಕ್ಕೆ ಸಂಬಂಧಿಸಿದ ವಿಚಾರಗಳನ್ನು ತಮ್ಮ ಕಲಾಕೃತಿ ಮತ್ತು ಮನೆಯಲ್ಲಿ ತಯಾರಿಸಿದ ಕಾಮಿಕ್ಸ್ಗಳಲ್ಲಿ ಅಳವಡಿಸಿಕೊಳ್ಳುತ್ತಾರೆ. ಈ ತುಣುಕುಗಳನ್ನು ಆನ್ಲೈನ್ನಲ್ಲಿ ಪ್ರಕಟಿಸುವುದರಿಂದ ಮಂಕಿ ಡೇ ಎಂಬ ಕಲ್ಪನೆಯನ್ನು ಹರಡಲು ಅವಕಾಶ ಮಾಡಿಕೊಟ್ಟಿತು ಮತ್ತು ಈಗ, ದಶಕಗಳ ನಂತರ, ಜರ್ಮನಿ, ಭಾರತ ಮತ್ತು ಥೈಲ್ಯಾಂಡ್ ಸೇರಿದಂತೆ ದೇಶಗಳಲ್ಲಿ ಈ ದಿನವನ್ನು ಪ್ರಪಂಚದಾದ್ಯಂತ ಆಚರಿಸಲಾಗುತ್ತದೆ.

ಸ್ವಲ್ಪ ಮೋಜಿನಂತೆ ಪ್ರಾರಂಭವಾದದ್ದು ಪೂರ್ಣ ಪ್ರಮಾಣದ ಕಾರ್ಯಾಚರಣೆಯಾಗಿ ವಿಕಸನಗೊಂಡಿದೆ. ನ್ಯಾಷನಲ್ ಜಿಯಾಗ್ರಫಿಕ್, ಸ್ಮಿತ್ಸೋನಿಯನ್ ಇನ್ಸ್ಟಿಟ್ಯೂಷನ್ ಮತ್ತು ಗ್ರೀನ್ಪೀಸ್ನಂತಹ ಘಟಕಗಳು ಮಂಗಗಳಿಗೆ ಆಧುನಿಕ ಬೆದರಿಕೆಗಳ ಅರಿವನ್ನು ಮೂಡಿಸಲು ಪ್ರತಿ ವರ್ಷವೂ ಮಂಕಿ ಡೇ ಒಂದು ಪ್ರಮುಖ ವಾರ್ಷಿಕೋತ್ಸವವಾಗಿ ಕಾರ್ಯನಿರ್ವಹಿಸುತ್ತದೆ. ದುಃಖ ಮತ್ತು ಮಿಲಿಕಿನ್ ಮಂಗ-ವಿಷಯದ ಕಲೆಯನ್ನು ಈ ಉದ್ದೇಶವನ್ನು ಪೂರೈಸಲು ವಾಹನಗಳಾಗಿ ಬಳಸಿಕೊಳ್ಳುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಅವರ ಕೆಲಸವು ಮಂಕಿ ವ್ಯಾಪಾರ ಎಂಬ ಪದಕ್ಕೆ ಸಂಪೂರ್ಣವಾಗಿ ಹೊಸ ತಿಳುವಳಿಕೆಯನ್ನು ತಂದಿದೆ.

ಸಂಜೆ ಮುಗಿಲು
ಶನಿವಾರ
14.12.2024



# ರಾಮಲಲ್ಲಾ ಪ್ರಾಣ ಪ್ರತಿಷ್ಠಾಪನೆ 1 ವರ್ಷ; ಅಯೋಧ್ಯೆಯಲ್ಲಿ ಸಿದ್ಧತೆ

**ಅಯೋಧ್ಯೆ:** ಅಯೋಧ್ಯೆಯ ಶ್ರೀರಾಮ ಮಂದಿರದಲ್ಲಿ ರಾಮಲಲ್ಲಾನ ಪ್ರಾಣ ಪ್ರತಿಷ್ಠಾಪನೆ ಮಾಡಿ 2025ಕ್ಕೆ ಒಂದು ವರ್ಷ ಪೂರ್ಣಗೊಳ್ಳುವ ಹಿನ್ನೆಲೆಯಲ್ಲಿ ಜನವರಿಯ ದ್ವಾದಶಿಯಂದು ಸಂಭ್ರಮಾಚರಣೆಗೆ ಸಿದ್ಧತೆ ನಡೆಸಲಾಗುತ್ತಿದೆ.

ಈ ಕುರಿತು ಮಾತನಾಡಿರುವ ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ನ ಪ್ರಧಾನ ಕಾರ್ಯದರ್ಶಿ ಚಂಪತ್ ರೈ, ಪ್ರಾಣ ಪ್ರತಿಷ್ಠಾಪನೆ ನಡೆಸಿದ ದಿನ ಜನವರಿ 11ರಂದು ಪುಷ್ಯಾ ಶುಕ್ಲಾ ಪ್ರಾಣ ಪ್ರತಿಷ್ಠಾಪನೆ ದಿನ ಬರುತ್ತದೆ. ವಿವಾಹ ಪಂಚಮಿ, ಮೌನಿ ಅಮವಾಸ್ಯೆ, ಶಿವರಾತ್ರಿ ಅಮವಾಸ್ಯೆ, ಏಕಾದಶಿ ಆಚರಣೆ ಮಾಡುವಂತೆ ಈ ದಿನವನ್ನೂ ಕೂಡ ಹಿಂದೂ ಸಂಪ್ರದಾಯದಲ್ಲಿ ಆಚರಿಸಲಾಗುವುದು ಎಂದರು.

ಪ್ರಾಣ ಪ್ರತಿಷ್ಠಾಪನೆ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಮೂರು ದಿನ ಕಾರ್ಯಕ್ರಮ ಆಯೋಜಿಸಲಾಗಿದೆ. ಜನವರಿ 11 ಅನ್ನು ಪ್ರತಿಷ್ಠಾಪನಾ ದ್ವಾದಶಿ ಎಂಬ ಹೆಸರಿನಲ್ಲಿ ಆಚರಣೆ ಮಾಡಲಾಗುವುದು. ನಿಗದಿತ ಸಮಯದಲ್ಲಿ ದೇಗುಲದ ಸಂಪೂರ್ಣ ನಿರ್ಮಾಣ ಕಾರ್ಯ ಮುಗಿಯಲಿದೆ. ರಾಮ ಜನ್ಮಭೂಮಿ ಸಂಕೀರ್ಣದಲ್ಲಿ 18 ಇತರೆ ದೇಗುಲಗಳನ್ನು ನಿರ್ಮಿಸಲಾಗುತ್ತಿದೆ. ದೇಗುಲದ ಸುತ್ತ ಒಂದಾದ ಬಳಿಕ ಒಂದು ದೇಗುಲ ನಿರ್ಮಾಣವಾಗುತ್ತದೆ ಎಂದು ಮಾಹಿತಿ ನೀಡಿದರು.

ಮಾಘ ಮೇಳದ ಹಿನ್ನೆಲೆಯಲ್ಲಿ ಭಕ್ತರ ಸಂಖ್ಯೆ ಹೆಚ್ಚಲಿದ್ದು, ಎಲ್ಲಾ ಭದ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಶ್ರೀರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ಮತ್ತು ಭದ್ರತಾ ಅಧಿಕಾರಿಗಳು ಈ ಕುರಿತು ಸಭೆ ನಡೆಸಿದ್ದು ಸೂಕ್ತ ವ್ಯವಸ್ಥೆ ಮಾಡಲಾಗುತ್ತದೆ ಎಂದರು.



# ಫ್ರಾನ್ಸ್ ನೂತನ ಪ್ರಧಾನಿಯಾಗಿ 'ಫ್ರಾಂಕೋಯಿಸ್ ಬೇರೊ' ಆಯ್ಕೆ

**ಫ್ರಾನ್ಸ್ :** ಕಳೆದ ವಾರ ಐತಿಹಾಸಿಕ ಸಂಸದೀಯ ಮತದಿಂದ ಹಿಂದಿನ ಸರ್ಕಾರವನ್ನು ಪದಚ್ಯುತಗೊಳಿಸಿದ ನಂತರ ಫ್ರೆಂಚ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರೋನ್ ಶುಕ್ರವಾರ ಮಧ್ಯಸ್ಥ ಮಿತ್ರ ಫ್ರಾಂಕೋಯಿಸ್ ಬೇರೊ ಅವರನ್ನು ಪ್ರಧಾನಿಯಾಗಿ ಹೆಸರಿಸಿದ್ದಾರೆ. ಮ್ಯಾಕ್ರನ್ ಅವರ ಮಧ್ಯಸ್ಥ ಮೈತ್ರಿಕೂಟದಲ್ಲಿ ನಿರ್ಣಾಯಕ ಪಾಲುದಾರರಾಗಿರುವ 73 ವರ್ಷದ ಬೇರೊ ದಶಕಗಳಿಂದ ಫ್ರೆಂಚ್ ರಾಜಕೀಯದಲ್ಲಿ ಚಿರಪರಿಚಿತ ವ್ಯಕ್ತಿಯಾಗಿದ್ದಾರೆ. ರಾಷ್ಟ್ರೀಯ ಅಸೆಂಬ್ಲಿಯಲ್ಲಿ ಯಾವುದೇ ಒಂದು ಪಕ್ಷವು ಬಹುಮತವನ್ನು ಹೊಂದಿಲ್ಲದ ಕಾರಣ ಸ್ಥಿರತೆಯನ್ನು ಪುನಃಸ್ಥಾಪಿಸುವ ಪ್ರಯತ್ನಗಳಲ್ಲಿ ಅವರ ರಾಜಕೀಯ ಅನುಭವವು ಪ್ರಮುಖವಾಗಿದೆ. ಯುರೋಪಿಯನ್ ಸಂಸತ್ತಿನ ಹಣವನ್ನು ದುರುಪಯೋಗಪಡಿಸಿಕೊಂಡಿದ್ದಾರೆ ಎಂದು ಆರೋಪಿಸಿದ ಪ್ರಕರಣದಲ್ಲಿ ಬೇರೊ ಅವರನ್ನು ಇತ್ತೀಚೆಗೆ ತೆರವುಗೊಳಿಸಲಾಯಿತು. ಅಂದ್ಹಾಗೆ, 2027ರಲ್ಲಿ ತಮ್ಮ ಅಧಿಕಾರಾವಧಿ ಮುಗಿಯುವವರೆಗೂ ಅಧಿಕಾರದಲ್ಲಿ ಮುಂದುವರಿಯುವುದಾಗಿ ಮ್ಯಾಕ್ರನ್ ಕಳೆದ ವಾರ ಪ್ರತಿಜ್ಞೆ ಮಾಡಿದ್ದರು.





# ನಟ ಅಲ್ಲು ಅರ್ಜುನ್ ಬಂಧನ; ಅಶ್ವಿನಿ ವೈಷ್ಣವ್ ವಾಗ್ದಾಳಿ

**ನವದೆಹಲಿ:** ತೆಲಂಗಾಣ ಸರ್ಕಾರದ ಆರೋಪವನ್ನ ಬೇರೆಡೆಗೆ ಸೆಳೆಯಲು ನಟ ಅಲ್ಲು ಅರ್ಜುನ್ ಅವರನ್ನ ಬಂಧಿಸಲಾಗಿದೆ ಎಂದು ಕೇಂದ್ರ ರೈಲ್ವೆ ಮತ್ತು ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಶುಕ್ರವಾರ ಹೇಳಿದ್ದಾರೆ.

'ಕಾಂಗ್ರೆಸ್'ಗೆ ಸೃಜನಶೀಲ ಉದ್ಯಮದ ಬಗ್ಗೆ ಯಾವುದೇ ಗೌರವವಿಲ್ಲ ಮತ್ತು ಅಲ್ಲು ಅರ್ಜುನ್ ಬಂಧನವು ಅದನ್ನು ಮತ್ತೊಮ್ಮೆ ಸಾಬೀತುಪಡಿಸುತ್ತದೆ. ಸಂಧ್ಯಾ ಚಿತ್ರಮಂದಿರದಲ್ಲಿ ಸಂಭವಿಸಿದ ಅಪಘಾತವು ರಾಜ್ಯ ಮತ್ತು ಸ್ಥಳೀಯ ಆಡಳಿತದ ಕಳಪೆ ವ್ಯವಸ್ಥೆಗಳ ಸ್ಪಷ್ಟ ಉದಾಹರಣೆಯಾಗಿದೆ. ಈಗ, ಆ ದೂಷಣೆಯನ್ನ ತಪ್ಪಿಸಲು, ಅವರು ಅಂತಹ ಪ್ರಚಾರ ತಂತ್ರಗಳಲ್ಲಿ ತೊಡಗಿದ್ದಾರೆ'' ಎಂದು ವಾಗ್ದಾಳಿ ನಡೆಸಿದ್ದಾರೆ.

'ತೆಲಂಗಾಣ ಸರ್ಕಾರವು ಸಿನಿಮಾ ಮಂದಿಯ ಮೇಲೆ ನಿರಂತರವಾಗಿ ದಾಳಿ ಮಾಡುವ ಬದಲು ಸಂತ್ರಸ್ತರಿಗೆ ಸಹಾಯ ಮಾಡಬೇಕು ಮತ್ತು ಆ ದಿನ ವ್ಯವಸ್ಥೆ ಮಾಡಿದವರನ್ನ ಶಿಕ್ಷಿಸಬೇಕು. ಅಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿದ್ದ ಒಂದು ವರ್ಷದಲ್ಲಿ ಇದು ರೂಢಿಯಾಗುತ್ತಿರುವುದನ್ನ ನೋಡುವುದು ಸಹ ದುಃಖಕರವಾಗಿದೆ'' ಎಂದು ಅವರು ಹೇಳಿದರು.

# ಅಮ್ಮನಿಗೆ ವಿಶ್ವ ಚೆಸ್ ಟ್ರೋಫಿ ನೀಡಿದ ಗುಕೇಶ್

**ಹೊಸದಿಲ್ಲಿ :** ಸಿಂಗಾಪುರದಲ್ಲಿ ಗುರುವಾರ ನಡೆದ ವಿಶ್ವ ಚೆಸ್ ಚಾಂಪಿಯನ್‌ಶಿಪ್ನ 14ನೇ ಹಾಗೂ ಕೊನೆಯ ಪಂದ್ಯದಲ್ಲಿ ಚೀನಾದ ಡಿಂಗ್ ಲಿರೆನ್‌ರನ್ನು ಮಣಿಸಿದ ಡಿ.ಗುಕೇಶ್ ವಿಶ್ವ ಚೆಸ್ ಕಿರೀಟ ಧರಿಸಿದರು. ಪಂದ್ಯದ ಸುದ್ದಿಗಾಗಿ ಕಾತರದಿಂದ ಕಾಯುತ್ತಿದ್ದ ಗುಕೇಶ್ ತಾಯಿ ಜೆ.ಪದ್ಮಕುಮಾರಿ ಅವರು ತಮ್ಮ ಫೋನ್ ಹಾಗೂ ಕಂಪ್ಯೂಟರ್‌ನಿಂದ ದೂರ ಇದ್ದರು. ಗುಕೇಶನ ಚಿಕ್ಕಮ್ಮ ವಿಜಯದ ಸಂತೋಷದ ಸುದ್ದಿಯನ್ನು ಪದ್ಮಕುಮಾರಿಗೆ ತಿಳಿಸಿದರು.

ಭಾರತದ ಹೊಸ ಚೆಸ್ ಚಾಂಪಿಯನ್ ಆದ ಮಗನೊಂದಿಗೆ ಸಂಭ್ರಮಾಚರಣೆಯಲ್ಲಿ ತೊಡಗುವ ಮೊದಲು ಪದ್ಮಕುಮಾರಿ ತಮ್ಮ ಅತೀವ ಸಂತೋಷವನ್ನು ವ್ಯಕ್ತಪಡಿಸಿದರು. ಈ ಗೆಲುವು ಗುಕೇಶ್ ಅವರ ವೃತ್ತಿಜೀವನಕ್ಕಾಗಿ ಕುಟುಂಬದ ತ್ಯಾಗವನ್ನು ಪ್ರತಿಬಿಂಬಿಸಿತು.

ತನ್ನ ಹಿಂದೆ ಕುಳಿತಿದ್ದ ತಾಯಿಗೆ ಗುಕೇಶ್ ತಾನು ಗೆದ್ದ ಟ್ರೋಫಿಯನ್ನು ನೀಡಿದರು.



ಟ್ರೋಫಿಯೊಂದಿಗೆ ತನ್ನ ಭಾವನಾತ್ಮಕ ಕ್ಷಣವನ್ನು ಹಂಚಿಕೊಂಡ ಪದ್ಮಕುಮಾರಿ ಟ್ರೋಫಿಗೆ ಮುತ್ತಿಟ್ಟರು.

ಪದ್ಮಕುಮಾರಿ ಅವರ ಪತಿ ರಜನೀಕಾಂತ್, ಇಎನ್‌ಟಿ ಸರ್ಜನ್ ಆಗಿದ್ದು, ಗುಕೇಶ್‌ರೊಂದಿಗೆ ಪ್ರಯಾಣಿಸಲು ತನ್ನ ವೃತ್ತಿಯನ್ನು ತ್ಯಾಗ ಮಾಡಿದ್ದಾರೆ. ಮೈಕ್ರೊಬಯೋಲಾಜಿಸ್ಟ್ ಆಗಿರುವ ಪದ್ಮಕುಮಾರಿ ಕುಟುಂಬ ನಿರ್ವಹಣೆ ಹೊಣೆ ಹೊತ್ತಿದ್ದರು.

ಗುಕೇಶ್ ಬಾಲ್ಯದಲ್ಲಿ ತುಂಬಾ ಕಷ್ಟಪಟ್ಟಿದ್ದ. ಈ ಗೆಲುವಿನ ಬಗ್ಗೆ ನನಗೆ ತುಂಬಾ ಸಂತೋಷವಾಗಿದೆ. ಆತ ಅತ್ಯಂತ ಶಿಸ್ತಿನ ಮಗು. ಚೆಸ್‌ಗಾಗಿ ತುಂಬಾ ತ್ಯಾಗ ಮಾಡಿದ್ದಾನೆ ಎಂದು ಪದ್ಮಕುಮಾರಿ ಹೇಳಿದರು.

# ರಷ್ಯನ್ ಭಾಷೆಯಲ್ಲಿ ಆರ್‌ಬಿಐಗೆ ಬಾಂಬ್ ಬೆದರಿಕೆ

**ಮುಂಬೈ:** ಮುಂಬೈನಲ್ಲಿರುವ ಭಾರತೀಯ ರಿಸರ್ವ್ ಬ್ಯಾಂಕ್‌ನ ಪ್ರಧಾನ ಕಚೇರಿಯನ್ನು ಸ್ಫೋಟಿಸುವುದಾಗಿ ದುಷ್ಕರ್ಮಿಗಳಿಂದ ಬಾಂಬ್ ಬೆದರಿಕೆ ಬಂದಿದೆ. ಕಳೆದ ಒಂದು ತಿಂಗಳಲ್ಲಿ ಇದು 2ನೇ ಬೆದರಿಕೆಯಾಗಿದೆ. ಡಿ.12 ರಂದು ಆರ್‌ಬಿಐ ಇಮೇಲ್‌ಗೆ ದುಷ್ಕರ್ಮಿಗಳು ರಷ್ಯನ್ ಭಾಷೆಯಲ್ಲಿ ಬೆದರಿಕೆ ಸಂದೇಶ ಕಳುಹಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ. ಒಂದು ತಿಂಗಳ ಹಿಂದೆಯಷ್ಟೇ ಆರ್‌ಬಿಐನ ಗ್ರಾಹಕ ಸೇವಾ ಕೇಂದ್ರಕ್ಕೆ ಬೆದರಿಕೆ ಕರೆ ಬಂದಿತ್ತು.ಇದನ್ನೂ ಓದಿ: ದೆಹಲಿಯಲ್ಲಿನ ಶಾಲೆಗಳಿಗೆ ಮತ್ತೆ ಬಾಂಬ್ ಬೆದರಿಕೆಸದ್ಯ ಮುಂಬೈನ ಮಾತಾ ರಮಾಬಾಯಿ ಮಾರ್ಗ ಪೊಲೀಸ್ ಠಾಣೆಯಲ್ಲಿ ಭಾರತೀಯ ನ್ಯಾಯ ಸಂಹಿತೆಯ (ಃಓಖ) ಸಂಬಂಧಿತ ಸೆಕ್ಷನ್‌ಗಳ ಅಡಿಯಲ್ಲಿ ಮೇಲ್ ಕಳುಹಿಸಿದವರ ವಿರುದ್ಧ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ನಡೆಸುತ್ತಿದ್ದಾರೆ.ಬೆದರಿಕೆ ಇಮೇಲ್ ಕುರಿತು ಮಾತನಾಡಿರುವ ಮುಂಬೈ ಪೊಲೀಸ್ ಹಿರಿಯ ಅಧಿಕಾರಿಯೊಬ್ಬರು, ಭಾರತೀಯ ರಿಸರ್ವ್ ಬ್ಯಾಂಕ್‌ನ ಅಧಿಕೃತ ವೆಬ್‌ಸೈಟ್‌ನಲ್ಲಿ ಬೆದರಿಕೆ ಇಮೇಲ್ ಬಂದಿದೆ. ಇಮೇಲ್ ರಷ್ಯನ್ ಭಾಷೆಯಲ್ಲಿದೆ ಮತ್ತು ಬ್ಯಾಂಕ್‌ಅನ್ನು ಸ್ಫೋಟಿಸುವ ಎಚ್ಚರಿಕೆ ನೀಡಲಾಗಿದೆ. ಮೇಲ್ ಕಳುಹಿಸಲು ಅನ್ನು ಬಳಸಲಾಗಿದೆಯೇ ಎಂದು ಪೊಲೀಸರು ತನಿಖೆ ನಡೆಸುತ್ತಿದ್ದಾರೆ ಜೊತೆಗೆ ಇಮೇಲ್ ಕಳುಹಿಸಿದವರ ಖಕ ವಿಳಾಸವನ್ನು ಸಹ ಪತ್ತೆಹಚ್ಚುತ್ತಿದ್ದಾರೆ ಎಂದು ಹೇಳಿದರು. ಇದಕ್ಕೂ ಮುನ್ನ ನ.16 ರಂದು, ಲಷ್ಕರ್ ಉಗ್ರರ ಹೆಸರಲ್ಲಿ ಆರ್‌ಬಿಐನ ಗ್ರಾಹಕ ಸೇವಾ ಕೇಂದ್ರಕ್ಕೆ ಬಾಂಬ್ ಬೆದರಿಕೆ ಕರೆ ಬಂದಿತ್ತು, ಅಪರಿಚಿತ ವ್ಯಕ್ತಿಯೊಬ್ಬ ಕರೆ ಮಾಡಿ, ನಾನು ಲಷ್ಕರ್ ಇ ತೊಯ್ಬಾ ಗುಂಪಿನ ಸಿಇಓ ಎಂದು ಹೇಳಿ, ಹಾಡನ್ನು ಹಾಡಿದ್ದರು. ಬಳಿಕ ಬಾಂಬ್ ಬೆದರಿಕೆ ಹಾಕಿದ್ದರು. ಜೊತೆಗೆ 2008ರಲ್ಲಿ ಇದೇ ಗುಂಪು ಮುಂಬೈನಲ್ಲಿ ದಾಳಿ ನಡೆಸಿತ್ತು. ಇತ್ತೀಚಿಗಷ್ಟೇ ಶಕ್ತಿಕಾಂತ ದಾಸ್ ಅವರು ಆರು ವರ್ಷಗಳ ನಂತರ ಅಧಿಕಾರದಿಂದ ನಿವೃತ್ತಿಯಾದರು. ಇದೀಗ ಅವರ ಬದಲಿಗೆ ಆರ್‌ಬಿಐನ 26ನೇ ಗವರ್ನರ್ ಆಗಿ ಸಂಜಯ್ ಮಲ್ಹೋತ್ರಾ, ಅಧಿಕಾರ ವಹಿಸಿಕೊಂಡಿದ್ದಾರೆ. ಈ ಬೆನ್ನಲ್ಲೇ ಬಾಂಬ್ ಬೆದರಿಕೆ ಬಂದಿದೆ.

# ಉಧಂಪುರ-ಶ್ರೀನಗರ-ಬಾರಾಮುಲ್ಲಾ ರೈಲು ಸಂಪರ್ಕ ನಿರ್ಮಾಣ ಕಾಮಗಾರಿ ಪೂರ್ಣ

**ಶ್ರೀನಗರ:** ಉಧಂಪುರ-ಶ್ರೀನಗರ- ಬಾರಾಮುಲ್ಲಾ ರೈಲು ಸಂಪರ್ಕ ನಿರ್ಮಾಣ ಕಾಮಗಾರಿ ಕೆಲಸವು ಪೂರ್ಣಗೊಂಡಿದೆ ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

ತಮ್ಮ ಎಕ್ಸ್ ಖಾತೆಯಲ್ಲಿ ಈ ಕುರಿತು ರೈಲ್ವೆ ಸಚಿವರು ಬರೆದುಕೊಂಡಿದ್ದಾರೆ. ''ಐತಿಹಾಸಿಕ ಮೈಲಿಗಲ್ಲು; ಉಧಂಪುರ-ಶ್ರೀನಗರ-ಬಾರಾಮುಲ್ಲಾ ರೈಲು ಸಂಪರ್ಕದ ಅಂತಿಮ ಕಾಮಗಾರಿ ಕೆಲಸ ಪೂರ್ಣಗೊಂಡಿದೆ. 3.2 ಕಿಮೀ ಉದ್ದದ ಸುರಂಗ ಖಿ-33 ಗಾಗಿ, ಬ್ಯಾಲೆಸ್ಟ್‌ಲೆಸ್ ಟ್ರ್ಯಾಕ್ ಮಾತಾ ವೈಷ್ಣೋ ದೇವಿ ದೇಗುಲ ಮತ್ತು ಕತ್ರಾವನ್ನು ರಿಯಾಸಿಗೆ ಸಂಪರ್ಕಿಸುತ್ತದೆ. ಇಂದು ಮಧ್ಯಾಹ್ನ 02:00 ಗಂಟೆಗೆ ರೈಲ್ವೆ ಸಂಪರ್ಕ ಕೆಲಸ ಯಶಸ್ವಿಯಾಗಿ ಪೂರ್ಣಗೊಂಡಿದೆ'' ಎಂದಿದ್ದಾರೆ.

ಭಾರತದ ರೈಲ್ವೆ ಸಂಪರ್ಕದಲ್ಲಿ ಇದು ಪ್ರಮುಖ ಮೈಲುಗಲ್ಲು. 2025ರ ಜನವರಿಯಲ್ಲಿ ರಾಷ್ಟ್ರ ರಾಜಧಾನಿ, ಶ್ರೀನಗರ, ಜಮ್ಮು ಮತ್ತು ಕಾಶ್ಮೀರದ ನಡುವೆ ಮೊದಲ ನೇರ ರೈಲು ಸೇವೆ ಆರಂಭವಾಗುವ ನಿರೀಕ್ಷೆಯಿದೆ. ವಂದೇ ಭಾರತ್ ರೈಲಿನ ಮೂರನೇ ಆವೃತ್ತಿಯು ನವ ದೆಹಲಿ-ಶ್ರೀನಗರ ಸ್ಲೀಪರ್ ರೈಲು ಆಗಿರುತ್ತದೆ, ಇದು ಕೇವಲ 13 ಗಂಟೆಗಳಲ್ಲಿ 800-ಕಿಲೋಮೀಟರ್ ನಷ್ಟು ಪ್ರಯಾಣ ಬೆಳೆಸುತ್ತದೆ ಎನ್ನಲಾಗಿದೆ. ಮುಂದಿನ ತಿಂಗಳು, ಪ್ರಧಾನಿ ನರೇಂದ್ರ ಮೋದಿ ಅವರು ರಿಯಾಸಿ ಮತ್ತು ಕತ್ರಾ ನಡುವಿನ 272-ಕಿಲೋಮೀಟರ್‌ಗಳ ಬೃಹತ್ ಉಧಂಪುರ-ಶ್ರೀನಗರ-ಬಾರಾಮುಲ್ಲಾ ರೈಲು ಲಿಂಕ್ ಯೋಜನೆಯ ಕೊನೆಯ 17 ಕಿಲೋಮೀಟರ್‌ಗಳನ್ನು ಅಧಿಕೃತವಾಗಿ ಉದ್ಘಾಟಿಸಲಿದ್ದಾರೆ ಎಂಬ ಮಾಹಿತಿಯಿದೆ.

# ಉದ್ಯಮಿ ದಂಪತಿ ನೇಣಿಗೆ ಶರಣು ಇ.ಡಿ ವಿರುದ್ಧ ಒತ್ತಡ ಆರೋಪ

**ಭೋಪಾಲ್:** ಮಧ್ಯಪ್ರದೇಶದ ಸೆಹೋರ್‌ನಲ್ಲಿ ಉದ್ಯಮಿ ಹಾಗೂ ಅವರ ಪತ್ನಿ ನೇಣಿಗೆ ಶರಣಾದ ಘಟನೆ ನಡೆದಿದೆ. ಸೆಹೋರ್ ಮತ್ತು ಇಂದೋರ್‌ನಲ್ಲಿರುವ ಉದ್ಯಮಿಯ ಆಸ್ತಿ ಮೇಲೆ ಜಾರಿ ನಿರ್ದೇಶನಾಲಯ ದಾಳಿ ನಡೆಸಿದ ಒಂದು ವಾರದ ನಂತರ ಆಘಾತಕಾರಿ ಘಟನೆ ನಡೆದಿದೆ. ಮೃತ ದಂಪತಿಯನ್ನು ಮನೋಜ್ ಪರ್ಮಾರ್ ಮತ್ತು ಪತ್ನಿ ನೇಹಾ ಪರ್ಮಾರ್ ಎಂದು ಗುರುತಿಸಲಾಗಿದೆ. ದಂಪತಿಯ ಶವ ಮನೆಯ ಸೀಲಿಂಗ್ ಫ್ಯಾನ್‌ಗೆ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿವೆ. ಪರ್ಮಾರ್ ಅವರ ನಿವಾಸದಿಂದ ಪೊಲೀಸರು ಡೆತ್ ನೋಟ್‌ನ್ನು ವಶಪಡಿಸಿಕೊಂಡಿದ್ದಾರೆ. ಈ ಬಗ್ಗೆ ಪೊಲೀಸರು ಯಾವುದೇ ವಿಷಯಗಳನ್ನು ಇನ್ನೂ ಬಹಿರಂಗಪಡಿಸಿಲ್ಲ. ಇ.ಡಿ ಅಧಿಕಾರಿಗಳು ಡಿ.5 ರಂದು ಪರ್ಮಾರ್ ಅವರಿಗೆ ಸೇರಿದ 4 ಜಾಗಗಳು ಸೇರಿದಂತೆ ಹಲವು ಸ್ಥಳಗಳಲ್ಲಿ ದಾಳಿ ನಡೆಸಿದ್ದರು. ಕೆಲವು ಪ್ರಮುಖ ಆಭರಣ ವ್ಯಾಪಾರಿಗಳು ಮತ್ತು ಚಾರ್ಟರ್ಡ್ ಅಕೌಂಟೆಂಟ್ (ಸಿಎ) ಸೇರಿದಂತೆ ಹಲವಾರು ಇತರ ಉದ್ಯಮಿಗಳ ಮೇಲೂ ದಾಳಿ ನಡೆಸಲಾಗಿತ್ತು. ದಾಳಿಯ ವೇಳೆ ಇ.ಡಿ ಹಲವಾರು ಚರ ಮತ್ತು ಸ್ಥಿರ ಆಸ್ತಿಗಳಿಗೆ ಸಂಬಂಧಿಸಿದ ದಾಖಲೆಗಳನ್ನು ವಶಪಡಿಸಿಕೊಂಡಿತ್ತು. ಅಲ್ಲದೇ ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ 6 ಕೋಟಿ ರೂ. ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪರ್ಮಾರ್ ಅವರನ್ನು ಬಂಧಿಸಿ ವಿಚಾರಣೆ ನಡೆಸಲಾಗಿತ್ತು ಎಂದು ವರದಿಯಾಗಿದೆ. ಇ.ಡಿ ದಾಳಿ ಬಳಿಕ ದಂಪತಿಗಳು ತೀವ್ರ ಒತ್ತಡಕ್ಕೆ ಒಳಗಾಗಿದ್ದರು. ಇ.ಡಿ ಕಿರುಕುಳ ಹಾಗೂ ಒತ್ತಡದಿಂದ ಅವರು ತಮ್ಮ ಜೀವನವನ್ನು ಕೊನೆಗೊಳಿಸಿದ್ದಾರೆ ಎಂದು ಮನೋಜ್ ಅವರ ಕಿರಿಯ ಸಹೋದರ ಕೈಲಾಶ್ ಪರ್ಮಾರ್ ಆರೋಪಿಸಿದ್ದಾರೆ. ಮಧ್ಯಪ್ರದೇಶದ ಮಾಜಿ ಮುಖ್ಯಮಂತ್ರಿ ದಿಗ್ವಿಜಯ ಸಿಂಗ್ ಪ್ರತಿಕ್ರಿಯಿಸಿ ಈ ಸಾವಿಗೆ ಇ.ಡಿ ಅಧಿಕಾರಿಗಳು ಹೊಣೆಗಾರರಾಗಿದ್ದಾರೆ. ಪರ್ಮಾರ್ ಅವರಿಗೆ ಅನಗತ್ಯವಾಗಿ ಕಿರುಕುಳ ನೀಡಲಾಗಿದೆ. ಅವರ ಮಕ್ಕಳು ಭಾರತ್ ಜೋಡೋ ಯಾತ್ರೆಯ ಸಂದರ್ಭದಲ್ಲಿ ರಾಹುಲ್ ಗಾಂಧಿಗೆ ಉಡುಗೊರೆ ನೀಡಿದ್ದರು ಎಂದು ಹೇಳಿಕೊಂಡಿದ್ದಾರೆ.

# ಭೀಕರ ರಸ್ತೆ ಅಪಘಾತಕ್ಕೆ ನಾಲ್ವರು ಬಲಿ ಬಸ್‌ಗಾಗಿ ಕಾಯುತ್ತಿದ್ದ ವಿದ್ಯಾರ್ಥಿನಿಯರ ಮೇಲೆ ಹರಿದ ಲಾರಿ

**ತಿರುವನಂತಪುರಂ:** ಕೇರಳ ಪಾಲಕ್ಕಾಡ್‌ನಲ್ಲಿ ಭೀಕರ ರಸ್ತೆ ಅಪಘಾತ ಸಂಭವಿಸಿದ್ದು, ಬಸ್‌ಗಾಗಿ ಕಾಯುತ್ತಿದ್ದ ನಾಲ್ವರು ವಿದ್ಯಾರ್ಥಿನಿಯರ ಮೇಲೆ ಲಾರಿ ಹರಿದಿದೆ.14 ವರ್ಷ ವಯಸ್ಸಿನ ಇರ್ಫಾನಾ, ಮಿತಾ, ರಿಯಾ ಮತ್ತು ಆಯೇಶಾ ಅಪಘಾತಕ್ಕೆ ಬಲಿಯಾಗಿದ್ದಾರೆ. ಇವರು ಶಾಲೆಯ ಹೊರಗೆ ಬಸ್‌ಗಾಗಿ ಕಾಯುತ್ತಿದ್ದರು. ಮಳೆಯ ರಭಸಕ್ಕೆ ರಸ್ತೆಯಲ್ಲಿ ನಿಯಂತ್ರಣ ತಪ್ಪಿ ಲಾರಿ ಪಲ್ಟಿಯಾಗಿದೆ. ಘಟನೆಯಲ್ಲಿ 8 ನೇ ತರಗತಿಯ ನಾಲ್ವರು ವಿದ್ಯಾರ್ಥಿಗಳೂ ಸಾವನ್ನಪ್ಪಿದ್ದಾರೆ.



# ಟ್ರಂಪ್ ಪದಗ್ರಹಣ : ಚೀನಾ ಅಧ್ಯಕ್ಷ ಕ್ಸಿ ಜಿನ್ ಪಿಂಗ್ಗೆ ಆಹ್ವಾನ

**ನ್ಯೂಯಾರ್ಕ್:** ಅಮೆರಿಕದ ನಿಯೋಜಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಮುಂದಿನ ತಿಂಗಳು ನಡೆಯಲಿರುವ ತಮ್ಮ ಪದಗ್ರಹಣ ಸಮಾರಂಭಕ್ಕೆ ಚೀನಾ ಅಧ್ಯಕ್ಷ ಕ್ಸಿ ಜಿನ್ ಪಿಂಗ್ ಅವರನ್ನು ಆಹ್ವಾನಿಸಿ ಅಚ್ಚರಿ ಮೂಡಿಸಿದ್ದಾರೆ. ಜಿನ್ ಪಿಂಗ್ ಅವರಿಗೆ ಆಹ್ವಾನ ನೀಡಿರುವುದನ್ನು ಟ್ರಂಪ್ ಅವರ ವಕ್ತಾರೆ ಕರೋಲಿನ್ ಲೀವಿಟ್ ಗುರುವಾರ ದೃಢಪಡಿಸಿದ್ದಾರೆ. ಪ್ರಚಾರದ ಸಮಯದಲ್ಲಿ ಮತ್ತು ನಂತರ ಜಿನ್ ಪಿಂಗ್ ಅವರನ್ನು ಟೀಕೆ ಮಾಡುತ್ತಿದ್ದರೂ ಅವರನ್ನು ಪದಗ್ರಹಣ ಸಮಾರಂಭಕ್ಕೆ ಆಹ್ವಾನಿಸಿರುವುದು ಟ್ರಂಪ್ ಅವರ ಅಸಾಂಪ್ರದಾಯಿಕ ರಾಜತಾಂತ್ರಿಕತೆಗೆ ಅನುಗುಣವಾಗಿದೆ. ಹಿಂದಿನ ಅವಧಿಯಲ್ಲಿ ಟ್ರಂಪ್ ಉತ್ತರ ಕೊರಿಯಾದ ಸರ್ವಾಧಿಕಾರಿ ಕಿಮ್ ಜಾಂಗ್ ಉನ್ ಅವರನ್ನು ಭೇಟಿಯಾಗಿ ಅಸಾಂಪ್ರದಾಯಿಕ ರಾಜತಾಂತ್ರಿಕತೆಗೆ ನಾಂದಿ ಹಾಡಿದ್ದರು. ಕ್ಸಿ ಅವರ ಹೆಸರನ್ನು ಹೇಳದೆ ಕಳುಹಿಸಲಾಗುತ್ತಿರುವ ಆಹ್ವಾನಗಳ ಬಗ್ಗೆ ಟ್ರಂಪ್ ಮಾತನಾಡಿದ್ದು, ಆಹ್ವಾನ ಕಳುಹಿಸಿರುವುದಕ್ಕೆ ಕೆಲವರು 'ವಾಹ್, ಆದರೆ ಅದು



ಸ್ವಲ್ಪ ಅಪಾಯಕಾರಿ ಅಲ್ಲವೇ' ಎಂದು ಹೇಳಿದರು. ಅದಕ್ಕೆ ನಾನು, 'ಇರಬಹುದು. ಏನಾಗುತ್ತದೆ ಎಂದು ನೋಡೋಣ'. ಆದರೆ ನಾವು ಸಣ್ಣ ಪ್ರಮಾಣದ ರಿಸ್ಕ್ ತೆಗೆದುಕೊಳ್ಳಲು ಇಷ್ಟಪಡುತ್ತೇವೆ ಎಂದು ಹೇಳಿದ್ದಾಗಿ ತಿಳಿಸಿದ್ದಾರೆ. ಫಾಕ್ಸ್ ನ್ಯೂಸ್ಗೆ ನೀಡಿದ ಸಂದರ್ಶನದಲ್ಲಿ ಲೀವಿಟ್, ಅಧ್ಯಕ್ಷ ಟ್ರಂಪ್ ಮಿತ್ರರಾಷ್ಟ್ರಗಳು ಮಾತ್ರವಲ್ಲದೆ ನಮ್ಮ ವಿರೋಧಿಗಳು ಮತ್ತು ನಮ್ಮ ಪ್ರತಿಸ್ಪರ್ಧಿಗಳೂ ಆಗಿರುವ ದೇಶಗಳ ನಾಯಕರೊಂದಿಗೆ ಮುಕ್ತ ಸಂವಾದ ನಡೆಸುವುದಕ್ಕೆ ಇದೊಂದು ಉದಾಹರಣೆಯಾಗಿದೆ ಎಂದು ಹೇಳಿದರು. ಅವರು ತಮ್ಮ ಮೊದಲ ಅವಧಿಯಲ್ಲಿ ಇದೇ ರೀತಿ ಮಾಡಿದ್ದರು ಮತ್ತು ಅದಕ್ಕಾಗಿ ಅವರ ವಿರುದ್ಧ ಸಾಕಷ್ಟು ಟೀಕೆಗಳು ಕೇಳಿ ಬಂದವು. ಆದರೆ ಇದು ವಿಶ್ವದಾದ್ಯಂತ ಶಾಂತಿ ಮೂಡಲು ಕಾರಣವಾಯಿತು. ಟ್ರಂಪ್ ಯಾರ ಜೊತೆಗೆ ಬೇಕಾದರೂ ಮಾತನಾಡಲು ಸಿದ್ಧರಿದ್ದಾರೆ. ಅವರು ಯಾವಾಗಲೂ ಅಮೆರಿಕದ ಹಿತಾಸಕ್ತಿಗೆ ಮೊದಲ ಆದ್ಯತೆ ನೀಡುತ್ತಾರೆ ಎಂದು ಅವರು ತಿಳಿಸಿದರು. ಆದರೆ ಗುರುವಾರ ರಾತ್ರಿಯವರೆಗೂ ಬೀಜಿಂಗ್ ಟ್ರಂಪ್ ಅವರ ಆಹ್ವಾನಕ್ಕೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ.

# 24 ಗಂಟೆ ಇಸ್ತಾಂಬುಲ್ ಏರ್ಪೋರ್ಟ್‌ನಲ್ಲಿ ಸಿಲುಕಿಕೊಂಡ 400 ಪ್ರಯಾಣಿಕರು

**ಅಂಕಾರ:** ಟರ್ಕಿ ಯಿಂದ ಹೊಸದಿಲ್ಲಿ, ಮುಂಬೈಗೆ ಆಗಮಿಸಬೇಕಿದ್ದ ಇಂಡಿಗೋ ವಿಮಾನ ತಾಂತ್ರಿಕ ದೋಷದಿಂದ ಕಳೆದ 24 ಗಂಟೆಯಿಂದ ಇಸ್ತಾಂಬುಲ್ ಏರ್ಪೋರ್ಟ್‌ನಲ್ಲಿ ಬಾಕಿಯಾಗಿದ್ದು, ಸುಮಾರು 400 ಪ್ರಯಾಣಿಕರು ಸಿಕ್ಕಿಬಿದ್ದಿದ್ದಾರೆ. ವಿಮಾನ ಸಿಬ್ಬಂದಿ ಸೂಕ್ತವಾಗಿ ಸ್ಪಂದಿಸುತ್ತಿಲ್ಲ ಎಂದು ಪ್ರಯಾಣಿಕರು ದೂರಿದ್ದು, ಸೋಷಿಯಲ್ ಮೀಡಿಯಾದಲ್ಲಿ ಕಿಡಿ ಕಾರಿದ್ದಾರೆ. ಸೂಕ್ತ ವಸತಿ ಮತ್ತು ಆಹಾರ ವ್ಯವಸ್ಥೆ ಮಾಡಿಲ್ಲ ಎಂದೂ ಹೇಳಿದ್ದಾರೆ.

ಚಳಿಯಲ್ಲಿ ನಡುಗುತ್ತ ವಿಮಾನ ನಿಲ್ದಾಣದಲ್ಲಿಯೇ ಕೆಲವು ಗಂಟೆಗಳಿಂದ ಸಿಲುಕಿದ್ದೇವೆ. ಟರ್ಕಿಶ್ ಏರ್ಲೈನ್ಸ್ ಸಿಬ್ಬಂದಿ ಅಸಭ್ಯವಾಗಿ ವರ್ತಿಸಿದ್ದಾರೆ ಮತ್ತು ಇಂಡಿಗೋ ಸಂಸ್ಥೆ ಪರಿಸ್ಥಿತಿಯನ್ನು ಸಮರ್ಥವಾಗಿ ನಿಭಾಯಿಸಿಲ್ಲ ಎಂದು ಹಲವರು ತಿಳಿಸಿದ್ದಾರೆ.

ಆರಂಭದಲ್ಲಿ ವಿಮಾನ ವಿಳಂಬವಾಯಿತು ಮತ್ತು ಹಾರಾಟವನ್ನು ಏಕಾಏಕಿ ರದ್ದುಗೊಳಿಸಲಾಯಿತು ಎಂದು ಪ್ರಯಾಣಿಕರು ತಿಳಿಸಿದ್ದಾರೆ. ಅನುಶ್ರೀ ಬನ್ಸಾಲಿ ಎನ್ನುವ ಪ್ರಯಾಣಿಕರೊಬ್ಬರು ಈ ಬಗ್ಗೆ ಮಾಹಿತಿ ನೀಡಿ, 2 ಬಾರಿ ವಿಮಾನದ ಹಾರಾಟ ಸಮಯವನ್ನು ಮುಂದೂಡಲಾಯಿತು. ಬಳಿಕ ರದ್ದುಗೊಳಿಸಿ 12 ಗಂಟೆಯ ಬಳಿಕ ತೆರಳುವುದಾಗಿ ತಿಳಿಸಿದರು. ಆಯಾಸ ಮತ್ತು ಜ್ವರದ ಬಗ್ಗೆ ದೂರು ನೀಡಿದಾಗಲೂ ಸೂಕ್ತವಾಗಿ ಸ್ಪಂದಿಸಿಲ್ಲ. ಇಂಡಿಗೋ ಪ್ರತಿನಿಧಿಯನ್ನು ಸಂಪರ್ಕಿಸಿದರೂ ಪ್ರಯಾಣಿಕರಿಗೆ ಯಾವುದೇ ವಸತಿ, ಊಟದ ವ್ಯವಸ್ಥೆ ಮಾಡಿಲ್ಲ ಎಂದು ಹೇಳಿದ್ದಾರೆ.



ಇಸ್ತಾಂಬುಲ್ನಿಂದ ಮುಂಬೈ ಛತ್ರಪತಿ ಶಿವಾಜಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಇಂಡಿಗೊ ವಿಮಾನ ಡಿ. 12ರ ರಾತ್ರಿ 8.15ಕ್ಕೆ ಹೊರಬೇಕಿತ್ತು. ಬಳಿಕ ಅದನ್ನು 11 ಗಂಟೆಗೆ ಮುಂದೂಡಲಾಯಿತು. ಬಳಿಕ ಮರುದಿನ ರಾತ್ರಿ 10 ಗಂಟೆಗೆ ನಿಗದಿಪಡಿಸಲಾಯಿತು. ಇದರಿಂದ ಅಸಮಾಧಾನಗೊಂಡ ಪ್ರಯಾಣಿಕರು ವಿಮಾನ ಸಿಬ್ಬಂದಿ ವಿರುದ್ಧ ಕಿಡಿಕಾರಿದ್ದಾರೆ.

# ಸಿರಿಯಾದ ಶೇ 90ರಷ್ಟು ಕ್ಷಿಪಣಿ ವ್ಯವಸ್ಥೆ ಧ್ವಂಸ



**ಜೆರುಸಲೇಂ(ಇಸ್ರೇಲ್):** ಸಿರಿಯಾದ ವಾಯು ರಕ್ಷಣಾ ವ್ಯವಸ್ಥೆಯನ್ನು ತೀವ್ರವಾಗಿ ಹಾನಿಗೊಳಿಸಿರುವುದಾಗಿ ಇಸ್ರೇಲ್ ರಕ್ಷಣಾ ಪಡೆ (ಐಡಿಎಫ್) ಘೋಷಿಸಿದೆ. ಸಿರಿಯಾದ ಮೇಲ್ಮೈಯಿಂದ ಗಾಳಿಯಲ್ಲಿ ದಾಳಿ ನಡೆಸಬಲ್ಲ ಶೇ 90ರಷ್ಟು ಕ್ಷಿಪಣಿ ವ್ಯವಸ್ಥೆಯನ್ನು ನಾಶ ಮಾಡಲಾಗಿದೆ ಎಂದು ಅದು ಹೇಳಿದೆ. ಬಷರ್ ಅಲ್-ಅಸ್ಸಾದ್ ಸರ್ಕಾರದ ಪತನದ ಹಿನ್ನೆಲೆಯಲ್ಲಿ ಸಿರಿಯಾದ ಪರಿಸ್ಥಿತಿಯನ್ನು ಸಮಗ್ರವಾಗಿ ಮೌಲ್ಯಮಾಪನ ಮಾಡುತ್ತಿರುವುದಾಗಿ ಐಡಿಎಫ್ ತಿಳಿಸಿದೆ.

ಕಳೆದ ಹಲವಾರು ದಿನಗಳಲ್ಲಿ ನೂರಾರು ಇಸ್ರೇಲಿ ಫೈಟರ್ ಜೆಟ್‌ಗಳು ಮತ್ತು ವಿಮಾನಗಳು ಸಿರಿಯಾದ ಫೈಟರ್ ಜೆಟ್‌ಗಳು, ಹೆಲಿಕಾಪ್ಟರ್‌ಗಳು, ಕ್ಷಿಪಣಿಗಳು, ಯುಎವಿಗಳು, ರಾಡಾರ್‌ಗಳು ಮತ್ತು ರಾಕೆಟ್‌ಗಳು ಸೇರಿದಂತೆ ಅದರ ಅತ್ಯಂತ ಕಾರ್ಯತಂತ್ರದ ಶಸ್ತ್ರಾಸ್ತ್ರಗಳನ್ನು ಗಮನಾರ್ಹವಾಗಿ ಧ್ವಂಸಗೊಳಿಸಿವೆ.

ಸಿರಿಯಾದ ಹಲವು ಪ್ರಮುಖ ವಾಯುನೆಲೆಗಳನ್ನು ಗುರಿಯಾಗಿಸಿಕೊಂಡು ಈ ದಾಳಿ ನಡೆಸಲಾಗಿದೆ. ಉತ್ತರ ಡಮಾಸ್ಕಸ್ ಬಳಿಯ ಟಿ 4 ವಿಮಾನ ನಿಲ್ದಾಣವು ಗಮನಾರ್ಹವಾಗಿ ಹಾನಿಗೊಳಗಾಗಿದ್ದು, ಅಲ್ಲಿ ಬೀಡುಬಿಟ್ಟಿದ್ದ ಎಸ್ಯು -22 ಮತ್ತು ಎಸ್ಯು -24 ಫೈಟರ್ ಸ್ಕ್ವಾಡ್ರನ್‌ಗಳು ಸಂಪೂರ್ಣವಾಗಿ ನಾಶವಾಗಿವೆ. ಮೂರು ಹೆಚ್ಚುವರಿ ಫೈಟರ್ ಸ್ಕ್ವಾಡ್ರನ್‌ಗಳನ್ನು ಹೊಂದಿರುವ ಬ್ಲೆ ವಿಮಾನ ನಿಲ್ದಾಣ ಮತ್ತು ಹತ್ತಿರದ ಶಸ್ತ್ರಾಸ್ತ್ರ ಶೇಖರಣಾ ಸ್ಥಳವೂ ಇಸ್ರೇಲ್ ದಾಳಿಯಲ್ಲಿ ಹಾನಿಗೊಳಗಾಗಿದೆ. ಸಿರಿಯಾದಲ್ಲಿನ ಹೊಸ ಸರ್ಕಾರದೊಂದಿಗೆ ಹೇಗೆ ವ್ಯವಹರಿಸಬೇಕೆಂದು ಮಧ್ಯಪ್ರಾಚ್ಯ ಮತ್ತು ಅದರಾಚೆಗಿನ ದೇಶಗಳು ಯೋಚಿಸುತ್ತಿರುವ ಮಧ್ಯೆ ಈ ವಿಷಯದಲ್ಲಿ ಇಸ್ರೇಲ್ ಒಂದು ಹೆಜ್ಜೆ ಮುಂದೆ ಹೋಗಿದೆ. ತನ್ನ ದೇಶದ ಸುರಕ್ಷತೆಗೆ ಧಕ್ಕೆ ಬರಕೂಡದು ಎಂಬ ತನ್ನ ಬೇಡಿಕೆಯನ್ನು ಸಿರಿಯಾ ಸರ್ಕಾರ ಒಪ್ಪುವವರೆಗೂ ಪ್ರಸ್ತುತ ತನ್ನ ನಿಯಂತ್ರಣದಲ್ಲಿರುವ ಸಿರಿಯನ್ ಭೂಪ್ರದೇಶದಲ್ಲಿಯೇ ಮಿಲಿಟರಿ ನಿಯೋಜಿತವಾಗಿರಲಿದೆ ಎಂದು ಅದು ಹೇಳಿದೆ.

# ಪ್ರಿಯಾಂಕಾ ಗಾಂಧಿ ಭಾಷಣಕ್ಕೆ ರಾಹುಲ್ ಗಾಂಧಿ ಮೆಚ್ಚುಗೆ

**ನವದೆಹಲಿ:** ಲೋಕಸಭೆಯಲ್ಲಿ ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ಗಾಂಧಿಯವರ ಚೊಚ್ಚಲ ಭಾಷಣವನ್ನು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಬಹುವಾಗಿ ಮೆಚ್ಚಿಕೊಂಡಿದ್ದು, ತಮ್ಮ ಭಾಷಣಕ್ಕಿಂತ ಪ್ರಿಯಾಂಕಾ ಭಾಷಣ ಉತ್ತಮವಾಗಿದೆ ಎಂದು ತಿಳಿಸಿದ್ದಾರೆ.

ಇಂದು ಸಂಸತ್ತಿನಲ್ಲಿ ಪ್ರಿಯಾಂಕಾ ಗಾಂಧಿ ಅವರು ಮೊದಲ ಬಾರಿಗೆ ಭಾಷಣ ಮಾಡಿದ್ದು,ಸುದೀರ್ಘ 30 ನಿಮಿಷಗಳ ಕಾಲ ಮಾತನಾಡಿದ್ದಾರೆ. ಮಾತಿನುದ್ದಕ್ಕೂ ಎನ್ಡಿಎ, ಬಿಜೆಪಿ, ಮೋದಿ ಮತ್ತು ಆರ್‌ಎಸ್‌ಎಸ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಅವರ ಸಂಸತ್ತಿನ ಚೊಚ್ಚಲ ಭಾಷಣವನ್ನು ಕಾಂಗ್ರೆಸ್ ನಾಯಕ ಮತ್ತು ಪ್ರಿಯಾಂಕಾ ಸಹೋದರ ರಾಹುಲ್ ಗಾಂಧಿ ಪ್ರಶಂಶಿಸಿದ್ದು, ''ಅದ್ಭುತ ಭಾಷಣ. ನನ್ನ ಚೊಚ್ಚಲ ಭಾಷಣಕ್ಕಿಂತ ಉತ್ತಮವಾಗಿತ್ತು. ಅದನ್ನು ಹೀಗೆ ಮುಂದುವರಿಸಬೇಕು'' ಎಂದು ತಮ್ಮ ತಂಗಿಯನ್ನು ಶ್ಲಾಘಿಸಿದ್ದಾರೆ.

ಈ ಮಧ್ಯೆ ಸಂಸದೀಯ ಪಕ್ಷದ ಅಧ್ಯಕ್ಷರಾದ ಸೋನಿಯಾ ಗಾಂಧಿ ಅವರು ಕೂಡ ತಮ್ಮ ಪುತ್ರಿ



ಪ್ರಿಯಾಂಕಾ ಗಾಂಧಿಯವರ ಭಾಷಣವನ್ನು ಕೇಳಿ ಅತ್ಯುತ್ತಮವಾಗಿದೆ ಎಂದು ಶ್ಲಾಘಿಸಿದ್ದಾರೆ. ಇನ್ನು ಅವರ ಪತಿ ಉದ್ಯಮಿ ರಾಬರ್ಟ್ ವಾದ್ರಾ ಅವರು ವಯನಾಡ್ ಸಂಸದೆಯ ಭಾಷಣದಿಂದ ನನಗೆ ತುಂಬಾ ಸಂತೋಷವಾಗಿದೆ. ಕಾಂಗ್ರೆಸ್ ಮತ್ತಷ್ಟು ಪ್ರಬಲವಾಗುವುದರಲ್ಲಿ ಅನುಮಾನವಿಲ್ಲ ಎಂದು ಹೇಳಿದ್ದಾರೆ. ''ನನಗೆ ತುಂಬಾ ಸಂತೋಷವಾಗಿದೆ, ಅವರು ದೇಶಾದ್ಯಂತ ತಿರುಗಾಡಿದ ತಮ್ಮ ಅನುಭವದ ಬಗ್ಗೆ ಬಹಳ ಸ್ಪಷ್ಟವಾಗಿ ಮಾತನಾಡಿದ್ದಾರೆ. ಅವರು ಜನರ ಕಷ್ಟಗಳ ಬಗ್ಗೆ ಮಾತನಾಡಿದ್ದಾರೆ. ಲೋಕಸಭೆಯು ಸರಿಯಾಗಿ ಕಾರ್ಯನಿರ್ವಹಿಸಬೇಕು ಮತ್ತು ಸದನದಲ್ಲಿ ಚರ್ಚೆಗಳು ನಡೆಯಬೇಕು. ವಿವಿಧ ರಾಜ್ಯಗಳ ಜನರು ಎದುರಿಸುತ್ತಿರುವ ತೊಂದರೆಗಳ ಬಗ್ಗೆ ಪ್ರಧಾನಿ ಮೋದಿ ಗಮನಹರಿಸಬೇಕು. ಪ್ರಿಯಾಂಕಾ ಬಗ್ಗೆ ನನಗೆ ತುಂಬಾ ಹೆಮ್ಮೆ ಇದೆ'' ಎಂದಿದ್ದಾರೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಹೀರೋಯಿನ್ ಬಿಟ್ಟು ಗ್ಲಾಮರಸ್ ಕಡೆ ಮುಖ ಮಾಡಿದ್ದೇಕೆ ತಮನ್ನಾ?



ಟಾಲಿವುಡ್, ಕಾಲಿವುಡ್, ಬಾಲಿವುಡ್ ಎಲ್ಲೆಡೆ ತಮನ್ನಾ ಕ್ರೇಜ್ ಒಂದೇ. ಹೀರೋಯಿನ್ ಆಗಿ ಈಗ ಹೆಚ್ಚು ಸಿನಿಮಾ ಮಾಡ್ತಿಲ್ಲ, ಆದ್ರೆ ಗ್ಲಾಮರ್ ಕ್ರೇಜ್‌ನ ಉಪಯೋಗಿಸಿಕೊಂಡು ಐಟಂ ಸಾಂಗ್ಸ್ ಮಾಡ್ತಿದ್ದಾರೆ. ತಮನ್ನಾ ಐಟಂ ನಂಬರ್ ಮಾಡಿದ್ರೆ ಸಾಕು, ಬಾಕ್ಸಾಫೀಸ್‌ನಲ್ಲಿ ಹಣದ ಹೊಳೆ. ಜೈಲರ್, ಸ್ತ್ರೀ 2 ಚಿತ್ರಗಳಲ್ಲಿ ತಮನ್ನಾ ಕ್ರೇಜಿ ಐಟಂ ಸಾಂಗ್ಸ್ ಮಾಡಿದ್ರು. ಅವು ಸೂಪರ್ ಹಿಟ್ ಆದವು.

ಐಟಂ ಸಾಂಗ್‌ಗೂ ತಮನ್ನಾ ಕೋಟಿಗಟ್ಟಲೆ ಸಂಭಾವನೆ ಪಡೆಯುತ್ತಿದ್ದಾರೆ. ಮಿಲ್ಕಿ ಬ್ಯೂಟಿಗೆ ಇರುವ ಡಿಮ್ಯಾಂಡ್ ಅಷ್ಟು. ತಮನ್ನಾ ಈಗೀಗ ಹೀರೋಯಿನ್ ಆಗಿಯೂ ನಟಿಸುತ್ತಿದ್ದಾರೆ. ಇದೆಲ್ಲ ಇದ್ರೂ ತಮನ್ನಾ ಲೇಡಿ ಓರಿಯೆಂಟೆಡ್ ಸಿನಿಮಾಗಳಲ್ಲಿ ನಟಿಸಿರೋದು ತುಂಬಾ ಕಡಿಮೆ. ಮೊದಲ ಬಾರಿಗೆ ಲೇಡಿ ಓರಿಯೆಂಟೆಡ್ ಕಥೆಯಲ್ಲಿ ನಟಿಸುತ್ತಿರುವ ಚಿತ್ರ ಒದೆಲ 2.

ಮೊದಲ ಭಾಗ ಒದೆಲ ರೈಲ್ವೆ ಸ್ಟೇಷನ್‌ಗೆ ಒಳ್ಳೆ ಪ್ರತಿಕ್ರಿಯೆ ಸಿಕ್ಕಿದ್ದರಿಂದ ಈಗ ಎರಡನೇ ಭಾಗ ಮಾಡ್ತಿದ್ದಾರೆ. ಮೊದಲ ಭಾಗದಲ್ಲಿ ಹೆಬ್ಬಾ ಪಟೇಲ್ ನಟಿಸಿದ್ದರು. ಒದೆಲ 2ರಲ್ಲಿ ತಮನ್ನಾ ಸನ್ಯಾಸಿನಿ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಸಾಮಾನ್ಯವಾಗಿ ತಮನ್ನಾ ಗ್ಲಾಮರ್ ತೋರಿಸಿದ್ರೆ ಕೋಟಿಗಟ್ಟಲೆ ಸಂಭಾವನೆ ಕೊಡ್ತಾರೆ. ಆದ್ರೆ ಒದೆಲ 2ರಲ್ಲಿ ಅವರು ಸನ್ಯಾಸಿನಿ. ಆದ್ರೂ ತಮನ್ನಾ ತಮ್ಮ ವೃತ್ತಿಜೀವನದಲ್ಲೇ ಅತಿ ಹೆಚ್ಚು ಸಂಭಾವನೆ ಪಡೆಯುತ್ತಿದ್ದಾರೆ.

ಅವರು ಸಂಪೂರ್ಣ ಸನ್ಯಾಸಿನಿಯಾಗಿ ಕಾಣಿಸಿಕೊಳ್ಳುತ್ತಾರೋ ಅಥವಾ ಗ್ಲಾಮರ್ ಇದೆಯೋ ಗೊತ್ತಿಲ್ಲ. ಯಾಕಂದ್ರೆ ಮೊದಲ ಭಾಗದಲ್ಲಿ ಹೆಬ್ಬಾ ಪಟೇಲ್ ಗ್ಲಾಮರ್ ದೃಶ್ಯಗಳಲ್ಲಿ ನಟಿಸಿದ್ದರು. ತಮನ್ನಾ ಕೂಡ ಗ್ಲಾಮರ್ ತೋರಿಸ್ತಾರೋ ನೋಡಬೇಕು. ಒದೆಲ 2ಗೆ ತಮನ್ನಾ ಅವರನ್ನು ತುಂಬಾ ಇಷ್ಟಪಡುವ ನಿರ್ದೇಶಕ ಸಂಪತ್ ನಂದಿ ಕಥೆ ಬರೆಯುತ್ತಿದ್ದಾರೆ. ಅಶೋಕ್ ತೇಜ ನಿರ್ದೇಶನದಲ್ಲಿ ಈ ಚಿತ್ರ ಮೂಡಿಬರುತ್ತಿದೆ.

ತಮನ್ನಾ ಮೇಲಿನ ಅಭಿಮಾನದಿಂದಲೇ ಸಂಪತ್ ನಂದಿ ಈ ಕಥೆ ಬರೆದಿದ್ದಾರಂತೆ. ಅಷ್ಟೇ ಅಲ್ಲ, ಅವರು ಕೇಳಿದಷ್ಟು ಸಂಭಾವನೆ ಸಿಗುವಂತೆ ನಿರ್ಮಾಪಕರನ್ನೂ ಒಪ್ಪಿಸಿದ್ದಾರಂತೆ. ತಮನ್ನಾ ಸಾಮಾನ್ಯವಾಗಿ 3 ಕೋಟಿವರೆಗೂ ಸಂಭಾವನೆ ಪಡೆಯುತ್ತಾರೆ. ಆದ್ರೆ ಈ ಚಿತ್ರಕ್ಕೆ 4 ಕೋಟಿ ಕೊಡ್ತಿದ್ದಾರಂತೆ. ಟಾಲಿವುಡ್‌ನಲ್ಲಿ ತಮನ್ನಾ ಸಂಭಾವನೆ ಕೇಳಿ ಶಾಕ್ ಆಗಿದ್ದಾರೆ. 30 ದಾಟಿದ ದಕ್ಷಿಣ ಭಾರತದ ನಟಿಯರಲ್ಲಿ ತಮನ್ನಾ ಅತಿ ಹೆಚ್ಚು ಸಂಭಾವನೆ ಪಡೆಯುವ ನಟಿ. ತ್ರಿಷ, ಶೃತಿ ಹಾಸನ್, ಕಾಜಲ್ 3 ಕೋಟಿಗಿಂತ ಕಡಿಮೆ ಸಂಭಾವನೆ ಪಡೆಯುತ್ತಾರೆ. ಮಿಲ್ಕಿ ಬ್ಯೂಟಿ ಎಲ್ಲರಿಗೂ ಚೆಕ್ ಹಾಕಿದ್ದಾರೆ.

# ಸಾಯಿ ಪಲ್ಲವಿ ಮದುವೆ ಯಾವಾಗ?



ಎಲ್ಲಾ ಯುವ ನಟ, ನಟಿಯರು ಮದುವೆಯಾಗುವ ಮೂಲಕ ಏಕಾಂತ ಜೀವನಕ್ಕೆ ವಿದಾಯ ಹೇಳುತ್ತಿದ್ದಾರೆ. ಇತ್ತೀಚೆಗೆ ನಟಿ ಕೀರ್ತಿ ಸುರೇಶ್ ತಮ್ಮ ಬಾಲ್ಯದ ಗೆಳೆಯನನ್ನು ಮದುವೆಯಾಗಿ ಗೃಹಿಣಿಯಾಗಿದ್ದಾರೆ. ಕೀರ್ತಿ ಅವರಂತೆಯೇ ಇರುವ ಇತರ ನಟಿಯರ ಮದುವೆ ಯಾವಾಗ ಎಂದು ಎಲ್ಲರೂ ಕಾಯುತ್ತಿದ್ದಾರೆ.

ಕೀರ್ತಿ ಸುರೇಶ್ ಮದುವೆಯ ಬಗ್ಗೆ ಹಲವು ವದಂತಿಗಳಿದ್ದವು. ಮನೆಯಲ್ಲಿ ಮದುವೆಯಾಗಲು ಒತ್ತಾಯಿಸುತ್ತಿದ್ದಾರೆ, ಸಂಗೀತ ನಿರ್ದೇಶಕ ಅನಿರುದ್ಧ್ ಅವರನ್ನು ಪ್ರೀತಿಸುತ್ತಿದ್ದಾರೆ, ಕ್ರಿಕೆಟಿಗನೊಂದಿಗೆ ಮದುವೆ ಎಂಬ ವದಂತಿಗಳಿದ್ದವು. ಇದರಲ್ಲಿ ಎಷ್ಟು ಸತ್ಯವೋ ಗೊತ್ತಿಲ್ಲ, ಆದರೆ ಕುಟುಂಬದ ಒತ್ತಡ ನಿಜ ಎಂದು ತೋರುತ್ತದೆ. ಅದಕ್ಕಾಗಿಯೇ ಬ್ಯುಸಿ ನಟಿಯಾಗಿದ್ದರೂ ಸರಿಯಾದ ವಯಸ್ಸಿನಲ್ಲಿ ಮದುವೆಯಾಗಿದ್ದಾರೆ.

ಕೀರ್ತಿ ಮದುವೆಯಿಂದ ಮತ್ತೊಬ್ಬ ನಟಿ ಮೇಲೆ ಒತ್ತಡ ಹೆಚ್ಚಾಗುವ ಸಾಧ್ಯತೆ ಇದೆ. ಅವರು ಸಾಯಿ ಪಲ್ಲವಿ. ಕೀರ್ತಿ ಸುರೇಶ್ ರಂತೆ ಸಾಯಿ ಪಲ್ಲವಿ ಮೇಲೂ ಮದುವೆ ಒತ್ತಡ ಹೆಚ್ಚಾಗುತ್ತಿದೆಯಂತೆ. ಇದರಲ್ಲಿ ಎಷ್ಟು ಸತ್ಯವೋ ಗೊತ್ತಿಲ್ಲ, ಆದರೆ...



ಪಾತ್ರಗಳಿಗೆ ಮಹತ್ವವಿದ್ದರೆ ಮಾತ್ರ ಸಾಯಿ ಪಲ್ಲವಿ ನಟಿಸುತ್ತಾರೆ. ನಾಯಕ ಪ್ರಧಾನ ಚಿತ್ರಗಳಲ್ಲಿ ನಟಿಸಲು ಅವರಿಗೆ ಇಷ್ಟವಿಲ್ಲ ಎಂಬ ಮಾತಿದೆ. ಸ್ಟಾರ್ ನಟರಿಂದ ಆಫರ್ ಬಂದರೂ ಕಥೆ ಇಷ್ಟವಾಗದಿದ್ದರೆ ತಿರಸ್ಕರಿಸಿದ್ದಾರೆ. ತೆಲುಗು ಚಿತ್ರರಂಗದಲ್ಲಿ ಇದುವರೆಗೆ ಅತಿರೇಕದ ದೃಶ್ಯಗಳಲ್ಲಿ ನಟಿಸದ ನಟಿ ಯಾರು ಎಂದರೆ ಸಾಯಿ ಪಲ್ಲವಿ ಹೆಸರೇ ಮೊದಲು ನೆನಪಿಗೆ ಬರುತ್ತದೆ.

ಉತ್ತಮ ಕಥೆಗಳನ್ನು ಆಯ್ಕೆ ಮಾಡಿಕೊಂಡು ಸಾಯಿ ಪಲ್ಲವಿ ಯಶಸ್ವಿಯಾಗಿ ಮುನ್ನಡೆಯುತ್ತಿದ್ದಾರೆ. ಬಾಲಿವುಡ್‌ನಲ್ಲಿ ರಾಮಾಯಣ ಚಿತ್ರದಲ್ಲಿ ಸೀತೆಯಾಗಿ ನಟಿಸುತ್ತಿದ್ದಾರೆ. ಸೀತೆ ಪಾತ್ರ ಮಾಡುತ್ತಿದ್ದಾರೆ, ಆದರೆ ಮದುವೆ ಯಾವಾಗ ಎಂದು ಎಲ್ಲರೂ ಕೇಳುತ್ತಿದ್ದಾರೆ. ಸಾಯಿ ಪಲ್ಲವಿಗೆ ಮದುವೆಯಾಗಲು ಒತ್ತಾಯಿಸುತ್ತಿದ್ದಾರಂತೆ. ಯಾರು ಒತ್ತಾಯಿಸುತ್ತಿದ್ದಾರೆ?. ಸಂದರ್ಶನವೊಂದರಲ್ಲಿ ಸಾಯಿ ಪಲ್ಲವಿ ತಮ್ಮ ಮದುವೆಯ ಬಗ್ಗೆ ಮಾತನಾಡಿದ್ದಾರೆ. ತಮ್ಮ ಮದುವೆಯನ್ನು ತಮ್ಮ ಹೆತ್ತವರೇ ನೋಡಿಕೊಳ್ಳುತ್ತಾರೆ ಎಂದಿದ್ದಾರೆ. ಕೊರೊನಾ ಸಮಯದಲ್ಲಿ ಮನೆಯಲ್ಲಿದ್ದಾಗ ಹೆತ್ತವರು ಮದುವೆಯಾಗಲು ತುಂಬಾ ಒತ್ತಾಯಿಸಿದ್ದರು ಎಂದು ಹೇಳಿದ್ದಾರೆ.

ಸಾಯಿ ಪಲ್ಲವಿಯ ಎಲ್ಲಾ ಸೋದರಿಯರಿಗೂ ಮದುವೆಯಾಗಿದೆ. ಸಾಯಿ ಪಲ್ಲವಿಗೆ ಇನ್ನೂ ಮದುವೆಯಾಗಿಲ್ಲ. ಕೊರೊನಾ ಒಳ್ಳೆಯ ಸಮಯ ಎಂದು ಮದುವೆಯಾಗಲು ಒತ್ತಾಯಿಸಿದ್ದರಂತೆ. ಆಗ ತಾನು ಇನ್ನೂ ಬಯಸಿದ್ದನ್ನು ಸಾಧಿಸಿಲ್ಲ, ಈಗ ಹೇಗೆ ಮದುವೆಯಾಗಲಿ ಎಂದು ವಾದಿಸಿದರಂತೆ. ಕೊರೊನಾ ಮುಗಿಯುವವರೆಗೂ ಈ ಒತ್ತಡ ತಪ್ಪಲಿಲ್ಲವಂತೆ. ನಂತರ ಚಿತ್ರಗಳ ಚಿತ್ರೀಕರಣದಲ್ಲಿ ಬ್ಯೂಸಿಯಾಗಿದ್ದರಿಂದ ಮದುವೆಯ ಪ್ರಸ್ತಾಪ ಬರಲಿಲ್ಲವಂತೆ. ತನ್ನ ಗುರಿ ತಲುಪುವವರೆಗೂ ಮದುವೆಯಾಗುವುದಿಲ್ಲ, ಮದುವೆಯಾದರೆ ಹೆತ್ತವರು ನೋಡಿದ ಹುಡುಗನನ್ನೇ ಮದುವೆಯಾಗುತ್ತೇನೆ ಎಂದಿದ್ದಾರೆ. ಕೀರ್ತಿ ಸುರೇಶ್ ಮದುವೆಯಾದ ನಂತರ ಸಾಯಿ ಪಲ್ಲವಿ ಮೇಲೆ ಮತ್ತೆ ಮದುವೆ ಒತ್ತಡ ಹೆಚ್ಚಾಗಬಹುದು ಎಂದು ಅಭಿಮಾನಿಗಳು ಭಾವಿಸುತ್ತಿದ್ದಾರೆ.

# ದೇವರ ಪ್ರಸಾದ ಹಿಡಿದ ಫೋಟೋ ಹಂಚಿಕೊಂಡ ವಿಜಯಲಕ್ಷ್ಮಿ



ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್ ಸೇರಿ 7 ಮಂದಿಗೆ ಹೈಕೋರ್ಟ್ ಜಾಮೀನು ಮಂಜೂರು ಮಾಡಿದೆ. ಈ ಬೆನ್ನಲ್ಲೇ ದರ್ಶನ್ ಅಭಿಮಾನಿಗಳು ಸಂಭ್ರಮಿಸುತ್ತಿದ್ದಾರೆ. ಇದೀಗ ದರ್ಶನ್ ಪತ್ನಿ ಕೂಡ ರಿಯಾಕ್ಟ್ ಮಾಡಿದ್ದಾರೆ. ದೇವಸ್ಥಾನದಲ್ಲಿ ದೇವರ ಹೂ ಪ್ರಸಾದ ಹಿಡಿದ ಫೋಟೋ ಪೋಸ್ಟ್ ಮಾಡಿ ಖುಷಿ ವ್ಯಕ್ತಪಡಿಸಿದ್ದಾರೆ.

ದರ್ಶನ್‌ಗೆ ಜಾಮೀನು ಸಿಕ್ಕ ಬೆನ್ನಲ್ಲೇ ವಿಜಯಲಕ್ಷ್ಮಿ ಸೋಶಿಯಲ್ ಮೀಡಿಯಾದಲ್ಲಿ ಫುಲ್ ಆಕ್ಟೀವ್ ಆಗಿದ್ದಾರೆ. ದೇವಸ್ಥಾನದಲ್ಲಿ ದೇವರ ಹೂ ಪ್ರಸಾದ ಹಿಡಿದ ಫೋಟೋ ವಿಜಯಲಕ್ಷ್ಮಿ ಇನ್ಸ್ಟಾಗ್ರಾಂ ಪೋಸ್ಟ್ ಮಾಡಿದ್ದಾರೆ. ದೇವರಿಗೆ ಪ್ರಾರ್ಥನೆ ಫಲಿಸಿತು ಎಂಬ ಅರ್ಥದಲ್ಲಿ ಫೋಟೋ ಹಂಚಿಕೊಂಡಿದ್ದಾರೆ.

# ಬಿಗ್ ಬಾಸ್ ನಿಯಮ ಮುರಿಯುತ್ತೇನೆ

ಮೂರನೇ ಬಾರಿಗೆ ಚೈತ್ರಾ ಕುಂದಾಪುರ ಅವರು ಬಿಗ್ ಬಾಸ್ ಮನೆಯಲ್ಲಿ ಜೈಲು ಸೇರಿದ್ದಾರೆ. ಅವರ ಆಟ ಕಳಪೆ ಆಗಿದೆ ಎಂಬ ಅಭಿಪ್ರಾಯ ಬೇರೆ ಸ್ಪರ್ಧಿಗಳಿಂದ ಬಂದಿದೆ. ಕೇವಲ ಮಾತಿನ ಬಲದಿಂದ ಎಲ್ಲರನ್ನೂ ಗೆಲ್ಲಬಹುದು ಎಂದುಕೊಂಡಿರುವ ಚೈತ್ರಾ ಅವರ ತಂತ್ರಗಾರಿಕೆ ಸರಿಯಾಗಿ ವರ್ಕ್ ಆಗುತ್ತಿಲ್ಲ. ಆ ಕಾರಣದಿಂದಲೇ ಅವರನ್ನು ಪದೇಪದೇ ಕಳಪೆ ಸ್ಥಾನಕ್ಕೆ ತಂದು ಕೂರಿಸಲಾಗುತ್ತಿದೆ. ಈ ರೀತಿ ಕಳಪೆ ಪಟ್ಟ ಸಿಕ್ಕಾಗ ಚೈತ್ರಾ ಇನ್ನೂ ಜೋರಾಗಿ ಜಗಳ ಮಾಡುತ್ತಾರೆ. ಡಿಸೆಂಬರ್ 13ರ ಸಂಚಿಕೆಯಲ್ಲಿ ಕೂಡ ಅದೇ ರೀತಿ ಆಗಿದೆ.



ಈ ವಾರ ಯಾರು ಕಳಪೆ ಯಾರು ಉತ್ತಮ ಎಂಬುದನ್ನು ನಿರ್ಧರಿಸುವಾಗ ಮಾತಿನ ಚಕಮಕಿ ನಡೆದಿದೆ. ಈ ವಾರ ತಾವು ಕಳಪೆ ಆಗಬಾರದು ಎಂದು ಚೈತ್ರಾ ಅವರು ತುಂಬ ಪ್ರಯತ್ನಿಸಿದ್ದರು. ಆದರೆ ಅವರಿಗೆ ಈ ವಾರ ಕೂಡ ಕಳಪೆ ಪಟ್ಟದಿಂದ ತಪ್ಪಿಸಿಕೊಳ್ಳಲು ಸಾಧ್ಯವಾಗಿಲ್ಲ. ಹನುಮಂತ, ತ್ರಿವಿಕ್ರಮ್, ಮಂಜು ಮತ್ತು ಭವ್ಯಾ ಅವರು ಚೈತ್ರಾಗೆ ಕಳಪೆ ನೀಡಿದ್ದಾರೆ. ಆದ್ದರಿಂದ ಚೈತ್ರಾ ಜೈಲು ಸೇರುವುದು ಅನಿವಾರ್ಯ ಆಯಿತು.

ಚೈತ್ರಾ ರೀತಿಯತೇ ತ್ರಿವಿಕ್ರಮ್ ಅವರಿಗೆ ನಾಲ್ಕು ಜನರಿಂದ ಕಳಪೆ ಎಂಬ ಅಭಿಪ್ರಾಯ ಬಂತು. ಹಾಗಾಗಿ ಚೈತ್ರಾ ಜೊತೆ ತ್ರಿವಿಕ್ರಮ್ ಕೂಡ ಜೈಲು ಸೇರಿದರು. ಇಬ್ಬರಿಗೂ ಪರಸ್ಪರ ಕಂಡರೆ ಆಗುವುದಿಲ್ಲ. ಆದರೆ ಜೈಲಿನ ಕೋಣೆಯನ್ನು ಹಂಚಿಕೊಳ್ಳುವ ಅನಿವಾರ್ಯ ಸಂದರ್ಭ ಎದುರಾಯಿತು. ಚೈತ್ರಾ ಮತ್ತು ತ್ರಿವಿಕ್ರಮ್ ಜೈಲಿಗೆ ಹೋದಾಗ ಇನ್ನುಳಿದ ಸದಸ್ಯರು ಬಂದು ಅಲ್ಲಿ ಮಾತನಾಡುತ್ತಿದ್ದರು. ಅದರಿಂದ ಚೈತ್ರಾ ಅವರಿಗೆ ಕಿರಿಕಿರಿ ಆಯಿತು.

ಬಿಗ್ ಬಾಸ್ ಮನೆಯ ನಿಯಮದ ಪ್ರಕಾರ ಲೈಟ್ ಆಫ್ ಆಗುವುದಕ್ಕೂ ಮುನ್ನ ಯಾರೂ ಕೂಡ ಮಲಗುವಂತಿಲ್ಲ. ಆದರೆ ಚೈತ್ರಾ ಅವರು ಜೈಲಿನಲ್ಲಿ ಮಲಗಿದ್ದಾರೆ. ಅದನ್ನು ಕ್ಯಾಪ್ಟನ್ ಸುರೇಶ್ ಅವರು ಪ್ರಶ್ನೆ ಮಾಡಿದ್ದಕ್ಕೆ, 'ನಾನು ಬಿಗ್ ಬಾಸ್ ಮನೆಯ ಎಲ್ಲ ನಿಯಮ ಮುರಿಯುತ್ತೇನೆ' ಎಂದು ಚೈತ್ರಾ ಉದ್ಧಟತನ ತೋರಿದ್ದಾರೆ. ಅಲ್ಲದೇ, ಶಿಕ್ಷೆ ಮುಗಿಯುವುದಕ್ಕೂ ಮುನ್ನ ಅವರು ಜೈಲಿನಿಂದ ಹೊರಗೆ ಬರಲು ಪ್ರಯತ್ನಿಸಿದ್ದಾರೆ ಎಂಬ ರೀತಿಯಲ್ಲಿ ಡಿ.14ರ ಸಂಚಿಕೆಯ ಪ್ರೋಮೋ ಕೂಡ ತೋರಿಸಲಾಗಿದೆ.

## ಭಾರತದ ಗುಕೇಶ್ ವಿಶ್ವ ಚೆಸ್ ಚಾಂಪಿಯನ್

# 18ನೇ ವಯಸ್ಸಿಗೆ ಸಾಧನೆ



**ಸಿಂಗಾಪುರ:** ಇಲ್ಲಿ ನಡೆದ ರೋಚಕ ಹಣಾಹಣಿಯ 14ನೇ ಮತ್ತು ಅಂತಿಮ ಪಂದ್ಯದಲ್ಲಿ ಗೆದ್ದ ಭಾರತದ ಗುಕೇಶ್ ವಿಶ್ವ ಚೆಸ್ ಚಾಂಪಿಯನ್ ಆಗಿ ಹೊರಹೊಮ್ಮಿದ್ದಾರೆ. ಚೀನಾದ ಪ್ರಶಸ್ತಿ ವಿಜೇತ ಡಿಂಗ್ ಲಿರೆನ್ ಅವರನ್ನು ಸೋಲಿಸುವ ಮೂಲಕ ಭಾರತದ ಗ್ರ್ಯಾಂಡ್‌ಮಾಸ್ಟರ್ ಡಿ ಗುಕೇಶ್ ಗುರುವಾರ 18 ನೇ ವಯಸ್ಸಿನಲ್ಲಿ ಕಿರಿಯ ವಿಶ್ವ ಚೆಸ್ ಚಾಂಪಿಯನ್ ಆಗಿದ್ದಾರೆ.

14 ಪಂದ್ಯಗಳ ಕೊನೆಯ ಕ್ಲಾಸಿಕಲ್ ಗೇಮ್ ಅನ್ನು ಗೆದ್ದ ನಂತರ ಲಿರೆನ್ ಅವರ 6.5 ಗೆ ಹೋಲಿಸಿದರೆ ಗುಕೇಶ್ 7.5 ಅಂಕಗಳನ್ನು ಗಳಿಸಿದರು.

ರಷ್ಯಾದ ದಂತಕಥೆ ಗ್ಯಾರಿ ಕಾಸ್ಪರೋವ್ ಅವರು 1985 ರಲ್ಲಿ ಅನಾಟೊಲಿ ಕಾರ್ಪೋವ್ ಅವರನ್ನು ಸೋಲಿಸುವ ಮೂಲಕ 22 ನೇ ವಯಸ್ಸಿನಲ್ಲಿ ಪ್ರಶಸ್ತಿಯನ್ನು ಗೆದ್ದ ಕಿರಿಯ ವಿಶ್ವ ಚೆಸ್ ಚಾಂಪಿಯನ್ ಎಂಬ ದಾಖಲೆಯನ್ನು ಬರೆದಿದ್ದರು. ಈಗ ಆ ದಾಖಲೆಯನ್ನು ಗುಕೇಶ್ ಉಡೀಸ್ ಮಾಡಿದ್ದಾರೆ.

ಈ ವರ್ಷದ ಆರಂಭದಲ್ಲಿ ಕ್ಯಾಂಡಿಡೇಟ್ಸ್ ಪಂದ್ಯಾವಳಿಯನ್ನು ಗೆದ್ದುಕೊಂಡ ಗುಕೇಶ್ ಅವರು ವಿಶ್ವ ಕಿರೀಟಕ್ಕೆ ಅತ್ಯಂತ ಕಿರಿಯ ಚಾಲೆಂಜರ್ ಆಗಿ ಪಂದ್ಯಕ್ಕೆ ಪ್ರವೇಶ ಪಡೆದಿದ್ದರು.

ದಂತಕಥೆ ವಿಶ್ವನಾಥನ್ ಆನಂದ್ ನಂತರ ವಿಶ್ವ ಪ್ರಶಸ್ತಿ ಪಡೆದ ಎರಡನೇ ಭಾರತೀಯರಾಗಿದ್ದಾರೆ. ಐದು ಬಾರಿ ವಿಶ್ವ ಚಾಂಪಿಯನ್ ಆಗಿರುವ ಆನಂದ್ ಕೊನೆಯ ಬಾರಿಗೆ 2013ರಲ್ಲಿ ಕಿರೀಟ ಗೆದ್ದಿದ್ದರು.

## ಷರತ್ತು ವಿಧಿಸಿ ಹೈಬ್ರಿಡ್ ಮಾದರಿಗೆ ಪಾಕ್ ಒಪ್ಪಿಗೆ

# ದುಬೈನಲ್ಲಿ ಭಾರತದ ಪಂದ್ಯ

ಅಂತಾರಾಷ್ಟ್ರೀಯ ಕ್ರಿಕೆಟ್ ಕೌನ್ಸಿಲ್ 2025 ರ ಚಾಂಪಿಯನ್ಸ್ ಟ್ರೋಫಿಗಾಗಿ ಹೈಬ್ರಿಡ್ ಮಾದರಿಯನ್ನು ಅನುಮೋದಿಸಿದೆ. ಪಿಸಿಬಿ ಮತ್ತು ಬಿಸಿಸಿಐ ನಡುವಿನ ಒಪ್ಪಂದದ ನಂತರ ಪಾಕಿಸ್ತಾನ ಮತ್ತು ದುಬೈನಲ್ಲಿ ಪಂದ್ಯಗಳು ನಡೆಯಲಿದೆ.

ಈ ಒಪ್ಪಂದದ ಭಾಗವಾಗಿ 2026ರ ಟಿ20 ಟೂರ್ನಿಗೆ ಭಾರತಕ್ಕೆ ಪಾಕ್ ತಂಡ ಆಗಮಿಸುವುದಿಲ್ಲ. ಪಾಕಿಸ್ತಾನದ ಪಂದ್ಯಗಳು ಕೊಲಂಬೋದಲ್ಲಿ ನಡೆಯಲಿದೆ. ಈ ವ್ಯವಸ್ಥೆಗಾಗಿ ಪಿಸಿಬಿ ಯಾವುದೇ ಹಣಕಾಸಿನ ಪರಿಹಾರವನ್ನು ಪಡೆಯುವುದಿಲ್ಲವಾದರೂ 2027 ರ ನಂತರದ ಐಸಿಸಿ ಮಹಿಳಾ ಪಂದ್ಯಾವಳಿಯ ಹಕ್ಕುಗಳನ್ನು ಪಡೆದುಕೊಂಡಿದೆ.

ಒಪ್ಪಂದ ಅನ್ವಯ ಪಾಕಿಸ್ತಾನದ ಮೂರು ಸ್ಥಳಗಳಲ್ಲಿ ಪಂದ್ಯ ನಡೆದರೆ ಭಾರತದ ಎಲ್ಲಾ ಪಂದ್ಯಗಳು ದುಬೈನಲ್ಲಿ ನಡೆಯಲಿದೆ. ಭಾರತ ಒಂದು ವೇಳೆ ಸೆಮಿ ಫೈನಲ್, ಫೈನಲ್ ಪ್ರವೇಶಿಸಿದರೆ ಆ ಪಂದ್ಯಗಳು ದುಬೈನಲ್ಲಿ ನಡೆಯಲಿದೆ. ಒಂದು ವೇಳೆ ಲೀಗ್ ಹಂತದಲ್ಲೇ ಭಾರತ ಟೂರ್ನಿಯಿಂದ ಹೊರಬಿದ್ದರೆ ಪಾಕಿಸ್ತಾನದ ಲಾಹೋರ್ ಮತ್ತು ರಾವಲ್ಪಿಂಡಿಯಲ್ಲಿ ಸೆಮಿಫೈನಲ್, ಫೈನಲ್ ಪಂದ್ಯ ನಡೆಯಲಿದೆ.



ಭಾರತ ಹೈಬ್ರಿಡ್ ಮಾದರಿ ಆಡುವಂತೆ ಪ್ರಸ್ತಾಪ ಇಟ್ಟಿತ್ತು. ಆದರೆ ಪಾಕಿಸ್ತಾನ ಈ ಪ್ರಸ್ತಾಪವನ್ನು ತಿರಸ್ಕರಿಸಿತ್ತು. 2023ರಲ್ಲಿ ನಡೆದ ವಿಶ್ವಕಪ್ ಕ್ರಿಕೆಟ್‌ಗೆ ಭಾರತ ಪ್ರವಾಸವನ್ನು ನಾವು ಕೈಗೊಂಡಿದ್ದೇವೆ. ಹೀಗಾಗಿ ಭಾರತ ನಮ್ಮ ದೇಶಕ್ಕೆ ಆಗಮಿಸಬೇಕೆಂದು ಪಟ್ಟು ಹಿಡಿದಿತ್ತು. ಅಷ್ಟೇ ಅಲ್ಲದೇ ಯಾವುದೇ ಕಾರಣಕ್ಕೂ ಹೈಬ್ರಿಡ್ ಪಂದ್ಯ ನಡೆಸಲು ಒಪ್ಪಿಗೆ ಸೂಚಿಸುವುದಿಲ್ಲ ಎಂದು ಪಟ್ಟು ಹಿಡಿದಿತ್ತು. ಕೊನೆಗೆ ಭಾರತದ ವಾದಕ್ಕೆ ಪಿಸಿಬಿ ಮಣಿದಿದ್ದು ಹೈಬ್ರಿಡ್ ಮಾದರಿ ಟೂರ್ನಿಗೆ ಒಪ್ಪಿಗೆ ಸೂಚಿಸಿದೆ.

ಭಾರತ ತಂಡವು 2005-2006ರಲ್ಲಿ ರಾಹುಲ್ ದ್ರಾವಿಡ್ ನಾಯಕತ್ವದಲ್ಲಿ ಪಾಕಿಸ್ತಾನಕ್ಕೆ ತನ್ನ ಕೊನೆಯ ಪ್ರವಾಸ ಕೈಗೊಂಡಿತ್ತು. ಈ ಪಂದ್ಯದಲ್ಲಿ ಇತ್ತಂಡಗಳು 3 ಟೆಸ್ಟ್ ಹಾಗೂ 5 ಏಕದಿನ ಪಂದ್ಯಗಳನ್ನಾಡಿದ್ದವು. ನಂತರ ರಾಜತಾಂತ್ರಿಕ ಕಾರಣಗಳಿಂದಾಗಿ ಉಭಯ ತಂಡಗಳ ನಡುವೆ ಯಾವುದೇ ದ್ವಿಪಕ್ಷೀಯ ಸರಣಿ ನಡೆದಿಲ್ಲ. ಐಸಿಸಿ ಟೂರ್ನಿ ಅಥವಾ ಏಷ್ಯಾ ಕಪ್ ಟೂರ್ನಿಗಳಲ್ಲಿ ಮಾತ್ರವೇ ಪರಸ್ಪರ ಮುಖಾಮುಖಿಯಾಗುತ್ತಿವೆ.

# ಕೇಂದ್ರ ಸಚಿವ ಪ್ರಹ್ಲಾದ್ ಜೋಶಿಯಿಂದ ಕನ್ನಡಿಗರಿಗೆ ದ್ರೋಹ

## ರಾಜ್ಯಸಭೆ ಸಂಸದ ಜಿ.ಸಿ ಚಂದ್ರಶೇಖರ್ ಆಕ್ರೋಶ

**ನವದೆಹಲಿ:** ರಾಜ್ಯದಿಂದ ಆಯ್ಕೆಯಾಗಿ ಕೇಂದ್ರ ಸಚಿವರಾಗಿರುವ ಪ್ರಹ್ಲಾದ್ ಜೋಶಿ ಕನ್ನಡಿಗರಿಗೆ ದ್ರೋಹ ಮಾಡುತ್ತಿದ್ದಾರೆ. ದೆಹಲಿಯಲ್ಲಿ ನರೇಂದ್ರ ಮೋದಿ, ಅಮಿತ್ ಶಾ ಅವರ ಓಲೈಸುವ ರಾಜಕೀಯ ಮಾಡುತ್ತಿದ್ದು, ರಾಜ್ಯಕ್ಕೆ ಅವರ ಕೊಡುಗೆ ಶೂನ್ಯ ಎಂದು ರಾಜ್ಯಸಭೆ ಸಂಸದ ಜಿ.ಸಿ ಚಂದ್ರಶೇಖರ್ ವಾಗ್ದಾಳಿ ನಡೆಸಿದ್ದಾರೆ.



ದೆಹಲಿಯಲ್ಲಿ ರಾಜ್ಯಸಭೆ ಸಭಾಪತಿ ಜಗದೀಪ್ ಧನ್ಕರ್ ವಿರುದ್ಧ ಅವಿಶ್ವಾಸ ನಿರ್ಣಯ ಮಂಡನೆ ವಿಚಾರಕ್ಕೆ ಸಂಬಂಧಿಸಿದಂತೆ ಮಾತನಾಡಿದ ಅವರು, ಆಡಳಿತ ಪಕ್ಷಕ್ಕಿಂತ ಕಲಾಪ ವಿರೋಧ ಪಕ್ಷಕ್ಕೆ ಮುಖ್ಯ. ಜನಪರ ಧ್ವನಿ ಎತ್ತಲು ಕಲಾಪ ನಮಗೆ ವೇದಿಕೆ. ಆದರೆ, ನಮಗೆ ಇಲ್ಲಿ ಅವಕಾಶ ಸಿಗುತ್ತಿಲ್ಲ. ಧನ್ಕರ್ ಅವರ ಅವಧಿಯಲ್ಲಿ ಹೆಚ್ಚು ಕಾಲ ಕಲಾಪ ಮುಂದೂಡಿಕೆಯಾಗಿದೆ.

ವೆಂಕಯ್ಯನಾಯ್ಡು ಅವರು ಹೀಗೆ ತಾರತಮ್ಯ ಮಾಡಿರಲಿಲ್ಲ. ಅವರು ನ್ಯಾಯಾಧೀಶರ ರೀತಿ ವರ್ತಿಸಬೇಕು. ಆದರೆ, ಅವರು ಆಡಳಿತ ಪಕ್ಷಕ್ಕೆ ಹೆಚ್ಚು ಆದ್ಯತೆ ನೀಡುತ್ತಿದ್ದಾರೆ. ವಿರೋಧ ಪಕ್ಷದ ನಾಯಕರಿಗೆ ಮೈಕ್ ಆನ್ ಮಾಡಲ್ಲ, ಕ್ಯಾಮೆರಾದಲ್ಲಿ ತೋರಿಸಲ್ಲ. ಎಲ್ಲ ಸದಸ್ಯರಿಗೂ ತಮ್ಮದೇ ಆದ ಗೌರವ ಇರುತ್ತೆ. ಎಲ್ಲರಿಗೂ ಇಲ್ಲಿ ಗೌರವ ಕೊಡಬೇಕು. ನಮ್ಮದು ಬಹುಮತ ಇಲ್ಲ ಅಂತಾ ಅವಿಶ್ವಾಸ ಮಂಡನೆ ಮಾಡಬಾರದು ಅಂತಲ್ಲ. ಜನ ವಿರೋಧಿ ನೀತಿಗಳನ್ನು ಖಂಡಿಸಲು ನಾನು ನಮ್ಮ ಜವಾಬ್ದಾರಿ ನಿಭಾಯಿಸಬೇಕು. ಸಭಾಪತಿ ಅವರಿಗೆ ಎಚ್ಚರಿಕೆ ನೀಡಲು ನಾವು ಇದನ್ನು ಮಾಡಿದ್ದೇವೆ ಎಂದು ಸಮರ್ಥಿಸಿಕೊಂಡಿದ್ದಾರೆ.

ಕಲಾಪಗಳು ಮುಂದೂಡಿಕೆ ಬಗ್ಗೆ ನಮಗೂ ಬೇಸರ ಇದೆ. ಬಜೆಟ್ ತಯಾರಾಗುವ ಸಮಯ ಇದು. ಈ ಸಮಯದಲ್ಲಿ ಕರ್ನಾಟಕದ ಬಗ್ಗೆ ಗಮನ ಸೆಳೆಯಬೇಕು. ಆದರೆ, ರಾಜ್ಯದ ಕೇಂದ್ರ ಸಚಿವರು, ಬಿಜೆಪಿ ಸಂಸದರು ಮಾತನಾಡುತ್ತಿಲ್ಲ. ನೀರಾವರಿ ಯೋಜನೆ ಸೇರಿ ಪ್ರಮುಖ ಯೋಜನೆ ಬಗ್ಗೆ ಮಾತನಾಡುತ್ತಿಲ್ಲ. ಪಕ್ಷಪಾತ ಬಿಟ್ಟು ರಾಜ್ಯಕ್ಕೆ ಆಗುವ ಅನ್ಯಾಯ ಖಂಡಿಸಬೇಕಿದೆ. ನಮಗೆ ಮಾತನಾಡಲು ಬಿಡುತ್ತಿಲ್ಲ. ಆಡಳಿತದಲ್ಲಿರುವ ಬಿಜೆಪಿ ನಾಯಕರಾದರೂ ರಾಜ್ಯದ ಬಗ್ಗೆ ಮಾತನಾಡಬೇಕು ಅವರು ಮಾತನಾಡುತ್ತಿಲ್ಲ.

ಪ್ರಹ್ಲಾದ್ ಜೋಶಿ ಹಿರಿಯ ಸಚಿವರಾಗಿದ್ದಾರೆ. ಆದರೆ ಅವರು ಮೋದಿ, ಅಮಿತ್ ಶಾ ಖುಷಿಪಡಿಸುವ ಕೆಲಸ ಮಾಡುತ್ತಿದ್ದಾರೆ. ಮಹದಾಯಿಯಿಂದ ಎಷ್ಟು ಜನಕ್ಕೆ ಅನುಕೂಲ, ಅದನ್ನು ಮಾಡುವ ಪ್ರಯತ್ನ ಮಾಡುತ್ತಿಲ್ಲ. ಕೇವಲ ಅಲ್ಲಿಂದ ಇಲ್ಲಿಗೆ ತಂದಿಡುವ ಕೆಲಸ ಮಾಡುತ್ತಿದ್ದಾರೆ. ಓಲೈಕೆ ರಾಜಕೀಯ ಮಾಡುತ್ತಿದ್ದಾರೆ. ಹಿರಿಯ ಸಚಿವರಾಗಿ ಪ್ರಹ್ಲಾದ್ ಜೋಶಿ ಕೊಡುಗೆ ಶೂನ್ಯ. ಅವರಿಂದ ಕನ್ನಡಿಗರಿಗೆ ದ್ರೋಹವಾಗುತ್ತಿದೆ ಎಂದು ಹೇಳಿದ್ದಾರೆ.

ಒಂದು ದೇಶ, ಒಂದು ಚುನಾವಣೆ ಬಗ್ಗೆ ಮಾತನಾಡಿ, ಇದು ಸರಿಯಾದ ಚಿಂತನೆಯಲ್ಲ ಎಂದರು. ಬಿಜೆಪಿ ಅಧಿಕಾರಕ್ಕೆ ಬಂದ ಬಳಿಕ ರಾಜ್ಯದ ಅಧಿಕಾರ ಹತ್ತಿಕ್ಕಲು ಪ್ರಯತ್ನಿಸುತ್ತಿದೆ. ಸಂವಿಧಾನ ರಾಜ್ಯಕ್ಕೆ ನೀಡಿದ ಸ್ವಾತಂತ್ರ್ಯ ಕಿತ್ತುಕೊಳ್ಳಿದೆ. ರಾಜ್ಯಗಳನ್ನು ತನ್ನ ಗುಲಾಮಗಿರಿ ವ್ಯಾಪ್ತಿಗೆ ತರುವ ಪ್ರಯತ್ನ ಮಾಡುತ್ತಿದೆ. ದೇಶದಲ್ಲಿ ಇದನ್ನು ಮಾಡುವುದು ಸುಲಭ ಅಲ್ಲ. ಪ್ರತಿ ರಾಜ್ಯಕ್ಕೂ ತನ್ನದೇ ಆದ ವೈವಿಧ್ಯತೆ ಇದೆ. ಅದಕ್ಕೆ ತಕ್ಕಂತೆ ಚುನಾವಣೆ ಮಾಡಬೇಕು.

ಮೊದಲು ಇದನ್ನು ಸಾರ್ವಜನಿಕ ಚರ್ಚೆಗೆ ಬಿಡಬೇಕು. ಜನರು, ವಿರೋಧ ಪಕ್ಷಗಳು ಒಮ್ಮತಕ್ಕೆ ಬರಬೇಕು. ಬಳಿಕ ಕಮಿಟಿ ಮಾಡಿ, ವರದಿ ಮಾಡಿ ಆಮೇಲೆ ಮಂಡಿಸಬೇಕು. ಹಣಕಾಸು ಉಳಿಬಹುದು ಎನ್ನುವುದು ನಾನು ಒಪ್ಪುವೆ. ಆದರೆ ಇಂದು ಚುನಾವಣೆಗೆ ಎಷ್ಟು ವ್ಯಯವಾಗುತ್ತಿದೆ ಅದನ್ನು ನಿಲ್ಲಿಸಲು ಯಾಕೆ ಕ್ರಮ ತೆಗೆದುಕೊಳ್ಳಬಾರದು? ಅಭ್ಯರ್ಥಿ ಬದಲು ಸರ್ಕಾರ ಹಣ ವ್ಯಯ ಮಾಡಲಿ. ಪ್ರಧಾನಿಯೂ ಎಷ್ಟು ಖರ್ಚು ಮಾಡುತ್ತಾರೆ ಎಂದು ಎಲ್ಲ ಜನರಿಗೆ ಗೊತ್ತಿದೆ. ಈ ಚುನಾವಣಾ ವ್ಯವಸ್ಥೆಯಲ್ಲಿ ಹಣಕಾಸು ಬಳಕೆ ನಿರ್ಬಂಧಿಸಿ. ಆ ಮೇಲೆ ಮುಂದಿನ ಹಂತಕ್ಕೆ ಬರಲಿ ಎಂದು ತಿಳಿಸಿದ್ದಾರೆ.

# ದೇವದಾಸಿಯರಿಗೆ ಗೃಹಲಕ್ಷ್ಮೀ ಯೋಜನೆ ಅನ್ವಯ

**ಬೆಳಗಾವಿ:** ರಾಜ್ಯದಲ್ಲಿನ ದೇವದಾಸಿ ಮಹಿಳೆಯರಿಗೆ ಕೂಡಾ ಗೃಹ ಲಕ್ಷ್ಮೀ ಯೋಜನೆಯ ನೆರವು ದೊರೆಯುತ್ತಿದ್ದು, ಸೌಲಭ್ಯ ದೊರೆಯದ ಬಗ್ಗೆ ಯಾವುದೇ ದೂರು ಸಲ್ಲಿಕೆಯಾದರೆ ಕ್ರಮ ತೆಗೆದುಕೊಳ್ಳಲಾಗುತ್ತದೆ ಅಂತ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ತಿಳಿಸಿದ್ದಾರೆ.



ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿ ಸದಸ್ಯೆ ಹೇಮಲತಾ ನಾಯಕ್ ಪ್ರಶ್ನೆ ಕೇಳಿದ್ರು.ಕೊಪ್ಪಳದಲ್ಲಿ ಸರಿಯಾಗಿ ದೇವದಾಸಿಯರಿಗೆ ಮಾಶಾಸನ ಸಿಗುತ್ತಿಲ್ಲ. ದೇವದಾಸಿಯರ ಸರ್ವೆ ಸರಿಯಾಗಿ ಆಗಿಲ್ಲ. ದೇವದಾಸಿಯರ ಮಾಶಾಸನ 5 ಸಾವಿರಕ್ಕೆ ಹೆಚ್ಚಳ ಮಾಡಬೇಕು.ಗೃಹಲಕ್ಷ್ಮಿ ಯೋಜನೆ ದೇವದಾಸಿಯರಿಗೆ ನೀಡಬೇಕು ಅಂತ ಒತ್ತಾಯ ಮಾಡಿದ್ರು.

ಇದಕ್ಕೆ ಸಚಿವ ಲಕ್ಷ್ಮಿ ಹೆಬ್ಬಾಳ್ಕರ್ ಉತ್ತರ ನೀಡಿ, ದೇವದಾಸಿಯರಿಗೆ ಸರಿಯಾಗಿ ಮಾಶಾಸನ ಡಿಬಿಟಿ ಮೂಲಕ ಹಾಕಲಾಗ್ತಿದೆ.ಎಲ್ಲೂ ಕೂಡಾ ಮಾಶಾಸನ ಸೋರಿಕೆ ಆಗ್ತಿಲ್ಲ. ಕೊಪ್ಪಳ ಜಿಲ್ಲೆಯಲ್ಲಿ ದೇವದಾಸಿಯರ ಸರ್ವೆ ಸರಿಯಾಗಿ ಆಗಿಲ್ಲ ಅನ್ನೋ ಬಗ್ಗೆ ಮತ್ತೊಮ್ಮೆ ಸಮೀಕ್ಷೆ ಮಾಡುತ್ತೇವೆ ಎಂದರು.

ದೇವದಾಸಿಯರಿಗೆ 2 ಸಾವಿರ ರೂ. ಮಾಶಾಸನ ಕೊಡಲಾಗುತ್ತಿದೆ. ಪ್ರತಿ ವರ್ಷ 250 ದೇವದಾಸಿಯರಿಗೆ ಒಂದು ಸಾರಿಗೆ ಪ್ರೋತ್ಸಾಹ ಧನವಾಗಿ 30 ಸಾವಿರ ನೀಡಲಾಗುತ್ತದೆ. ಈ ಹಣ ವಾಪಸ್ ಕೊಡುವ ಹಾಕಿಲ್ಲ.ದೇವದಾಸಿಯರಿಗೆ ಆರೋಗ್ಯ ತಪಾಸಣೆ ಮಾಡೋ ಕೆಲಸ ಆಗ್ತಿದೆ. ಮನೆಗಳು ಕೊಡೋ ಬಗ್ಗೆ ನಾವು ಪಟ್ಟಿ ಮಾಡಿ ವಸತಿ ಇಲಾಖೆಗೆ ಕಳಿಸುತ್ತೇವೆ. ಅವರು ಅಂತಿಮ ನಿರ್ಧಾರ ಮಾಡಬೇಕು.ಯಾರು ಅರ್ಜಿ ಹಾಕಿರುತ್ತಾರೋ ಅವರಿಗೆ ಆದ್ಯತೆ ಮೇರೆಗೆ ಮನೆ ಹಂಚಿಕೆ ಮಾಡುತ್ತದೆ.ಗೃಹಲಕ್ಷ್ಮಿ ಯೋಜನೆ ದೇವದಾಸಿಯರಿಗೆ ಕೊಡಲಾಗ್ತಿದೆ. ಯಾರಿಗಾದರೂ ಸಿಗದೇ ಇದ್ದರೆ ಮಾಹಿತಿ ಕೊಟ್ಟರೆ ಅವರಿಗೆ ಗೃಹಲಕ್ಷ್ಮಿ ಯೋಜನೆ ಕೊಡುತ್ತೇವೆ ಎಂದು ತಿಳಿಸಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com